ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 142
15–11–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 142

# ಬಿಹಾರ ಚುನಾವಣೆ : ಎನ್‌ಡಿಎಗೆ ಭರ್ಜರಿ ಬಹುಮತ

**ನವದೆಹಲಿ:** ರಾಷ್ಟ್ರ ರಾಜಕಾರಣಕ್ಕೆ ಹೊಸ ದಿಕ್ಸೂಚಿ ಎಂದೇ ಹೇಳಲಾಗಿದ್ದ ಪ್ರತಿಷ್ಠಿತ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತ ವಿರೋಧಿ ಅಲೆಯನ್ನು ಹಿಂದಿಕ್ಕಿ ಎನ್‌ಡಿಎ ಅಭೂತಪೂರ್ವ ಜನಾದೇಶ ಪಡೆದು ಮತ್ತೆ ಅಧಿಕಾರಕ್ಕೆ ಬಂದಿದೆ. ರಾಜ್ಯದ ಒಟ್ಟು 243 ವಿಧಾನಸಭಾ ಕ್ಷೇತ್ರಗಳ ಪೈಕಿ ಎನ್‌ಡಿಎ ಮೈತ್ರಿಕೂಟ 191 ಸ್ಥಾನಗಳನ್ನು ಪಡೆದು ಈ ಬಾರಿ ಭಾರೀ ಜನಾದೇಶದೊಂದಿಗೆ ಅಧಿಕಾರ ಗದ್ದುಗೆ ಹಿಡಿದಿದೆ.

ಎನ್‌ಡಿಎ ಅಬ್ಬರಕ್ಕೆ ಪ್ರತಿಪಕ್ಷಗಳು ಧೂಳಿಪಟವಾಗಿದ್ದು, ಅಧಿಕೃತ ವಿರೋಧ ಪಕ್ಷದ ಸ್ಥಾನಕ್ಕೆ ಬೇಕಾದ ಸ್ಥಾನಗಳನ್ನು ಪಡೆಯಲೂ ವಿಫಲವಾಗಿವೆ. ಈ ಹಿಂದೆ 1999ರಲ್ಲಿ ಎನ್‌ಡಿಎ ಮೈತ್ರಿಕೂಟ ದ್ವಿಶತಕ ಬಾರಿಸಿ ದಾಖಲೆ ಬರೆದಿತ್ತು. ಎಲ್ಲ ರಾಜಕೀಯ ಲೆಕ್ಕಾಚಾರಗಳನ್ನು ತಲೆಕೆಳಗೆ ಮಾಡಿ ಮತ್ತೆ ಅಷ್ಟೇ ಸ್ಥಾನಗಳನ್ನು ಪಡೆಯುವತ್ತ ದಾಪುಗಾಲಿಟ್ಟಿದೆ.

ಪ್ರತಿಪಕ್ಷಗಳ ಮೈತ್ರಿಕೂಟ ಮಹಾಘಟಬಂಧನ್ ಕೇವಲ 50 ಸ್ಥಾನಗಳನ್ನು ಪಡೆಯಲು ಶಕ್ತವಾಗಿದ್ದು, ಅಧಿಕಾರ ಹಿಡಿಯುವ ಕನಸು ನುಚ್ಚು ನೂರಾಗಿದೆ. ಮೈತ್ರಿಕೂಟದ ಮುಖ್ಯಮಂತ್ರಿ ಅಭ್ಯರ್ಥಿ ಎಂದೇ ಬಿಂಬಿತವಾಗಿದ್ದ ಆರ್‌ಜೆಡಿ ನಾಯಕ ತೇಜಸ್ವಿಯಾದವ್ ಹಾಗೂ ಮಾಜಿ ಸಿಎಂ ಲಾಲು ಪ್ರಸಾದ್ ಯಾದವ್, ಮತ್ತೋರ್ವ ಪುತ್ರ ತೇಜ್ ಪ್ರತಾಪ್ ಯಾದವ್ ಎರಡೂ ಕ್ಷೇತ್ರಗಳಲ್ಲಿ ತೀವ್ರ ಹಿನ್ನಡೆ ಅನುಭವಿಸಿದ್ದಾರೆ.

ಈ ಚುನಾವಣೆಯ ವಿಶೇಷವೆಂದರೆ ಆರ್‌ಜೆಡಿಗೆ ಈವರೆಗೂ ಬೆನ್ನೆಲುಬಾಗಿ ನಿಂತಿದ್ದ ಯಾದವರು ಈ ಬಾರಿ ಬಿಜೆಪಿ ಮತ್ತು ಜೆಡಿಯು ಬೆಂಬಲಿಸಿರುವುದು ಫಲಿತಾಂಶದಿಂದಲೇ ಸ್ಪಷ್ಟವಾಗಿದೆ.

ರಾಜ್ಯದ ಪಾಟ್ನಾ, ಮಗಧ್, ಸರಳ್, ತಿರಹಟ್, ದರ್ಬಾಂಗ, ಕೋಶಿ, ಪುರ್ನಿಯಾ, ಬಾಗಲ್ಪುರ, ಮುಂಗಾರ್ ಮತ್ತು ಸೀಮಾಂಚಲ ಸೇರಿದಂತೆ ಎಲ್ಲ ಪ್ರದೇಶಗಳಲ್ಲೂ ಎನ್‌ಡಿಎ ಇಂಡಿಯಾ ಮೈತ್ರಿಕೂಟವನ್ನು ಹಿಂದಿಕ್ಕಿ ಗೆಲುವು ಸಾಧಿಸಿದೆ.

ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮಿದ್ದು, ಸ್ಪರ್ಧಿಸಿದ್ದ 101 ಕ್ಷೇತ್ರಗಳ ಪೈಕಿ 85 ಕ್ಷೇತ್ರಗಳನ್ನು ತನ್ನ ತೆಕ್ಕೆಗೆ ಹಾಕಿಕೊಂಡಿದೆ. ಮೈತ್ರಿ ಪಕ್ಷವಾದ ಜೆಡಿಯು 75 ಕ್ಷೇತ್ರಗಳಲ್ಲಿ ಗೆದ್ದಿದೆ. ಕಳೆದ ಬಾರಿ ಕೇವಲ 45 ಸ್ಥಾನಗಳನ್ನು ನಿತೀಶ್‌ಕುಮಾರ್ ಪಕ್ಷ ಗೆದ್ದಿತ್ತು. ಇನ್ನು ಎನ್‌ಡಿಎ ಮೈತ್ರಿಕೂಟದ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ನೇತೃತ್ವದ ಎಲ್‌ಜೆಪಿ ಕೂಡ ಅಚ್ಚರಿ ಎಂಬಂತೆ ನಿರೀಕ್ಷೆ ಮೀರಿ ಗೆಲುವು ಸಾಧಿಸಿದೆ. ಸ್ಪರ್ಧಿಸಿದ್ದ 29 ಕ್ಷೇತ್ರಗಳ ಪೈಕಿ 21 ಕ್ಷೇತ್ರಗಳನ್ನು



ಎಚ್‌ಎಂ 2 ಮತ್ತಿತರರು ಒಂದು ಸ್ಥಾನಕ್ಕೆ ತೃಪ್ತಿ ಪಟ್ಟಿದ್ದಾರೆ.

ಭಾರೀ ನಿರೀಕ್ಷೆ ಮೂಡಿಸಿದ್ದ ಆರ್‌ಜೆಡಿ ಕೇವಲ 35 ಸ್ಥಾನಗಳನ್ನು ಗೆದ್ದಿದ್ದರೆ, ವೋಟ್ ಚೋರಿ ಮತ್ತು ವೋಟ್ ಅಧಿಕಾರ್ ಮೂಲಕ ಅಬ್ಬರದ ಪ್ರಚಾರ ನಡೆಸಿದ್ದ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್‌ಗಾಂಧಿ ಅವರ ಕಾಂಗ್ರೆಸ್ ಪಕ್ಷ ಕೇವಲ ಆರು ಸ್ಥಾನಗಳಿಗೆ ಮಾತ್ರ ತೃಪ್ತಿ ಪಟ್ಟುಕೊಂಡಿದ್ದು, ಒಂದಂಕಿಗೆ ಇಳಿದಿದೆ.

ಇನ್ನು ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ದೇಶಾದ್ಯಂತ ಭಾರೀ ಸದ್ದು ಮಾಡಿದ್ದ ವೋಟ್ ಚೋರಿ ಆರೋಪಕ್ಕೆ ಮತದಾರ ಅಷ್ಟೊಂದು ಪ್ರಾಮುಖ್ಯ ಕೊಟ್ಟಿಲ್ಲ. ಅಲ್ಲದೆ ವಿಶೇಷ ಮತದಾರ ಪರಿಷ್ಕರಣೆ (ಎಸ್‌ಐಆರ್) ನಡೆಸಿದ ಚುನಾವಣಾ ಆಯೋಗದ ಕ್ರಮಕ್ಕೂ ಮತದಾರ ಜೈ ಎಂದಿದ್ದು ಪ್ರತಿಪಕ್ಷಗಳ ವಿರೋಧಕ್ಕೂ ಮುಖಭಂಗವಾಗಿದೆ.

ಮೇಲ್ನೋಟಕ್ಕೆ ಈ ಚುನಾವಣೆಯಿಂದ ರಾಷ್ಟ್ರ ರಾಜಕಾರಣದಲ್ಲಿ ಹೇಳಿಕೊಳ್ಳುವಂತಹ ಯಾವುದೇ ಪರಿಣಾಮ ಬೀರುವುದಿಲ್ಲವಾದರೂ ಬಿಜೆಪಿ ನೇತೃತ್ವದ

| ಬಿಹಾರ 243/243 | ಮುನ್ನಡೆ |
|---|---|
| ಎನ್‌ಡಿಎ 201 | ಎಂಜಿಬಿ 36 |
| ಬಿಜೆಪಿ 91 | ಆರ್‌ಜೆಡಿ 26 |
| ಜೆಡಿಯು 81 | ಕಾಂಗ್ರೆಸ್ 4 |
| ಇತರರು 26 | ಇತರರು 5 |

ಎನ್‌ಡಿಎ ಮೈತ್ರಿಕೂಟ ಮತ್ತಷ್ಟು ಸುಭದ್ರವಾಗಿದ್ದು, ಮೈತ್ರಿಕೂಟ ಇಂಡಿಯಾ ಬ್ಲಾಕ್ ಭವಿಷ್ಯವೇ ಡೋಲಾಯಮಾನವಾಗಿದೆ.ಮುಂಬರುವ ತಮಿಳುನಾಡು, ಕೇರಳ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ಕಾಂಗ್ರೆಸ್ ಜೊತೆ ಪ್ರಾದೇಶಿಕ ಪಕ್ಷಗಳು ಮೈತ್ರಿ ಮಾಡಿಕೊಳ್ಳಬೇಕೆ ಎಂಬುದರ ಬಗ್ಗೆ ಮರು ಚಿಂತನೆಯನ್ನು ಮಾಡುವಂತೆ ಮಾಡಿದೆ ಈ ಫಲಿತಾಂಶ.ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಡಬಲ್ ಎಂಜಿನ್ ಸರ್ಕಾರಕ್ಕೆ ಮತದಾರ ಬಹುಪರಾಕ್ ಎಂದಿರುವುದು ಫಲಿತಾಂಶದಿಂದಲೇ ಸಾಬೀತಾಗಿದೆ. ಚುನಾವಣೆಗೂ ಮುನ್ನ ಮತದಾರರನ್ನು ಸೆಳೆಯಲು ಘೋಷಣೆ ಮಾಡಿದ್ದ ಭರಪೂರ ಗ್ಯಾರಂಟಿಗಳು ಕೂಡ ಎನ್‌ಡಿಎ ಕೈ ಹಿಡಿದಿವೆ. ಮಹಿಳೆಯರ ಖಾತೆಗೆ ರೂ.10,000 ಹಾಕಿದ್ದು, ಒಂದು ಕೋಟಿ ಸರ್ಕಾರಿ ಉದ್ಯೋಗ ಸೃಷ್ಟಿ, ಪ್ರತಿ ಜಿಲ್ಲೆಯಲ್ಲಿ ಮೆಗಾ ಕೌಶಲ್ಯ ಕೇಂದ್ರಗಳು ಮತ್ತು ಉನ್ನತ ಶಿಕ್ಷಣ ಪಡೆಯುತ್ತಿರುವ ಎಸ್‌ಸಿ ವಿದ್ಯಾರ್ಥಿಗಳಿಗೆ ತಿಂಗಳಿಗೆ 2000 ರೂ. ಆರ್ಥಿಕ ಸಹಾಯದಂತಹ ಪ್ರಮುಖ ಭರವಸೆಗಳು ಗೆಲುವಿಗೆ ಪೂರಕವಾಗಿವೆ.

ಜತೆಗೆ ಯುವಕರಿಗೆ ಸ್ವಯಂ ಉದ್ಯೋಗಕ್ಕಾಗಿ 10 ಲಕ್ಷ ರೂ. ವರೆಗೆ ಆರ್ಥಿಕ ಸಹಾಯ, ಮುಖ್ಯಮಂತ್ರಿ ಮಹಿಳಾ ಉದ್ಯೋಗ ಯೋಜನೆಯಡಿ ಜೀವಿಕಾ ದೀದಿಗಳಿಗೆ 2 ಲಕ್ಷ ರೂ. ವರೆಗೆ ಆರ್ಥಿಕ ಸಹಾಯ ಸೇರಿದಂತೆ ಹಲವು ಭರವಸೆಗಳಿಗೆ ಮತದಾರ ಜೈ ಎಂದಿದ್ದಾನೆ. ಕಳೆದ ಬಾರಿ ಎಲ್‌ಜೆಪಿ ಪಕ್ಷವು ಜೆ–ಡಿಯುಗೆ ಭಾರೀ ಹಾನಿ ಮಾಡಿತ್ತು. ಇದರ ಸುಳಿವರಿತ ಬಿಜೆಪಿ ಅವರಿಗೆ 29 ಸ್ಥಾನಗಳನ್ನು ನೀಡುವ ಮೂಲಕ ಗೌರವವಾಗಿ ನಡೆಸಿಕೊಂಡಿತ್ತು. ಪರಿಣಾಮ ದಲಿತ ಮತಗಳು ಎನ್‌ಡಿಎಗೆ ಹೆಚ್ಚಿನ ಪ್ರಮಾಣದಲ್ಲಿ ಬಂದಿರುವುದು ಫಲಿತಾಂಶದಿಂದಲೇ ಕಂಡುಬಂದಿದೆ.

## ನವೆಂಬರ್ 16ರಂದು ಏಕತಾ ಮಾರ್ಚ್ ಪಾದಯಾತ್ರೆ

**ದಾವಣಗೆರೆ :** ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮದಿನಾಚರಣೆಯ ಅಂಗವಾಗಿ ಇದೇ ನವೆಂಬರ್ 16ರಂದು ಬೆಳಿಗ್ಗೆ 9ಕ್ಕೆ ನಗರದ ಯು.ಬಿ.ಡಿ.ಟಿ ಮಹಾವಿದ್ಯಾಲಯ ಆವರಣದಲ್ಲಿ ಸರ್ಧಾರ್ @ 150 ಏಕತಾ ಮಾರ್ಚ್ ಪಾದಯಾತ್ರೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಚಿತ್ರದುರ್ಗ ಲೋಕಸಭಾ ಸಂಸದರು ಹಾಗೂ ಮಾಜಿ ಮುಖ್ಯಮಂತ್ರಿ ಗೋವಿಂದ ಎಂ.ಕಾರಜೋಳ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಏಕತಾ ಪಾದಯಾತ್ರೆಯು ನಗರದ ಯುಬಿಡಿಟಿ ಮಹಾವಿದ್ಯಾಲಯದ ಮಾರ್ಗವಾಗಿ ಹದಡಿ ರಸ್ತೆ, ವಿದ್ಯಾರ್ಥಿ ಭವನ, ಅಂಬೇಡ್ಕರ್ ವೃತ್ತ, ಜಯದೇವ ವೃತ್ತ, ಮಹಾನಗರ ಪಾಲಿಕೆ, ಎವಿಕೆ ಕಾಲೇಜ್, ಸಿಜಿ ಹಾಸ್ಪಿಟಲ್ ರಸ್ತೆ, ಗುಂಡಿ ವೃತ್ತ ಹಾಗೂ ಡೆಂಟಲ್ ಮಹಾವಿದ್ಯಾಲಯ ರಸ್ತೆಯಿಂದ ಯುಬಿಡಿಟಿ ಮಹಾವಿದ್ಯಾಲಯದ ಬಳಿ ಸಮಾಪ್ತಿಗೊಳ್ಳಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಅಂತರರಾಷ್ಟ್ರೀಯ ಪ್ರಜೆಗಳಿಗೆ ವಂಚಿಸುತ್ತಿದ್ದ ನಕಲಿ ಕಾಲ್ ಸೆಂಟರ್ ಪತ್ತೆ; 33 ಮಂದಿ ಬಂಧನ

**ಬೆಂಗಳೂರು :** ಅಂತರರಾಷ್ಟ್ರೀಯ ಪ್ರಜೆಗಳಿಗೆ ವಂಚಿಸುತ್ತಿದ್ದ ಬೆಳಗಾವಿ ಮೂಲದ ನಕಲಿ ಕಾಲ್ ಸೆಂಟರ್ ಅನ್ನು ಪತ್ತೆಹಚ್ಚಿದ್ದು, 33 ಜನರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ. ಬೆಂಗಳೂರಿನ ಆಂತರಿಕ ಭದ್ರತಾ ವಿಭಾಗ(ಐಎಸ್‌ಡಿ) ಮೂರು ದಿನಗಳ ಹಿಂದೆ ನೀಡಿದ ಸುಳಿವು ಮತ್ತು ಬುಧವಾರ ಅನುಮಾನಾಸ್ಪದ ಕೇಂದ್ರದ ಬಗ್ಗೆ ಹೆಚ್ಚುವರಿ ಅನಾಮಧೇಯ ದೂರಿನ ಮೇರೆಗೆ ಈ ಕಾರ್ಯಾಚರಣೆ ನಡೆಸಲಾಗಿದೆ. ಈ ಕಾಲ್ ಸೆಂಟರ್ ಅಮೆರಿಕನ್ ನಾಗರಿಕರನ್ನು ಗುರಿಯಾಗಿಸಿಕೊಂಡು, ಆನ್‌ಲೈನ್ ಟ್ರೇಡಿಂಗ್ ಹೆಸರಿನಲ್ಲಿ ಜನರಿಗೆ ವಂಚಿಸಿ ಹಣ ವರ್ಗಾಯಿಸಿಕೊಳ್ಳುತ್ತಿತ್ತು ಎಂದು ಬೆಳಗಾವಿ ನಗರ ಪೊಲೀಸ್ ಆಯುಕ್ತ ಬೋರ್ಸೆ ಭೂಷಣ್ ಗುಲಾಬ್ರಾವ್ ತಿಳಿಸಿದ್ದಾರೆ.

## ನ.16 ರಂದು ಆಲೂರು ಆಸ್ಪತ್ರೆಯಲ್ಲಿ ವಿಶ್ವ ಮಧುಮೇಹ ಮೇಳ ಕಾರ್ಯಕ್ರಮ

**ದಾವಣಗೆರೆ.ನ.14:** ಆಲೂರು ಚಂದ್ರಶೇಖರಪ್ಪ ಮೆಮೋರಿಯಲ್ ಟ್ರಸ್ಟ್ ಮತ್ತು ಆಸ್ಪತ್ರೆ, ಸಕ್ಕರೆ ಖಾಯಿಲೆ ತಪಾಸಣೆ ಹಾಗೂ ಸಂಶೋಧನ ಕೇಂದ್ರದ ವತಿಯಿಂದ ನ.16ರಂದು ಬೆಳಿಗ್ಗೆ 8ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ಆಸ್ಪತ್ರೆ ಆವರಣದಲ್ಲಿ ವಿಶ್ವ ಮಧುಮೇಹ ಮೇಳ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಆಸ್ಪತ್ರೆಯ ಡಾ.ಮಂಜುನಾಥ್ ಆಲೂರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 40 ವರ್ಷಗಳಿಂದ ಸತತವಾಗಿ ಸಾರ್ವಜನಿಕ ಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡು ಸಕ್ಕರೆ ಖಾಯಿಲೆವುಳ್ಳವರಿಗೆ ಹಾಗೂ ಸಕ್ಕರೆ ಖಾಯಿಲೆ ಇಲ್ಲದವರಿಗೂ ಅನೇಕ ಕಾರ್ಯಕ್ರಮಗಳನ್ನು ಪ್ರತಿ ವರ್ಷ ನಡೆಸಿಕೊಂಡು ಬಂದಿರುತ್ತೇವೆ. ಮಧುಮೇಹ ಮತ್ತು ಕೆಲಸದ ಸ್ಥಳದಲ್ಲಿ ಯೋಗಕ್ಷೇಮ ಎಂಬ ಘೋಷಣೆಯೊಂದಿಗೆ ಸಕ್ಕರೆ ಖಾಯಿಲೆ ಮತ್ತು ಅದರ ವಿಷಯದ ಬಗ್ಗೆ ಹೆಚ್ಚಿನ ಮಹತ್ವಕೊಟ್ಟು ಈ ವರ್ಷದ ಕಾರ್ಯಕ್ರಮ ಆಯೋಜಿಲಾಗಿದೆ ಎಂದರು.

## ಮರಗಳ ಮಹಾತಾಯಿ, ಶತಾಯುಷಿ ಸಾಲುಮರದ ತಿಮ್ಮಕ್ಕ ವಿಧಿವಶ

**ಬೆಂಗಳೂರು:** ಉಸಿರಾಟದ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದ ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ಚಿಕಿತ್ಸೆ ಫಲಕಾರಿಯಾಗದೆ ಇಂದು ನಿಧನರಾಗಿದ್ದಾರೆ. ಅವರಿಗೆ 114 ವರ್ಷ ವಯಸ್ಸಾಗಿತ್ತು.

ಬೆಂಗಳೂರಿನ ಜಯನಗರದ ಖಾಸಗಿ ಆಸ್ಪತ್ರೆಯಲ್ಲಿ ತಿಮ್ಮಕ್ಕ ಕೊನೆಯುಸಿರೆಳೆದಿದ್ದಾರೆ. ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನಲ್ಲಿ 1911 ಜೂನ್ 30ರಂದು ಜನಿಸಿದ್ದ ಅವರು, ವೃಕ್ಷಮಾತೆ ಎಂದೇ ಪ್ರಸಿದ್ಧಿ ಪಡೆದಿದ್ದರು. ನಂತರ ಮಾಗಡಿ ತಾಲೂಕಿನ ಚಿಕ್ಕಯ್ಯ ಎಂಬುವವರನ್ನು ವಿವಾಹವಾದರು. ಆದರೆ ದುರದೃಷ್ಟವಶಾತ್, ಇವರಿಗೆ ಮಕ್ಕಳಿರಲಿಲ್ಲ. ಹೀಗಾಗಿ ತಮಗೆ ಮಕ್ಕಳಿರದ ದುಃಖವನ್ನು ಮರೆಯಲು ರಸ್ತೆಯ ಬದಿಯಲ್ಲಿ ಆಲದ ಸಸಿಗಳನ್ನು ನೆಟ್ಟು ಅವುಗಳನ್ನೇ



ಮಕ್ಕಳಂತೆ ಭಾವಿಸಿ ಬೆಳೆಸಿದ್ದರು.

ಅನಕ್ಷರಸ್ಥೆಯಾಗಿದ್ದರೂ ಪರಿಸರ ಸಂರಕ್ಷಣೆಯಲ್ಲಿ ತಿಮ್ಮಕ್ಕ ಅವರ ಮಹತ್ತರ ಸಾಧನೆಗೆ ಹಲವಾರು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳು ಪ್ರಶಸ್ತಿ ನೀಡಿ ಸನ್ಮಾನಿಸಿವೆ. ರಾಜ್ಯೋತ್ಸವ ಪ್ರಶಸ್ತಿ, ಆರ್ಟ್ ಆಫ್ ಲಿವಿಂಗ್ ಸಂಸ್ಥೆಯಿಂದ ವಿಶಾಲಾಕ್ಷಿ ಪ್ರಶಸ್ತಿ, 2010ನೇ ಸಾಲಿನ ಪ್ರತಿಷ್ಠಿತ 'ನಾಡೋಜ' ಪ್ರಶಸ್ತಿ ಸೇರಿ 2019ರಲ್ಲಿ ಪದ್ಮಶ್ರೀ ಪ್ರಶಸ್ತಿ ಪ್ರಶಸ್ತಿಗೂ ಇವರು ಪಾತ್ರರಾಗಿದ್ದಾರೆ. 2020ರಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ತಿಮ್ಮಕ್ಕನವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ. ಮರ, ಗಿಡಗಳನ್ನು ತಮ್ಮ ಮಕ್ಕಳಂತೆಯೇ ಪ್ರೀತಿಸುತ್ತಿದ್ದರು. ತಿಮ್ಮಕ್ಕ ಅವರಿಗೆ 1995ರಲ್ಲಿ ರಾಷ್ಟ್ರೀಯ ಪೌರ ಪ್ರಶಸ್ತಿ, 1997ರಲ್ಲಿ ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ, 2019ರಲ್ಲಿ ಪದ್ಮಶ್ರೀ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಹಾಗೂ ನಾಡೋಜ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

2023 ರ ಅಕ್ಟೋಬರ್‌ನಲ್ಲಿ ಆಸ್ತಮಾದ ತೀವ್ರ ಉಲ್ಬಣದಿಂದಾಗಿ ಅಕ್ಟೋಬರ್ 3 ರಂದು ಅಪೋಲೋ ಸ್ಪೆಷಾಲಿಟಿ ಆಸ್ಪತ್ರೆಗೆ ಸಾಲುಮರದ ತಿಮ್ಮಕ್ಕರನ್ನು ದಾಖಲಾಗಿತ್ತು. ಅಲ್ಲಿಂದ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು.

1911ರ ಜೂನ್ 30ರಂದು ತಿಮಕ್ಕ ಅವರು ಜನಿಸಿದ್ದರು. ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನವರಾಗಿದ್ದ ಅವರು, ಬೆಂಗಳೂರು ದಕ್ಷಿಣ ಜಿಲ್ಲೆ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದ ಬಿಕ್ಕಲ ಚಿಕ್ಕಯ್ಯ ಅವರನ್ನು ವಿವಾಹವಾದ ಬಳಿಕ ಹುಲಿಕಲ್‌ಗೆ ಬಂದು ನೆಲೆಸಿದರು.

## ಬಿಹಾರ ಮಾದರಿಯಲ್ಲಿ ರಾಜ್ಯದಲ್ಲಿಯೂ ಬಿಜೆಪಿ ಪಕ್ಷ ಜಯಭೇರಿ ಸಾಧಿಸಲಿದೆ: ಎಸ್.ವಿ.ರಾಮಚಂದ್ರ

**ಜಗಳೂರು:** ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಸುಭದ್ರ ಆಡಳಿತಕ್ಕೆ ಜನಪರ ಯೋಜನೆಗಳಿಗೆ ಮತದಾರರು ಬಿಹಾರದಲ್ಲಿ ಮಣಿ ಹಾಕಿದ್ದಾರೆ. ಬಿಹಾರ ಮಾದರಿಯಲ್ಲಿ ರಾಜ್ಯದಲ್ಲಿಯೂ ಮುಂಬರುವ ತಾ.ಪಂ ಹಾಗೂ ಜಿ.ಪಂ, ಪಟ್ಟಣಪಂಚಾಯಿತಿ, ನಗರ ಸಭೆ, ಚುನಾವಣೆಗಳಲ್ಲಿಯೂ ಬಿಜೆಪಿ ಪಕ್ಷ ಜಯಭೇರಿ ಸಾಧಿಸಲಿದೆ ಎಂದು ಮಾಜಿ ಶಾಸಕ ಎಸ್.ವಿ.ರಾಮಚಂದ್ರ ಎಂದು ಭವಿಷ್ಯ ನುಡಿದರು.

ಪಟ್ಟಣದ ಮಹಾತ್ಮಗಾಂಧಿ ವೃತ್ತದಲ್ಲಿ ಶುಕ್ರವಾರ ಬಿಜೆಪಿಯಿಂದ ಬಿಹಾರ ಚುನಾವಣೆ ಗೆಲುವಿನ ಹಿನ್ನೆಲೆ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿ ನಂತರ ಮಾತನಾಡಿದರು.

ಅವಧಿಗೆ ಅಧಿಕಾರ ಹಿಡಿಯಲಿದ್ದು, ಪ್ರತಿಪಕ್ಷಗಳ ಮೈತ್ರಿಕೂಟ ಮಹಾಘಟಬಂಧನ್ಗೆ ಮುಖಭಂಗವಾಗಿದೆ. ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಆಡಳಿತವನ್ನು ಮೆಚ್ಚು ಜನ ಎನ್ಡಿಗೆ ಒಕ್ಕೂಟವನ್ನು ಮತ್ತೊಮ್ಮೆ ಅಧಿಕಾರಕ್ಕೆ ತಂದಿದ್ದ ಹಾರದಲ್ಲಿ ಎನ್ಡಿಕೆಗೆ ಈ ಬಾರಿ ಸ್ಪಷ್ಟ ಬಹುಮತ ಎಂದು



ಮತಗಟ್ಟೆ ಸಮೀಕ್ಷೆಗಳು ಭವಿಷ್ಯ ನುಡಿದಿದ್ದವು. ಅಷ್ಟೇ ಅಲ್ಲ ದಾಖಲೆ ಶೇ.68.8 ವೋಟಿಂಗ್ ದಾಖಲಾಗಿತ್ತು. ಇದರ ಬೆನ್ನಲ್ಲೆ ಮತಗಟ್ಟೆ ಸಮೀಕ್ಷೆಗಳು ಎನ್ಡಿಎ ಅಧಿಕಾರ ಹಿಡಿಯಲಿದೆ ಎಂದು ಹೇಳಿದ್ದು ಸುಳ್ಳಾಗಿಲ್ಲ. ಇದಕ್ಕೆಲ್ಲಾ ಕಾರಣ ಕಾಂಗ್ರೆಸ್ ಪಕ್ಷ 60 ವರ್ಷಗಳ ಕಾಲ ಈ ದೇಶವನ್ನು ಆಳ್ವಿಕೆ ನಡೆಸಿ ಅಧೋಗತಿಗೆ ತಂದಿತ್ತು. ಮೋದಿ, ನಿತೀಶ್ ಜೋಡಿ ಅಭಿವೃದ್ಧಿಯ ಪರ್ವ ಆರಂಭಿಸಿದ್ದ ಹಿನ್ನೆಲೆ ಬಿಹಾರ ಜನತೆ ಎನ್ಡಿಎಗೆ ಮತಹಾಕಿದ್ದಾರೆ ಎಂದರು.

ಮಾಜಿ ಶಾಸಕ ಎಚ್.ಪಿ.ರಾಜೇಶ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಸಂಪೂರ್ಣ ನಾಯಕತ್ವ ಎಲ್ಲಾ ರಾಜ್ಯಗಳಿಗೂ ಮಾದರಿಯಾಗಿದೆ. ಬಿಹಾರ ಚುನಾವಣೆಯಲ್ಲಿ ಅತ್ಯಧಿಕ ಮತನೀಡಿ ಗೆಲುವಿಗೆ ಬೆಂಬಲಿಸಿದ ಮತದಾರರ ಆಶೀರ್ವಾದಕ್ಕೆ ಚಿರಋಣಿಯಾಗಿರುತ್ತೇವೆ.ಬಿಹಾರದಲ್ಲಿನ ಬಿಜೆಪಿ ಗೆಲುವು ದಿಕ್ಸೂಚಿಯಾಗಿ ಕರ್ನಾಟಕದಲ್ಲಿಯೂ ಬಿಜೆಪಿ ಪಕ್ಷದ ಗೆಲುವಿನ ಕುತೂಹಲದಲ್ಲಿದ್ದೇವೆ. ಮುಂದಿನ ಚುನಾವಣೆಗಳಲ್ಲಿ ಗೆಲುವಿನ ರುವಾರಿಗಳಾಗಿ ಬಿಜೆಪಿ ಆಡಳಿತ ಶತಸಿದ್ಧ ಎಂದರು.

ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಎ.ಎಂ ಮರುಳಾರಾಧ್ಯ, ಪ.ಪಂ ಅಧ್ಯಕ್ಷ ನವೀನ್ ಕುಮಾರ್, ಸದಸ್ಯ ಪಾಪಲಿಂಗಪ್ಪ, ಇತರರು ಇದ್ದರು.

## ಮಕ್ಕಳ ಕನಸು ನನಸಾಗಿಸಲು ಕಾನೂನಿನ ಶ್ರೀರಕ್ಷೆ ನೀಡಿ ಭವಿಷ್ಯ ರೂಪಿಸಬೇಕು

**ದಾವಣಗೆರೆ :** ಮಕ್ಕಳು ಕನಸು ಕಾನುವುದ ಸಹಜ. ಅವರ ಕನಸು ನನಸಾಗಿಸುವಲ್ಲಿ ಎದುರಾಗುವ ಅಡೆತಡೆಗೆ, ಬೇಕಾದ ಕಾನೂನಿನ ಅರಿವು, ಶ್ರೀರ–ಕ್ಷೆ ನೀಡುವುದರೊಂದಿಗೆ ಭವಿಷ್ಯಕ್ಕೆ ಬೆಳಕಾಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಕರೂರು ಇಂಡಸ್ಟ್ರಿಯಲ್‌ನಲ್ಲಿನ ಗ್ಲೋಬಲ್ ಪಬ್ಲಿಕ್ ಶಾಲೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಶುಕ್ರವಾರ ಆಯೋಜಿಸಲಾಗಿದ್ದ ಮಕ್ಕಳ ಕನಸುಗಳಿಗೆ ಕಾನೂನಿನ ಕವಚ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೌಢಾವಸ್ಥೆಗೆ ಬಂದ ಮಕ್ಕಳು ಮತ್ತೆ ಬಾಲ್ಯಕ್ಕೆ ಮರಳಲು ಸಾಧ್ಯವಿಲ್ಲ. ಮಕ್ಕಳ ಬಾಲ್ಯಾವಸ್ಥೆಯ ಜೀವನ ತುಂಬಾ ಮಹತ್ವವಾದುದು. ಆದುದರಿಂದ ಅವರ ಪಾಲನೆ ಪೋಷಣೆಗೆ ಹೆಚ್ಚು ಪ್ರಾತಿನಿಧ್ಯ ನೀಡಬೇಕು. ಮಕ್ಕಳು ಸಹ ಬಾಲ್ಯಾವಸ್ಥೆಯ




ಜೀವನದಲ್ಲಿದ್ದಾಗಲೇ ಸರಿಯಾದ ರೀತಿಯಲ್ಲಿ ಬಳಸಿಕೊಂಡಾಗ, ಪೋಷಕರು ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ಪೂರೈಸಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗುವುದು ಎಂದರು.

ಯಾವುದೇ ಒಬ್ಬ ಹೆಣ್ಣು ಗರ್ಭಧರಿಸಿದ 45 ದಿನದಿಂದಲೂ ಮಕ್ಕಳ ಹಕ್ಕುಗಳು ಪ್ರಾರಂಭವಾಗುತ್ತವೆ. ಗರ್ಭಿಣಿ ತಾಯಿ ಆರೋಗ್ಯವಂತರಾಗಿರಬೇಕು ಎಂಬ ನಿಟ್ಟಿನಲ್ಲಿ ಸರ್ಕಾರ ಹಲವಾರು ಸೌಲಭ್ಯ, ಪೌಷ್ಟಿಕತೆ ಹೊಂದಿರುವ ಆಹಾರ ವಿತರಿಸಲಾಗುತ್ತದೆ. ಆದರೆ ಇಂದಿನ ಮಕ್ಕಳು ಹೆಚ್ಚಿನ ಸಮಯ ಮೊಬೈಲ್, ಟಿವಿ, ಸಾಮಾಜಿಕ ಮಾಧ್ಯಮಗಳಲ್ಲಿ ಕಾಲಹರಣ ಮಾಡುವುದರ ಜೊತೆಗೆ ತಮ್ಮ ಭವಿಷ್ಯದ ಜೀವನವನ್ನೇ ನಾಶ ಮಾಡಿಕೊಳುತ್ತಿದ್ದಾರೆ. ಆದ್ದರಿಂದ ಮಕ್ಕಳು ಇಂತಹ ದುಷ್ಚಟಗಳಿಂದ ದೂರವಿದ್ದು ಗುಣಮಟ್ಟದ ಶಿಕ್ಷಣ ಪಡೆದು ಸಮಾಜದಲ್ಲಿ ಉನ್ನತ ವ್ಯಕ್ತಿಗಳಾಗಿ ಬಾಳಬೇಕು. ಮುಂದೆ ಗುರಿ, ಹಿಂದೆ ಗುರು ಏನಾದರೂ ಸಾಧಿಸಬೇಕೆಂಬ ಛಲ, ಅಚಲವಾದ ಮನೋಭಾವ ಹೊಂದಿರಬೇಕು. ವಿದ್ಯಾಭಾಸದ ಹಾಗೂ ಕಠಿಣ ಪರಿಶ್ರಮ ಜತೆಗೆ ನಿರಂತರ ಪ್ರಯತ್ನದಿಂದ ಯಶಸ್ವಿಯಾಗಲು ಸಾಧ್ಯ ಎಂದು ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.

ದಿನಗೂಲಿ ನೌಕರ, ಕಾಯಿಪಲ್ಯ ಮಾರುವ ಕೂಲಿ ಕಾರ್ಮಿಕರು ಸಹ ತನ್ನ ಮಕ್ಕಳು ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಬೇಕೆಂಬ ದೃಷ್ಟಿಯಿಂದ ಗುಣಮಟ್ಟದ ಶಿಕ್ಷಣ ನೀಡಲು ಬಯಸುತ್ತಾನೆ. ಈ ನಿಟ್ಟಿನಲ್ಲಿ ಮಕ್ಕಳಿಗಾಗಿ ಸಂವಿಧಾನದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ, ಮೂಲಭೂತ ಹಕ್ಕುಗಳು, ಮಕ್ಕಳ ರಾಜ್ಯ ನಿರ್ದೇಶಕ ತತ್ವಗಳು ಹೀಗೆ ಹಲವಾರು ಶಾಸನಗಳನ್ನು ರೂಪಿಸಿ ಅವರಿಗಾಗಿ ವಿಶೇಷವಾಗಿ ಸ್ಥಾನಮಾನ ನೀಡಿದೆ. ಇವೆಲ್ಲವುಗಳನ್ನು ಜವಾಬ್ದಾರಿಯುತ ಸ್ಥಾನಮಾದಲ್ಲಿರುವ ನಾವು ಬೇಜವಾಬ್ದಾರಿತನ, ಅಸಡ್ಡೆಯಿಂದ ನಿರ್ವಹಿಸಿದಲ್ಲಿ ದೇಶಕ್ಕೆ, ನಾಡಿಗೆ ಒಳಿತಲ್ಲ. ಇಂದಿನ ಮಕ್ಕಳು ನಾಳಿನ ಭವಿಷ್ಯವನ್ನು ನಿರ್ಧರಿಸುವಂತ ಪ್ರಜೆಗಳಾಗಬೇಕು. ಆದ್ದರಿಂದ ಭವಿಷ್ಯದ ಪೀಳಿಗೆಗೆ ಕಾನೂನು, ಸಂವಿಧಾನ ಬಗ್ಗೆ ತಿಳಿಹೇಳಬೇಕಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಟಿ.ಆರ್.ಗುರುಬಸವರಾಜ್, ದಕ್ಷಿಣ ವಲಯ ಸಂಚಾರಿ ಪೊಲೀಸ್ ಠಾಣಾಧಿಕಾರಿ ಶೈಲಜ, ಉತ್ತರ ವಲಯ ಸಂಚಾರಿ ಪೊಲೀಸ್ ಠಾಣಾಧಿಕಾರಿ ಜಯಶೀಲ, ಜಿಲ್ಲಾ ನ್ಯಾಯಾಲಯ ವಕೀಲ ವೆಂಕಟೇಶ್, ಗ್ಲೋಬಲ್ ಪಬ್ಲಿಕ್ ಶಾಲೆ ಕಾರ್ಯದರ್ಶಿ ಅಸಾದ್ ಉಲ್ಲಾ ಸೇರಿದಂತೆ ಶಾಲೆಯ ಸಿಬ್ಬಂದಿ, ಮಕ್ಕಳು ಇದ್ದರು.

## ಇಂದು ನಾಗರೀಕ ಹಿತರಕ್ಷಣಾ ಸಮಿತಿ ವತಿಯಿಂದ ಕರ್ನಾಟಕ ರಾಜ್ಯೋತ್ಸವ

**ದಾವಣಗೆರೆ.ನ.14:** ಶ್ರೀ ದೇವರಾಜ್ ಅರಸ್ ಬಡಾವಣೆ ಎ ಬ್ಲಾಕ್‌ನ ನಾಗರೀಕ ಹಿತರಕ್ಷಣಾ ಸಮಿತಿ ವತಿಯಿಂದ ನ.14 ಮತ್ತು 15 ರಂದು ಎರಡು ದಿನಗಳ ಕಾಲ ಮಕ್ಕಳ ದಿನಾಚರಣೆ ಮತ್ತು 70ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಅಧ್ಯಕ್ಷ ಮಂಜುನಾಥ್ ಬಿ.ಕಂಬಳಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.14ರ ಇಂದು ಸಂಜೆ 6 ಗಂಟೆಗೆ ಜಿಲ್ಲಾಸ್ಪತ್ರೆಯ ಆರ್.ಎಂ.ಓ. ನಾಗವೇಣಿ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಪಾಲಿಕೆ ಮಾಜಿ ಸದಸ್ಯ ಆಶಾ ಉಮೇಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಗಣ್ಯರಾದ ಡಾ.ಮರುಳಸಿದ್ದಪ್ಪ, ನಾಗರತ್ನಮ್ಮ, ಶಕುಂತಲ ಇ.ಎಂ., ಗಾಯತ್ರಿ ಇತರರು ಭಾಗವಹಿಸಲಿದ್ದಾರೆ. ಇದೇ ವೇಳೆ ಹಿರಿಯ ಗಣ್ಯರಿಗೆ ಹಾಗೂ ಸಮಾಜ ಸೇವಕರಿಗೆ ಸನ್ಮಾನ ನಡೆಯಲಿದೆ ಎಂದು ಹೇಳಿದರು.

ನ.15 ರಂದು ಬೆಳಿಗ್ಗೆ 8.30ಕ್ಕೆ ಧ್ವಜಾರೋಹಣ ನೆರವೇರಲಿದ್ದು, ಸಂಜೆ 6.30ಕ್ಕೆ ತಮ್ಮ ಅಧ್ಯಕ್ಷತೆಯಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಜಿಲ್ಲಾಮಂತ್ರಿ ಎಸ್.ಎಸ್.ಮಲ್ಲಿಕಾರ್ಜುನ್ ಮತ್ತು ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮನುಖ್ಯ ಅತಿಥಿಗಳಾಗಿ ಡಿಸಿ ಗಂಗಾಧರ ಸ್ವಾಮಿ, ಎಸ್ಪಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ, ಕನಿಪ ಅಧ್ಯಕ್ಷ ಎ.ಎಂ. ಮಂಜುನಾಥ್ ಸೇರಿದಂತೆ ಹಲವು ಗಣ್ಯರು ಭಾಗಿಯಾಗಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಸೈಯದ್ ಖಾದರ್, ಕೆ.ಎಂ.ವೀರಯ್ಯ, ಮಂಜುನಾಥ್ ಎ.ಎಸ್., ರಮೇಶ್ ಡಿ, ಇತರರು ಇದ್ದರು.

## ಬಿಹಾರದಲ್ಲಿ ಎನ್‌ಡಿಎಗೆ ಅಭೂತಪೂರ್ವ ಗೆಲುವು : ಸಂಭ್ರಮಾಚರಣೆ

**ಚಿಕ್ಕಮಗಳೂರು, ನ. 14:** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್ ಡಿಎ ಅತಿಹೆಚ್ಚು ಸ್ಥಾನ ಪಡೆದುಕೊಂಡು ಅಪೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆ ಶುಕ್ರವಾರ ಜಿಲ್ಲಾ ಬಿಜೆಪಿ ಕಚೇರಿ ಮುಂಭಾಗದಲ್ಲಿ ಕಾರ್ಯಕರ್ತರು ಪಟಾಕಿ ಸಿಡಿಸುವ ಮೂಲಕ ಪರಸ್ಪರ ಸಿಹಿಹಂಚಿ ಸಂಭ್ರಮಾ ಚರಣೆ ನಡೆಸಿದರು.

ಈ ವೇಳೆ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎಂ.ಆರ್.ದೇವರಾಜ್‌ಶೆಟ್ಟಿ ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ವಿರುದ್ಧ ವಿ.ಪಕ್ಷದ ಮುಖಂಡರುಗಳು ಮತಗಳ್ಳತನ ಹಾಗೂ ಹಣದ ಆಮಿಷವನ್ನೇ ಹರಿಸಿದರೂ, ಕೊನೆಗೂ ಮತದಾರರು ಆಮಿಷಕ್ಕೆ ಒಳಗಾಗದೇ ಎನ್‌ಡಿಎಗೆ ಸಂಪೂರ್ಣವಾಗಿ ಬೆಂಬಲಿಸಿ ಗೆಲುವನ್ನು ತಂದುಕೊಟ್ಟಿದ್ದಾರೆ ಎಂದರು.

ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅಧಿಕಾರ ಸ್ವೀಕರಿಸಿದ ನಂತರ ದೇಶದ ವಿವಿಧ ರಾಜ್ಯಗಳಲ್ಲಿ ಚು ನಾವಣೆಗಳಲ್ಲಿ ಭಾಗಿಯಾಗಿ ನೂರರ ಗೆಲುವು ಸಾಧಿಸಿದೆ. ಆದರೆ ರಾಹುಲ್‌ಗಾಂಧಿ ನೇತೃತ್ವದ ನಡೆದ ಚುನಾ ವಣೆಗಳಲ್ಲಿ ಸಂಪೂರ್ಣವಾಗಿ ಠೇವಣಿ ಕಳೆದುಕೊಂಡು ಸತತ ನೂರನೇ ಸೋಲಿಗೆ ಕಾರಣವಾಗಿದೆ ಎಂದು ಟೀಕಿಸಿದರು.

ಇವಿಎಂ ಹ್ಯಾಕ್, ಮತಗಳ್ಳತನ ಎಂಬ ಸುಳ್ಳು ಸುದ್ದಿ ಹರಡುವ ಮೂಲಕವೇ ಜನರನ್ನು ದಿಕ್ಕುತಪ್ಪಿಸಲು ಯತ್ನಿಸಿದ ವಿ.ಪಕ್ಷದ ನಾಯಕರಿಗೆ ಬಿಹಾರ ರಾಜ್ಯದ ಮತದಾರರು ಎನ್‌ಡಿಗೆ ಬೆಂಬಲಿಸಿ ತಕ್ಕಉತ್ತರ ನೀಡಿ ದೆ. ಈ ತೀರ್ಪನ್ನು ಕಾಂಗ್ರೆಸ್ ಎಚ್ಚೆತ್ತುಕೊಂಡು ಜನಸಾಮಾನ್ಯರ ನಡುವೆ ಅನುಕೂಲವಾಗುವ ಕೆಲಸಗಳನ್ನು ಮಾಡಬೇಕು ಎಂದು ತಿಳಿಸಿದರು.

ಬಿಹಾರ ಚುನಾವಣೆಯಲ್ಲಿ ಪ್ರಮುಖವಾಗಿ



ಕಾರ್ಯನಿರ್ವಹಿಸಿದ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ.ಪಿ.ನಡ್ಡ, ಗೃಹ ಸಚಿವ ಅಮತ್‌ಶಾ ಹಾಗೂ ಬಿಹಾರ ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರಿ ಗೆ ಜಿಲ್ಲಾ ಬಿಜೆಪಿ ಕಾರ್ಯಕರ್ತರು ತುಂಬು ಹೃದಯ ಕೃತಜ್ಞತೆ ಸಲ್ಲಿಸುತ್ತೇವೆ ಎಂದು ಹೇಳಿದರು.

ಬಿಜೆಪಿ ನಗರಾಧ್ಯಕ್ಷ ಪುಷ್ಪರಾಜ್ ಮಾತನಾಡಿ ಕೇಂದ್ರದ ಮೋದಿ ಸರ್ಕಾರ ಹಾಗೂ ಬಿಹಾರ ಮುಖ್ಯ ಮಂತ್ರಿ ನಿತೀಶ್‌ಕುಮಾರ್ ಸಾಧನೆಗಳೇ, ಈ ಬಾರಿಯ ವಿಧಾನಸಭಾ ಚುನಾವಣೆಗಳಲ್ಲಿ ಅತ್ಯಧಿಕ ಸ್ಥಾನ ಗಳಿ ಸಲು ಸಾಧ್ಯವಾಗಿದ್ದು, ಮುಂದೆ ಕರ್ನಾಟಕದಲ್ಲೂ ಜನತೆ ದೊಡ್ಡ ಬದಲಾವಣೆ ತಂದು ಬಿಜೆಪಿ ಗೆಲುವಿಗ ದೊಡ್ಡ ಕ್ರಾಂತಿಯನ್ನು ಮಾಡಲಿದ್ದಾರೆ ಎಂದರು.

ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಕುರುವಂಗಿ ವೆಂಕಟೇಶ್ ಮಾತನಾಡಿ ಎನ್‌ಡಿಎ ನೇತೃತ್ವದ ಪಕ್ಷ ದೇಶದ ಎಲ್ಲಾ ರಾಜ್ಯಗಳಲ್ಲಿ ಅಭೂತಪೂರ್ವ ಗೆಲುವು ಸಾಧಿಸುವ ಮೂಲಕ ಕಾಂಗ್ರೆಸ್ ಪಕ್ಷವನ್ನು ತಿರಸ್ಕಾರಗೊಳಿ ಸುತ್ತಿದೆ. ಇದಕ್ಕೆ ಅಂದಿನ ಸರ್ಕಾರದಲ್ಲಿ ನಡೆದ ದುರಾಡಳಿತವೇ ನೇರ ಕಾರಣವಾಗಿದೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ಖಜಾಂಚಿ ನಾರಾಯಣಗೌಡ, ವಕ್ತಾರ ಪುಟ್ಟಸ್ವಾಮಿ, ಕಾರ್ಯದರ್ಶಿ ಅರುಣ್, ಯುವಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಚಿನ್‌ಗೌಡ, ಓಬಿಸಿ ರಾಜ್ಯ ಕಾರ್ಯದರ್ಶಿ ಬಿ.ರಾಜಪ್ಪ, ನಗರಾಧ್ಯಕ್ಷ ಜೀವನ್, ಮಾಧ್ಯಮ ಪ್ರಮುಖ್ ದಿನೇಶ್, ಮುಖಂಡರುಗಳಾದ ಹಂಪಯ್ಯ, ಕೌಶಿಕ್, ಹೆಚ್.ಕೆ.ಕೇಶವಮೂರ್ತಿ, ರೇವನಾಥ್, ಸೋಮಶೇಖರ್, ಸೀತರಾಮಭರಣ್ಯ ಇದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ಆದರೆ ವಿಪರೀತವಾಗಿ ತಿನ್ನುವುದು ನಿಮ್ಮ ಮರುದಿನದ ಮುಂಜಾನೆಗೆ ಅಸಮಾಧಾನವುಂಟುಮಾಡಬಹುದು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು.

### ವೃಷಭ ರಾಶಿ

ಇದು ಹೃದಯ ರೋಗಿಗಳಿಗೆ ಕಾಫಿ ಬಿಡಲು ಸರಿಯಾದ ಸಮಯ. ಯಾವುದೇ ಮುಂದುವರಿದ ಬಳಕೆ ನಿಮ್ಮ ಹೃದಯದ ಮೇಲೆ ಅನವಶ್ಯಕ ಒತ್ತಡ ತರುತ್ತದೆ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಮಿಥುನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಹಳೆಯ ಸಂಬಂಧಿಗಳು ಅವಿವೇಕದ ಬೇಡಿಕೆಗಳನ್ನು ಮಾಡುವ ಸಾಧ್ಯತೆಯಿದೆ.

### ಕರ್ಕ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಕುಟುಂಬದ ಸದಸ್ಯರೊಂದಿಗೆ ಸಾಮಾಜಿಕ ಕೂಟ ಎಲ್ಲರನ್ನೂ ಒಳ್ಳೆಯ ಚಿತ್ತದಲ್ಲಿಡುತ್ತದೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ. ನಿಮ್ಮ ಸಮಯ ಮತ್ತು ಶಕ್ತಿಯನ್ನು ಇತರರಿಗೆ ಸಹಾಯ ಮಾಡಲು ಸಮರ್ಪಿಸಿ – ಆದರೆ ನಿಮಗೆ ಸಂಬಂಧಿಸಿರದ ವಿಷಯಗಳಲ್ಲಿ ತೊಡಗಿಸಿಕೊಳ್ಳಬೇಡಿ.

### ಸಿಂಹ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ. ಸಂಜೆಗೆ ಏನಾದರೂ ವಿಶೇಷವಾದದ್ದನ್ನು ಯೋಜಿಸಿ ಮತ್ತು ಅದನ್ನು ಸಾಧ್ಯವಾದಷ್ಟು ಪ್ರೇಮಮಯವಾಗಿಸಲು ಪ್ರಯತ್ನಿಸಿ. ನಿಮ್ಮ ಸಮಯದ ಮೌಲ್ಯವನ್ನು ಅರ್ಥಮಾಡಿಕೊಳ್ಳಿ,

### ಕನ್ಯಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಧಾರ್ಮಿಕ ಸ್ಥಳಕ್ಕೆ ಭೇಟಿ ಅಥವಾ ಒಂದು ಸಂತನಂಥ ವ್ಯಕ್ತಿ ಸಾಂತ್ವನ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ನಿಮ್ಮ ಮನದನ್ನೆಯ ವಿಚಿತ್ರ ನಡವಳಿಕೆ ನಿಮ್ಮ ಮನಸ್ಥಿತಿಗೆ ಅಸಮಾಧಾನ ತರಬಹುದು. ತೆರಿಗೆ ಮತ್ತು ವಿಮೆ ವಿಷಯಗಳ ಬಗ್ಗೆ ಗಮನ ನೀಡುವ ಅಗತ್ಯವಿದೆ.

### ತುಲಾ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಸರೋವರದಲ್ಲಿನ ಸೊಗಸಾದ ಮೀನನ್ನು ಸಂಧಿಸುವ ಅವಕಾಶಗಳು ಸಾಧ್ಯತೆಗಳು ಇಂದು ಹೆಚ್ಚಿವೆ.

### ವೃಶ್ಚಿಕ ರಾಶಿ

ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮೊಜಮ್ಮಕ್ಕಳು ಅಪಾರ ಸಂತೊಷದ ಮೂಲವಾಗುತ್ತಾರೆ. ಇಂದು ಪ್ರೇಮ ಜೀವನದ ವಿವಾದಾತ್ಮಕವಾಗಿರಬಹುದು.

### ಧನು ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂದು ನೀವು ಸುಲಭವಾಗಿ ಬಂಡವಾಳ ಪಡೆಯಬಹುದು ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು. ಒತ್ತಡದ ಅವಧಿಯಿದ್ದರೂ ಕುಟುಂಬದ ಬೆಂಬಲ ನಿಮಗೆ ಸಹಾಯ ಮಾಡುತ್ತದೆ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ.

### ಮಕರ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಜಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೀತಿ ನಿಮ್ಮ ಪ್ರೀತಿಪಾತ್ರರೊಡನೆ ಹಂಚಿಕೊಳ್ಳಬೇಕಾದ ಭಾವನೆ.

### ಕುಂಭ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಸಂಗಾತಿ ಧೂಮಪಾನ ಬಿಡುವಂತೆ ನಿಮ್ಮನ್ನು ಉತ್ತೇಜಿಸುತ್ತಾರೆ. ಇತರ ಕೆಟ್ಟ ಪರಿಣಾಮಗಳನ್ನು ತೊಡೆದುಹಾಕಲೂ ಇದು ಸರಿಯಾದ ಸಮಯ. ಕಬ್ಬಿಣ ಬಿಸಿಯಿದ್ದಾಗಲೇ ನಾವು ಬಡಿಯಬೇಕೆಂದು ನೆನಪಿಡಿ.

### ಮೀನ ರಾಶಿ

ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು.

ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ –ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ.

# ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳ ದಿನಾಚರಣೆ



**ಬೆಟಗೇರಿ :** ನಗರದ ಮಹಾರಾಣಾಪ್ರತಾಪ ಸಿಂಹ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಇಂದು ಬೆಳಿಗ್ಗೆ ಪಂಡಿತ ಜವಹಾರಲಾಲ ನೆಹರುರವರ ಜಯಂತಿಯನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಯಿತು.

ಶಿಕ್ಷಣ ಸಂಸ್ಥೆಯ ಆಡಳಿತಾಧಿಕರಿಗಳಾದ ಗಣೇಶಸಿಂಗ ಬ್ಯಾಳಿಯವರು ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತಾ ಪಂಡಿತ ಜವಹಾರಲಾಲ ನೆಹರುರವರು ಸ್ವಾತಂತ್ರ್ಯ ದೊರೆತ ನಂತರ ಪ್ರಪ್ರಥಮ ಪ್ರಧಾನ ಮಂತ್ರಿಗಳಾಗಿ ತಮ್ಮ ನಿಸ್ವಾರ್ಥ ಸೇವೆಯಿಂದ ದೇಶವನ್ನು ಮುನ್ನಡೆಸಿಕೊಂಡು ಹೋಗುವುದಲ್ಲದೆ ಅವರಿಗೆ ಮಕ್ಕಳ ಮೇಲೆ ಅಪಾರವಾದ ಪ್ರೀತಿ ಇತ್ತು. ಅವರಿಗೆ ಅತೀ ಪ್ರಿಯವಾದದ್ದು ಮಕ್ಕಳು ಹಾಗೂ ಗುಲಾಬಿ ಹೂ. ಮಕ್ಕಳು ಅವರನ್ನು ಪ್ರೀತಿಯಿಂದ ಚಾಚಾ ನೆಹರು ಎಂದೇ ಕರೆಯುತ್ತಿದ್ದರು. ತಮ್ಮ ಬಿಡುವಿನ ವೇಳೆಯಲ್ಲಿ ಮಕ್ಕಳೊಂದಿಗೆ ಬೆರೆತು ಮಕ್ಕಳೇ ಆಗಿ ಬಿಡುತ್ತಿದ್ದರು ಎಂದು ಅವರ ಸಿಹಿ ನೆನಪುಗಳನ್ನು ಹಂಚಿಕೊಳ್ಳುತ್ತಾ ಶಾಲಾ ಮುದ್ದು ಮಕ್ಕಳಿಗೆ ವಿಶೇಷವಾಗಿ ಗುಲಾಬಿ ಹೂ ಹಾಗೂ ಸಿಹಿಯನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಪ್ರೌಢ ಶಾಲಾ ಮುಖ್ಯಾಧ್ಯಾಪಕರಾದ ಎಸ್.ಎಸ್.ಬಡಿಗೇರ, ಪ್ರಾಚಾರ್ಯರಾದ ಎಸ್.ಎಂ.ಉಳ್ಳಾಗಡ್ಡಿ, ಸಮಸ್ತ ಸಿಬ್ಬಂದಿ ಹಾಗೂ ಮಕ್ಕಳು ಉಪಸ್ಥಿತರಿದ್ದರು. ಮಕ್ಕಳು ಹಿಂದೂ ಸಂಪ್ರದಾಯದ ಬಣ್ಣ ಬಣ್ಣದ ಉಡುಗೆಗಳನ್ನು ತೊಟ್ಟು ಸಂಭ್ರಮಿಸಿದರು.

# ಬೈಲಾ ಉಲ್ಲಂಘಿಸಿರುವ ಡಿಸಿ ವಿರುದ್ಧ ಹೈಕೋರ್ಟ್‌ಗೆ ರೆಡ್ ಕ್ರಾಸ್ ನೂತನ ಚುನಾಯಿತರಿಂದ ದೂರು

**ದಾವಣಗೆರೆ:** ಮಾನವೀಯತೆಯ ಕಾರ್ಯಗಳನ್ನು ಮಾಡುವ ಸಲುವಾಗಿ ಇರುವ ರಕ್ತ ಸಂಸ್ಥೆಯಲ್ಲಿ ದಾವಣಗೆರೆ ಜಿಲ್ಲಾಧಿಕಾರಿಗಳು ಬೈಲಾವನ್ನೇ ಉಲ್ಲಂಘಿಸಿ ಅದರ ನಿಯಮಗಳನ್ನು ಹೊರಗಿಟ್ಟು ಏಕ ಪಕ್ಷವಾಗಿ ನಿರ್ಧಾರ ತೆಗೆದುಕೊಂಡಿದ್ದಾರೆ ಎಂದು ರೆಡ್ ಕ್ರಾಸ್ ಸಂಸ್ಥೆಗೆ ಇತ್ತೀಚಿಗೆ ಚುನಾಯಿತರಾದ ಚುನಾಯಿತ ಪ್ರತಿನಿಧಿಗಳು ಆರೋಪ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಚ್. ಎಸ್.ಯೋಗೇಶ್, ಸೆಪ್ಟೆಂಬರ್ 14ರಂದು ನಡೆದ ಚುನಾವಣೆಯಲ್ಲಿ ನಮ್ಮ ತಂಡದಿಂದ ಒಂಬತ್ತು ಮಂದಿ ಚುನಾವಣೆಯಲ್ಲಿ ಆಯ್ಕೆಯಾಗಿದ್ದೇವೆ. ಆದರೆ ಚುನಾವಣೆ ನಡೆದು ಎರಡು ತಿಂಗಳಾದರೂ ಸಹ ಸಂಸ್ಥೆಯ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳು ನಮಗೆ ಯಾವುದೇ ಅಧಿಕಾರ ನೀಡಿರುವುದಿಲ್ಲ. ಮಾತ್ರವಲ್ಲ ಯಾವುದೇ ಪ್ರಮಾಣ ವಚನವನ್ನು ಬೋಧಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಲ್ಲದೆ ಏಕಾಏಕಿ ನವೆಂಬರ್ 13ರ ಗುರುವಾರ ಏಕಾಯಕಿ ಸಭೆಯನ್ನು ಕರೆದು ತುರ್ತಾಗಿ ನಮ್ಮಗಳಿಗೆ ನೋಟಿಸ್ ಕಳಿಸಿದ್ದಾರೆ. ಜಿಲ್ಲಾಧಿಕಾರಿ ಅವರ ಏಕ ಪಕ್ಷ ನಿರ್ಧಾರವನ್ನು ವಿರೋಧಿಸಿ ಚುನಾವಣೆಯಲ್ಲಿ ಗೆದ್ದಂತಹ ನಾವು 9 ಜನ ಈ ಸಭೆಯನ್ನು ಬಹಿಷ್ಕರಿಸಿದ್ದೇವೆ ಎಂದು ಮಾಹಿತಿ ನೀಡಿದರು. ಇದಲ್ಲದೆ ಜಿಲ್ಲಾಧಿಕಾರಿಗಳನ್ನು ನಾವು ಮೂರುರಿಂದ ನಾಲ್ಕು ಬಾರಿ ಸಂಪರ್ಕಿಸಿ ಚುನಾಯಿತ ನಿರ್ದೇಶಕರಿಗೆ ಪ್ರಮಾಣ ವಚನವನ್ನು ಬೋಧಿಸಿ, ರೆಡ್ ಕ್ರಾಸ್ ಸಂಸ್ಥೆಯ ಕಾರ್ಯಗಳನ್ನು ಮಾಡುವಂತೆ ಹಲವಾರು ಬಾರಿ ಮಾಡಿಕೊಂಡು ಬಂದಿದ್ದೇವೆ ಆದರೆ ಇವರಿಗೂ ಜಿಲ್ಲಾಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಅಲ್ಲದೇ ನಾವೇ ಕೇಳಿದರೂ ನನಗೆ ಕಾನೂನು ತಿಳಿದಿದೆ ನನ್ನಂತೆ ನಾನು ಮಾಡುತ್ತೇನೆ ನೀವು ಏನು ಹೇಳಲು ಬರಬೇಡಿ ಎಂದು ಮಾತನಾಡುತ್ತಾರೆ ಎಂದರು.

ಇದಲ್ಲದೆ ಇದೀಗ ಜಿಲ್ಲಾಧಿಕಾರಿಗಳು ಕಾಂಗ್ರೆಸ್ ಪಕ್ಷದ 11 ಜನ ನಾಮನಿರ್ದೇಶನ ಸದಸ್ಯರನ್ನು ಆಯ್ಕೆ ಮಾಡಿದ್ದು, ಚುನಾಯಿತ ಸದಸ್ಯರ ಒಂಬತ್ತು ಸದಸ್ಯರಿದ್ದೇವೆ. ನಾಮನಿರ್ದೇಶತವಾಗಿ ಆಯ್ಕೆಯಾದ 11 ಜನರ ಪಟ್ಟಿಯ ದೊಡ್ಡದಿದೆ. ಇದರಿಂದಾಗಿ ನಾವು ಅಲ್ಲಿ ಯಾವುದೇ ಕೆಲಸಗಳನ್ನು ಮಾಡಲು ಆಗುತ್ತಿಲ್ಲ. ಏಕ ಪಕ್ಷವಾಗಿ ಈ ರೀತಿಯ ನಿರ್ಧಾರ ಕೈಗೊಂಡ ಜಿಲ್ಲಾಧಿಕಾರಿಗಳ ಕ್ರಮ ಸರಿಯಲ್ಲ. ಇದನ್ನು ವಿರೋಧಿಸಿ ಅಲ್ಲದೆ ಇದರ ವಿರುದ್ಧ ನಾವು ರಾಜ್ಯ ಹೈಕೋರ್ಟಿನಲ್ಲಿ ದಾವೆ ಹೂಡುವುದಾಗಿ ಎಚ್ಚರಿಕೆ ನೀಡಿದರು.

ಈ ಬೆಳಿಗ್ಗೆ ನಡೆಯಬೇಕಿದ್ದ ಸಭೆಗೆ ಚುನಾಯಿತ 9 ಸದಸ್ಯರು ಸಭೆಯು ಕಾನೂನಾತ್ಮಕವಾಗಿ ನಡೆಯುತ್ತಿಲ್ಲ ಎಂದು ಹೇಳಿ ಜಿಲ್ಲಾಧಿಕಾರಿಗಳಿಗೆ ತಕರಾರು ಅರ್ಜಿ ಸಲ್ಲಿಸಿ ಬಂದಿದ್ದೇವೆ. ಜಿಲ್ಲಾಧಿಕಾರಿಗಳು ಯಾವುದೋ ಒತ್ತಡಕ್ಕೆ ಮಣಿದು ಈ ರೀತಿ ಮಾಡುತ್ತಿದ್ದಾರೆ ಎನ್ನುವುದು ಮೇಲ್ನೋಟಕ್ಕೆ ಕಂಡುಬರುತ್ತದೆ ಎಂದು ಹೇಳಿದರು.

# ಆರ್‌ಟಿಓ ನಲ್ಲಿ ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ




**ದಾವಣಗೆರೆ:** ಇಲ್ಲಿನ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಗುರುವಾರ ವಾಯು ಮಾಲಿನ್ಯ ನಿಯಂತ್ರಣ ಜಾಗೃತಿ ಮಾಸಾಚಾರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಹಿರಿಯ ಮೋಟಾರ್ ವಾಹನ ನಿರೀಕ್ಷಕರಾದ ಅನಿಲ್ ಬಿ ಮಾಸೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರಿಸರದ ಮಾಲಿನ್ಯ ನಿಯಂತ್ರಣಕ್ಕೆ ವಾಹನಗಳ ಸ್ಥಿತಿ ಗತಿ ವಾಯುಮಾಲಿನ್ಯ ತಪಾಸಣೆ ಅಗತ್ಯವಿದೆ ಹಾಗೂ ವಾಹನಗಳಿಂದ ಉಗುಳುವ ಹೊಗೆ ಕಡಿಮೆ ಪ್ರಮಾಣದಲ್ಲಿ ಇಟ್ಟುಕೊಂಡು ವಾಹನವನ್ನು ಚಲಾಯಿಸುವುದರಿಂದ ವಾಯು ಶುದ್ಧವಾಗಿರಲಿದೆ ಎಂದರು.

ಹಿರಿಯ ಮೋಟಾರು ವಾಹನ ನಿರೀಕ್ಷಕರಾದ ಅನಿಲ್ ಬಿ ಮಾಸೂರು, ಸಾರಿಗೆ ಅಧೀಕ್ಷಕ ರವಿ, ಮೋಟಾರ್ ವಾಹನ ನಿರೀಕ್ಷಕ ಯಾದವ್ ಕುಮಾರ್, ನಾಸಿರ್ ಹುಸೇನ್, ಪೂಜಾ ಪಿ ನಾಯಕ್, ಕೈಸರ್, ವಾಹನ ಚಾಲನ ತರಬೇತಿ ಶಾಲೆಯ ಉಪಾಧ್ಯಕ್ಷ ಈಶ್ವರ್, ಗೌಸ್ ಮೋಹಮದ್, ಲೋಕೇಶ್, ಪ್ರಕಾಶ್, ಮುಜೀಬ್ ಉಲ್, ರೆಹಮಾನ್, ಮಾರುತಿ ಇತರರು ಉಪಸ್ಥಿತರಿದ್ದರು.

## ಗೃಹಸಚಿವರ ಅವಹೇಳನ; ಯುವಮೋರ್ಚಾ ಜಿಲ್ಲಾಧ್ಯಕ್ಷ ಜೈಲುಪಾಲು

# ಸಿ.ಟಿ.ರವಿಯಂತಹವರನ್ನು ಆದರ್ಶವನ್ನಾಗಿಸಿಕೊಂಡಿದ್ದರ ಪ್ರತಿಫಲ: ಎಂ.ಎಸ್.ಅನಂತ್ ಟೀಕೆ




**ಚಿಕ್ಕಮಗಳೂರು:** ಗೃಹ ಸಚಿವ ಪರಮೇಶ್ವರ್ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡಿರುವ ಬಿಜೆಪಿ ಯುವ ಮೋರ್ಚಾ ಜಿಲ್ಲಾಧಕ್ಷನ ವಿರುದ್ಧ ಪೊಲೀಸರು ಸರಿಯಾದ ಕಾನೂನು ಕ್ರಮಕೈಗೊಂಡಿದ್ದಾರೆ. ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸದ್ಯ ಸೆರೆಮನೆ ಸೇರಿದ್ದು, ಆತನಿಂದ ಈ ಕೃತ್ಯ ಎಸಗಿಸಿದ ಬಿಜೆಪಿ ಮುಖಂಡರು ರಾಜಾರೋಷವಾಗಿ ತಿರುಗಾಡುತ್ತಿದ್ದಾರೆ. ಸಂಘಪರಿವಾರ ಮತ್ತು ಬಿಜೆಪಿಯವರು ಶೋಷಿತ ಸಮುದಾಯಗಳ ಯುವಕರನ್ನು ತನ್ನ ಸ್ವಾರ್ಥಕ್ಕೆ ಹೇಗೆ ಬಳಸಿಕೊಂಡು ನಡು ನೀರಿನಲ್ಲಿ ಕೈಬಿಡುತ್ತದೆ ಎಂಬುದಕ್ಕೆ ಈ ಘಟನೆ ಸಾಕ್ಷಿಯಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಎಂ.ಎಸ್.ಅನಂತ್ ತಿಳಿಸಿದ್ದಾರೆ.

ಗುರುವಾರ ಈ ಸಂಬಂಧ ಪತ್ರಿಕಾ ಪ್ರಕಟನೆ ನೀಡಿರುವ ಅವರು, ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ ನೀಡಲಾಗುತ್ತಿದೆ ಎಂಬ ಮಾಧ್ಯಮಗಳಲ್ಲಿ ಬಿತ್ತರವಾದ ಸುದ್ದಿಯನ್ನು ಬಿಜೆಪಿ ತನ್ನ ರಾಜಕೀಯ ಲಾಭಕ್ಕೆ ಬಳಸಿಕೊಳ್ಳಲು ಹುನ್ನಾರ ನಡೆಸಿದೆ. ಜೈಲಿನಲ್ಲಿ ಕೈದಿಗಳಿಗೆ ರಾಜಾತಿಥ್ಯ ನೀಡಿದ ಜೈಲು ಅಧಿಕಾರಿಗಳ ವಿರುದ್ಧ ಸರಕಾರ ಅಗತ್ಯ ಕಾನೂನು ಕ್ರಮಕೈಗೊಂಡಿದೆ. ಈ ಘಟನೆಯನ್ನು ತಮ್ಮ ರಾಜಕೀಯ ಲಾಭಕ್ಕೆ ಬಳಸಿಕೊಳ್ಳಲು ಸಂಚು ಮಾಡಿದ್ದ ಬಿಜೆಪಿಯವರು ರಾಜ್ಯ ಸರಕಾರದ ಆಡಳಿತ ವೈಫಲ್ಯ ಎಂದು ಬಿಂಬಿಸಲು ಇತ್ತೀಚೆಗೆ ನಗರದಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದು, ಈ ಪ್ರತಿಭಟನೆಯಲ್ಲಿ ಬಿಜೆಪಿ ಯುವ ಮೋರ್ಚಾದ ಜಿಲ್ಲಾಧ್ಯಕ್ಷ ಸಂತೋಷ್ ಕೋಟ್ಯಾನ್ ಎಂಬಾತ ಗೃಹ ಸಚಿವರಿಗಿರುವ ಗೌರವದ ಸ್ಥಾನ ಮಾನದ ಅರಿವಿಲ್ಲದೇ ಓರ್ವ ಗೂಂಡನಂತೆ ಮಾತನಾಡಿದ್ದಾನೆ. ಗೃಹ ಸಚಿವರನ್ನು ಟೀಕಿಸುವ ಭರದಲ್ಲಿ ಅವರ ಮಗನ ವಿರುದ್ಧ ಸಾರ್ವಜನಿಕವಾಗಿ ಅಸಂಬದ್ಧವೂ, ಅವಹೇಳನಕಾರಿಯೂ ಆದ ಪದಗಳಿಂದ ನಿಂದಿಸಿದ್ದಾನೆ. ಈ ಘಟನೆ ಬಳಿಕ ಪೊಲೀಸರು ಸಂತೋಷ್ ಕೋಟ್ಯಾನ್ ವಿರುದ್ಧ ದೂರು ದಾಖಲಿಸಿಕೊಂಡು ಬಂಧಿಸುವ ಮೂಲಕ ಸರಿಯಾದ ಕಾನೂನು ಕ್ರಮಕೈಗೊಂಡಿದ್ದಾರೆ ಎಂದಿದ್ದಾರೆ.

ಗೃಹಸಚಿವ ಪರಮೇಶ್ವರ್ ರಾಜ್ಯಕಂಡ ಅಪರೂಪದ ರಾಜಕಾರಣಿಯಾಗಿದ್ದು, ಸಜ್ಜನಿಕೆ, ಪ್ರಾಮಾಣಿಕತೆಗೆ ಹೆಸರಾಗಿದ್ದಾರೆ. ವಿರೋಧ ಪಕ್ಷದವರಿಂದಲೂ ಪರಮೇಶ್ವರ್ ಗೌರವಕ್ಕೆ ಪಾತ್ರರಾಗುವ ಮೂಲಕ ಅಜಾತಶತ್ರು ಆಗಿದ್ದಾರೆ. ಇಂತಹ ಧೀಮಂತ ವ್ಯಕ್ತಿತ್ವದ ರಾಜಕಾರಣಿ ಬಗ್ಗೆ ಮಾತನಾಡುವ ಸಂದರ್ಭ ಎಂತಹವರೂ ಅಳೆದು ತೂಗಿ ಮಾತನಾಡುತ್ತಾರೆ, ಆದರೆ ಸಂಘಪರಿವಾರದ ಕೂಸಾಗಿರುವ ಹಾಗೂ ತಲೆಯಲ್ಲಿ ಜಾತಿ, ಮತದ ವಿಷದ ಅಮಲು ತುಂಬಿಸಿಕೊಂಡಿರುವ ಸಂತೋಷ್ ಕೋಟ್ಯಾನ್ ಗೃಹ ಸಚಿವರ ಕುಟುಂಬಸ್ಥರ ವಿರುದ್ಧ ಸಾರ್ವಜನಿಕವಾಗಿ ಬಾಯಿಗೆ ಬಂದಂತೆ ಮಾತನಾಡುವ ಮೂಲಕ ತೇಜೋವಧೆ ಮಾಡಿದ್ದಾನೆ. ಈತನ ವಿರುದ್ಧ ಪೊಲೀಸರು ಗಂಭೀರ ಕಾನೂನು ಕ್ರಮಕೈಗೊಳ್ಳಬೇಕು ಮತ್ತು ಈತನ ಜೊತೆಯಲ್ಲಿ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಬಿಜೆಪಿ ನಾಯಕರ ವಿರುದ್ಧವೂ ಕಾನೂನು ಕ್ರಮ ಜರುಗಿಸಬೇಕು ಎಂದವರು ಒತ್ತಾಯಿಸಿದ್ದಾರೆ.

ಸಿ.ಟಿ.ರವಿ, ಪ್ರತಾಪ್‌ಸಿಂಹ, ಚಕ್ರವರ್ತಿ ಸೂಲಿಬೆಲೆಯಂತಹ ಕೋಮುಭಾವನೆ ಪ್ರಚೋಧಿಸುವವರನ್ನೇ ಮಾದರಿ, ಆದರ್ಶವನ್ನಾಗಿಸಿಕೊಂಡಿದ್ದರ ಫಲವಾಗಿ ಸಂತೋಷ್ ಕೋಟ್ಯಾನ್ ಗೃಹಸಚಿವರ ವಿರುದ್ಧ ಬಾಯಿಗೆ ಬಂದಂತೆ ಮಾತನಾಡಿ ಜೈಲು ಪಾಲಾಗಿದ್ದಾನೆ. ಬಿಜೆಪಿ, ಸಂಘಪರಿವಾರದ ನಾಯಕರ ಈ ದುರುದ್ದೇಶವನ್ನು ಇನ್ನಾದರೂ ಬಿಜೆಪಿ ಪಕ್ಷದಲ್ಲಿರುವ ಶೋಷಿತ ಸಮುದಾಯಗಳ ಯುವಕರು ಅರ್ಥ ಮಾಡಿಕೊಳ್ಳಬೇಕು, ಜಾತಿ, ಧರ್ಮದ ಮಧವನ್ನು ನೆತ್ತಿಗೇರಿಸಿಕೊಂಡು ಯಾರದ್ದೋ ಸ್ವಾರ್ಥಕ್ಕಾಗಿ ಸಮಾಜದಲ್ಲಿ ಶಾಂತಿ ಕದಡಿ ಕಡೆಯಲ್ಲಿ ಬೀದಿಪಾಲಾಗುತ್ತಿರುವ ಬಿಜೆಪಿ, ಸಂಘಪರಿವಾರದಲ್ಲಿರುವ ಯುವಕರು ಇನ್ನಾದರೂ ಜಾಗೃತರಾಗಿ ಬಿಜೆಪಿ ಪಟಾಲಂ ತೊರೆಯಬೇಕೆಂದು ಅವರು ಕರೆ ನೀಡಿದ್ದಾರೆ.

# ಗಾಯಾಳುಗಳಿಗೆ ಕೂಡಲೇ ಪರಿಹಾರ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚನೆ




**ಹಾಸನ:** ಜಿಲ್ಲೆಯಲ್ಲಿ ವನ್ಯ ಜೀವಿಗಳ ದಾಳಿಯಿಂದ ಗಾಯಗೊಂಡವರಿಗೆ ಕೂಡಲೇ 24 ಗಂಟೆಯೊಳಗೆ ಪರಿಹಾರ ನೀಡಲು ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಮಾನವ ಮತ್ತು ಪ್ರಾಣಿಗಳ ಸಂಘರ್ಷ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು 2025 ರ ಜನವರಿಯಿಂದ ಇದುವರೆಗೆ ಸಂಭವಿಸಿರುವ ಅವಘಡಗಳು, ಸಾವು,ಗಾಯಗೊಂಡವರ ಪಟ್ಟಿಯನ್ನು ತಾಲ್ಲೂಕುವಾರು ಸಿದ್ದಪಡಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಗಾಯಗೊಂಡವರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾಗೂ ಸರ್ಕಾರದಲ್ಲಿ ಎಪೆನಾಲ್ ಆಗಿರುವ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ನೀಡಲು ಒಂದು ಸುತ್ತೋಲೆ ಹೊರಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತಾಲ್ಲೂಕು ಆರೋಗ್ಯ ಅಧಿಕಾರಿಗಳು ವಿಳಂಬ ಮಾಡದೆ ಗಾಯಾಳುಗಳ ಆರೋಗ್ಯದ ಮೇಲೆ ಉಂಟಾಗಿರುವ ತೀವ್ರತೆಯನ್ನು ಅರಿತು ತಕ್ಷಣ ಪ್ರಮಾಣ ಪತ್ರವನ್ನು ನೀಡಿ ಪರಿಹಾರ ನೀಡಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಪರಿಹಾರಕ್ಕೆ ಜನರು ಅಲೆದಾಟ ಮಾಡದಂತೆ ಎಚ್ಚರಿಕೆವಹಿಸಿ ಪರಿಹಾರ ಒದಗಿಸಲು ಅಧಿಕಾರಿಗಳಿಗೆ ತಿಳಿಸಿದರು.ಶಾಶ್ವತ ಅಂಗವಿಕಲತೆಗೆ 10 ಲಕ್ಷ, ಭಾಗಶಃ ಅಂಗವಿಕಲತೆಗೆ 5 ಲಕ್ಷ ಪರಿಹಾರ ನೀಡಲು ಅಧಿಕಾರಿಗಳು ನಿಗಾವಹಿಸಲು ನಿರ್ದೇಶನ ನೀಡಿದರು.ಬೆಳೆ ,ಪೈಪ್ ಲೈನ್ ,ಗೇಟ್, ಕಾಂಪೌಂಡ್, ಶೇಡ್ ಮೇಲೆ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಪರಿಹಾರ ನೀಡಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.ತೆಂಗು, ಅಡಿಕೆ,ಕಾಫಿ, ಮೆಣಸು ಮತ್ತಿತರ ತೋಟಗಾರಿಕೆ ಬೆಳೆಗಳನ್ನು ವನ್ಯ ಪ್ರಾಣಿಗಳು ದಾಳಿ ಮಾಡಿ ನಷ್ಟ ಉಂಟು ಮಾಡಿದಾಗ ಸೂಕ್ತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದಕ್ಕೆ ನೆರವಾಗುವಂತೆ ಒಂದು ಸಮಿತಿ ರಚಿಸಿ ವರದಿ ತಯಾರಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಿಕ್ಕೋಡು, ಅರೆಹಳ್ಳಿ ವ್ಯಾಪ್ತಿಯಲ್ಲಿ ಆನೆಗಳು ಓಡಾಡುವುದರಿಂದ ಸಾರ್ವಜನಿಕರು ಕತ್ತಲೆ ಸಮಯದಲ್ಲಿ ಎಚ್ಚರವಹಿಸಲು ಸಹಕಾರಿಯಾಗುವಂತೆ ರಸ್ತೆಯ ತಿರುವಿನಲ್ಲಿ ಹಾಗೂ ಎರಡು ಬದಿಗಳಲ್ಲಿ ವಿದ್ಯುತ್ ದೀಪ ಅಳವಡಿಳಸಲು ಕ್ರಮ ವಹಿಸುವಂತೆ ಜಿಲ್ಲಾ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಿದರು.

ಮಲೆನಾಡು ಪ್ರದೇಶದಲ್ಲಿ ನೆಟ್ ವರ್ಕ್ ಸಿಗದಿರುವ ಗ್ರಾಮಗಳು ಮತ್ತು ಸ್ಥಳಗಳನ್ನು ಗುರುತಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅರೆಹಳ್ಳಿಯಲ್ಲಿ ಸುಸ್ಸಜ್ಜಿತ ಅಂಬುಲೆನ್ಸ್ 24ಥ7 ಲಭ್ಯವಿರುವಂತೆ ನೋಡಿಕೊಳ್ಳಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅವರಿಗೆ ಸೂಚಿಸಿದರು.

# ಇಂದು ವೃತ್ತಿ ರಂಗಭೂಮಿ ರಂಗಾಯಣದ ಪ್ರಥಮ ಪ್ರಯೋಗದ ಪ್ರತಿಗಂಧರ್ವ ನಾಟಕ ಪ್ರದರ್ಶನ

**ದಾವಣಗೆರೆ:** ಡಾ. ರಹಮತ್ ತರೀಕೆರೆ ಅವರ ಅಮೀರಬಾಯಿ ಕರ್ನಾಟಕಿ ಕೃತಿ ಪ್ರೇರಿತ ಡಾ. ರಾಜಪ್ಪ ದಳವಾಯಿ ವಿರಚಿತ ಹಾಗೂ ವೃತ್ತಿ ರಂಗಭೂಮಿ ರಂಗಾಯಣದ ಪ್ರಥಮ ಪ್ರಯೋಗದ ಪ್ರತಿಗಂಧರ್ವ ನಾಟಕ ನ. 15ರಂದು ಸಂಜೆ 6ಗಂಟೆಗೆ ನಗರದ ದೃಶ್ಯಕಲಾ ಮಹಾವಿದ್ಯಾಲಯದ ಬಯಲು ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿದೆ ಎಂದು ವೃತ್ತಿ ರಂಗಭೂಮಿ ರಂಗಾಯಣದ ನಿರ್ದೇಶಕ ಮಲ್ಲಿಕಾರ್ಜುನ್ ಕಡಕೋಳ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡುವರು. ಪರಿಚಯ ಪುಸ್ತಕವನ್ನು ಚಿಂತಕ ಪ್ರೊ.ರಹಮತ್ ತರೀಕೆರೆ ಬಿಡುಗಡೆಗೊಳಿಸುವರು. ನಾಟಕಕಾರದ ಮೈಸೂರಿನ ರಾಜಪ್ಪ ದಳವಾಯಿ, ರಂಗ ನಿರ್ದೇಶಕ ಮಾಲತೇಶ ಬಡಿಗೇರ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದರು.

ಸುರೇಂದ್ರ ಗೋಕರ್ಣ, ಡಾ. ಶೃತಿ ರಾಜ್, ಬಿ. ಸುಜಾತ ನೀಲಗುಂದ, ಕಲ್ಪನಾ ನಾಕೋಡ್, ಸೋಮಶೇಖರ್ ಧಾರವಾಡ, ಸಂತೋಷ್ ಸಂಗನಾಳ, ಶ್ವೇತಾ ವೈ., ಪ್ರಕೃತಿ ಜಿ.ಎಂ., ಮಲ್ಲೇಶಿ ದಾವಣಗೆರೆ, ಬಸವರಾಜ ಕಡ್ಲೆಬಾಳು, ಕರಣ್ ಕುಮಾರ್ ಬೆಂಗಳೂರು, ಮುಖೇಶ್ ಕುಮಾರ್ ಹರಪನಹಳ್ಳಿ, ಅಮಿತ್ ಕುಮಾರ್ ಮಂಡಲೂರು ನಟನೆ ರಂಗದ ಮೇಲೆ ಮಾಡುವರು. ಮಾಲತೇಶ ಬಡಿಗೇರ ನಿರ್ದೇಶನ, ರವಿ ಮೂರೂರು ಸಂಗೀತ, ಪ್ರಕಾಶ್ ಬಡಿಗೇರ ತಬಲಾ, ರಂಗಸ್ವಾಮಿ ಕೆ. ಬೆಳಕು, ಛಾಯಾ ಭಾರ್ಗವಿ ವಸ್ತ್ರ ವಿನ್ಯಾಸ ನೆರವೇರಿಸುವರು ಎಂದು ತಿಳಿಸಿದರು.

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿದ ಮೂರು ಕೋಟಿ ರೂ.ಗಳಲ್ಲಿ ರಂಗಾಯಣ ಆಡಳಿತ ಕಚೇರಿ, ನಿರ್ದೇಕರ ಕೊಠಡಿ, ಸಿಬ್ಬಂದು ಕೊಠಡಿ, ಕಲಾವಿದರ ಕೊಠಡಿ, ಮ್ಯೂಸಿಯಂ ನಿರ್ಮಾಣ ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ಮಲ್ಲಿಕಾರ್ಜುನ್ ಕಡಕೋಳ ಇದೇ ಸಂದರ್ಭದಲ್ಲಿ ತಿಳಿಸಿದರು.

ಕಲಾವಿದರಾದ ಮಾಲತೇಶ್ ಬಡಿಗೇರ ಬಸನಗೌಡ್ರ, ನಾಗೇಂದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಸುದ್ದಿಗೋಷ್ಠಿಯಲ್ಲಿದ್ದರು.

# ಸಹಕಾರ ರತ್ನ' ಪ್ರಶಸ್ತಿಗೆ ಶರಣಪ್ಪ ಅಲಬನೂರು ಆಯ್ಕೆ

**ಬಳ್ಳಾರಿ:** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಿಂದ ನೀಡಲಾಗುವ ರಾಜ್ಯ ಮಟ್ಟದ 'ಸಹಕಾರ ರತ್ನ'ಗೆ ಬಳ್ಳಾರಿ ಜಿಲ್ಲಾ ಕೈಗಾರಿಕಾ, ಸರಬರಾಜು ಮತ್ತು ಮಾರಾಟ ಸಹಕಾರ ಸಂಘದ ಉಪಾಧ್ಯಕ್ಷ ಶರಣಪ್ಪ ಅಲಬನೂರು ಭಾಜನರಾಗಿದ್ದಾರೆ.

ಸಹಕಾರ ರಂಗದಲ್ಲಿ ಸಲ್ಲಿಸಿದ ಅನುಪಮ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗುತ್ತಿದೆ. ಬೆಂಗಳೂರಿನ ಅರಮನೆ ಮೈದಾನದ 'ಗಾಯತ್ರಿ ವಿಹಾರ್'ದಲ್ಲಿ ನ.14, ರಂದು ಬೆಳಗ್ಗೆ 10 ಗಂಟೆಗೆ ರಾಜ್ಯ ಸರ್ಕಾರದಿಂದ ಆಯೋಜಿಸಿರುವ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಉಪದ್ಘಾಟನಾ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ ಎಂದು ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶರಣಪ್ಪ ಅಲಬನೂರು: 97413 37707

# ಸರ್ಕಾರ ರೈತ ವಿರೋಧಿ ನೀತಿ ಅನುಸರಿಸಿ ಅವರನ್ನು ಆತ್ಮಹತ್ಯೆಗೆ ಪ್ರಚೋದಿಸುತ್ತಿದೆ: ಎಂ.ಪಿ.ಆರ್. ಕಿಡಿ

**ದಾವಣಗೆರೆ:** ರಾಜ್ಯ ಸರ್ಕಾರ ಕೃಷಿ ಉತ್ಪನ್ನ ಮಾರಾಟ ಮಾಡುವ ದಲ್ಲಾಳಿಗಳೊಂದಿಗೆ ಶಾಮೀಲಾಗಿ ರೈತರು ಆತ್ಮಹತ್ಯೆ ಮಾಡಿಕೊಳ್ಳಲು ಪ್ರಚೋದನೆ ನೀಡುತ್ತಿದೆ ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ವೇಳೆ ರಾಜ್ಯ ಸರ್ಕಾರ ದಲ್ಲಾಳಿಗಳೊಂದಿಗೆ ಶಾಮೀಲಾಗದೇ ಇದ್ದರೆ ಮೆಕ್ಕೆಜೋಳ ಹಾಗೂ ಭತ್ತಕ್ಕೆ ಕೂಡಲೇ ಪ್ರೋತ್ಸಾಹಧನ ಘೋಷಿಸಿ, ಖರೀದಿ ಕೇಂದ್ರ ತೆರೆದು ರೈತರ ಹಿತ ಕಾಪಾಡಬೇಕು ಸವಾಲು ಹಾಕಿದರು. ಮೆಕ್ಕೆಜೋಳ ಹಾಗೂ ಭತ್ತ ಬೆಳೆಗೆ ಪ್ರೋತ್ಸಾಹಧ ಘೋಷಿಸುವ ಮೂಲಕ ರಾಜ್ಯ ಸರ್ಕಾರ ತನ್ನ ರೈತಪರ ಇಚ್ಚಾಶಕ್ತಿ ಹಾಗೂ ಬದ್ಧತೆ ಪ್ರದರ್ಶಿಸಬೇಕು.ಇಲ್ಲದಿದ್ದರೆ ರೈತ ಒಕ್ಕೂಟದ ನೇತೃತ್ವದಲ್ಲಿ ದೊಡ್ಡ ಮಟ್ಟದ ಹೋರಾಟ ರೂಪಿಸಲಾಗುವುದು. ಇದಕ್ಕಾಗಿ ಶೀಘ್ರದಲ್ಲಿಯೇ ರೈತರ ಪೂರ್ವಭಾವಿ ಸಭೆ ಕರೆದು, ಹೋರಾಟ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಪ್ರಸ್ತುತ ಮೆಕ್ಕೆಜೋಳ ಹಾಗೂ ಭತ್ತ ಬೆಳೆದ ರೈತರು ಸಂಕಷ್ಟದಲ್ಲಿದ್ದಾರೆ. ಪ್ರಸ್ತುತ ಕೇಂದ್ರ ಸರ್ಕಾರ ಭತ್ತ ಕ್ವಿಂಟಾಲ್‌ಗೆ 2389ರೂ. ಬೆಂಬಲಬೆಲೆ ನಿಗದಿಪಡಿಸಿದೆ. ರಾಜ್ಯ ಸರ್ಕಾರ ಪಕ್ಕದ ತೆಲಂಗಾಣ ಸರ್ಕಾರದ ಮಾದರಿಯಲ್ಲಿ ಪ್ರತಿ ಕ್ವಿಂಟಾಲ್‌ಗೆ 1000ರೂ. ಪ್ರೋತ್ಸಾಹಧನ ನೀಡಬೇಕು. ಇನ್ನು ಮೆಕ್ಕೆಜೋಳ ಕ್ವಿಂಟಾಲ್‌ಗೆ 3000ರೂ. ದರ ನಿಗದಿಪಡಿಸಿ ಖರೀದಿ ಕೇಂದ್ರಗಳ ಮೂಲಕ ಖರೀದಿಸಲು ಕ್ರಮವಹಿಸಬೇಕು ಎಂದು ಒತ್ತಾಯಿಸಿದರು.

ಅದನ್ನೂ ಸರ್ಕಾರ ಮಾಡುತ್ತಿಲ್ಲ. ರಾಜ್ಯ ಸರ್ಕಾರ ರೈತರ ಪಾಲಿಗೆ ಸತ್ತು ಹೋಗಿದ್ದು ಐಸಿಯುನಲ್ಲಿದೆ. ಅಕಾರಕ್ಕೆ ಬಂದು ಮೂರು ವರ್ಷಗಳಾಗುತ್ತ ಬಂದರೂ ಸರ್ಕಾರ ಇನ್ನೂ ಟೇಕ್ ಆಫ್ ಆಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಜಿಲ್ಲಾ ರೈತ ಒಕ್ಕೂಟದ ಅಧ್ಯಕ್ಷ ಕೊಳೇನಹಳ್ಳಿ ಸತೀಶ್ ಬಿ.ಎಂ., ಪ್ರಮುಖರಾದ ಲೋಕಿಕೆರೆ ನಾಗರಾಜ್, ಚಂದ್ರಶೇಖರ್ ಪೂಜಾರ್, ಕಂದಗಲ್ ರೇವಣ್ಣ, ರೇವಣಸಿದ್ದಪ್ಪ, ಆನಂದ್ ಇನ್ನಿತರರು ಸುದ್ದಿಗೋಷ್ಠಿಯಲ್ಲಿದ್ದರು.

# ರೂ.27.93 ಕೋಟಿ ಪ್ರಸ್ತಾವನೆಗೆ ಸಚಿವ ಸಂಪುಟ ಅನುಮೋದನೆ



**ಹಾಸನ:** ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ (ಊಖಒಖ)ನ್ನು ಮತ್ತಷ್ಟು ಅಭಿವೃದ್ಧಿಪಡಿಸಿ, ಹಾಸನ ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ ಪೂರೈಸಲು ನಮ್ಮ ಸರ್ಕಾರ ಮತ್ತೊಂದು ಹೆಜ್ಜೆಯನ್ನು ಇಟ್ಟಿದೆ. ಹಾಸನ ಜಿಲ್ಲೆಯ ಉಸ್ತುವಾರಿ ಜವಾಬ್ದಾರಿಯನ್ನು ವಹಿಸಿಕೊಂಡ ಕೂಡಲೇ ಸೆಪ್ಟೆಂಬರ್ 22 ರಂದು ಸೂಪರ್ ಸ್ಪೇಷಲಿಟಿ ಆಸ್ಪತ್ರೆ ಕಟ್ಟಡ ನಿರ್ಮಾಣ, ನಿಂತಿದ್ದ ಕಾಮಗಾರಿ ಪೂರ್ಣಗೊಳಿಸಲು ರೂ.9 ಕೋಟಿಗೂ ಹೆಚ್ಚು ಅನುದಾನ ಮಂಜೂರು ಮಾಡಲಾಗಿದೆ. ಕಟ್ಟಡ ಬಾಕಿ ಕಾಮಗಾರಿ ಪೂರ್ಣಗೊಳಿಸುವ ಕೆಲಸ ನಡೆದಿದೆ.

ಸೂಪರ್ ಸ್ಪೇಷಲಿಟಿ ಆಸ್ಪತ್ರೆ ಸಂಪೂರ್ಣ ಕಾರ್ಯ ರೂಪಕ್ಕೆ ತರಲು ಮತ್ತೊಂದು ದೊಡ್ಡ ಹೆಜ್ಜೆಯನ್ನು ನಮ್ಮ ಸರ್ಕಾರ ಇಟ್ಟಿದೆ. ಸೆಪ್ಟೆಂಬರ್ 6 ರಂದು ಸದರಿ ಆಸ್ಪತ್ರೆಗೆ ಭೇಟಿ ನೀಡಿ, ಸೂಪರ್ ಸ್ಪೇಷಲಿಟಿ ಆಸ್ಪತ್ರೆ ತುರ್ತಾಗಿ ಕಾರ್ಯ ಪ್ರಾರಂಭಿಸಲು, ಪ್ರಾಥಮಿಕ ಹಂತದಲ್ಲಿ ಕಾರ್ಡಿಯಾಲಿಜಿ, ನ್ಯೂರಾಲಜಿ, ನ್ಯೂರೋಸರ್ಜರಿ, ಯುರಾಲಜಿ ಮತ್ತು ಕಾರ್ಡಿಯಾ ಥೊರಾಸಿಕ್ ಸರ್ಜರಿ ವಿಭಾಗಗಳಿಗೆ ಅವಶ್ಯಕವಿರುವ ಉಪಕರಣ ಮತ್ತು ಪಿಠೋಪಕರಣಗಳು ಹಾಗೂ ಇದಕ್ಕೆ ಅವಶ್ಯ ಅನುದಾನದ ಅಂದಾಜು ವೆಚ್ಚಕ್ಕೆ ಪ್ರಸ್ತಾವನೆ ಸಲ್ಲಿಸಲು ಹಾಗೂ ಕ್ಯಾತ್ ಲ್ಯಾಬ್ ಸೌಲಭ್ಯಗಳನ್ನು ಒಳಗೊಂಡು ಕಾರ್ಡಿಯಾಕ್ ಯುನಿಟ್‌ನ್ನು ಸ್ಥಾಪಿಸಲು ಅಗತ್ಯ ಅನುದಾನದ ಅಂದಾಜು ಮೊತ್ತಕ್ಕೆ ಮನವಿ ಸಲ್ಲಿಸಲು ಸೂಚಿಸಲಾಗಿತ್ತು. ಇದರಂತೆ, ವೈದ್ಯಕೀಯ ಉಪಕರಣಗಳು, ಅವಶ್ಯ ಪೀಠೋಪಕರಣಗಳು ಮತ್ತು ಕ್ಯಾತ್ ಲ್ಯಾಬ್‌ನೊಂದಿಗೆ ಕಾರ್ಡಿಯಾಕ್ ಯುನಿಟ್ ಒಳಗೊಂಡು 05 ಸೂಪರ್ ಸ್ಪೇಷಲಿಟಿ ವಿಭಾಗಗಳನ್ನು ಆರಂಭಿಸಲು ಒಟ್ಟು ರೂ. 27.93 ಕೋಟಿ ಅನುದಾನದ ಅವಶ್ಯಕತೆಯನ್ನು ಭರಿಸಲು ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ (ಊಖಒಖ) ರವರು ಪ್ರಸ್ತಾವನೆ ಸಲ್ಲಿಸಿದ್ದಾರೆ.

ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರ ರೂ.27.93 ಕೋಟಿ ಪ್ರಸ್ತಾವನೆಗೆ ಅನುಮೋದನೆ ಮಾಡಿ ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆ (ಊಖಒಖ) ಸೂಪರ್ ಸ್ಪೇಷಲಿಟಿ ಆಸ್ಪತ್ರೆಯನ್ನು ತ್ವರಿತವಾಗಿ ಕಾರ್ಯರೂಪಕ್ಕೆ ತರಲು ತೀರ್ಮಾನಿಸಿದೆ. ಹಾಸನ ಜಿಲ್ಲೆಯ ಜನರ ಆರೋಗ್ಯದ ಅವಶ್ಯಕತೆಗಳನ್ನು ಸಮರ್ಪಕವಾಗಿ ಪೂರೈಸಲು ಇದು ಸಹಕಾರಿಯಾಗಲಿದೆ. ನಮ್ಮ ಮನವಿಗೆ ಸ್ಪಂದಿಸಿ, ಹಾಸನ ಜಿಲ್ಲೆಯ ಜನರ ದ್ವನಿಗೆ ಗೌರವಿಸಿ ರೂ.27.93 ಕೋಟಿ ಪ್ರಸ್ತಾವನೆಗೆ ಒಪ್ಪಿಗೆ ನೀಡಿದ ವೈದ್ಯಕೀಯ ಶಿಕ್ಷಣ ಸಚಿವರು ಮತ್ತು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ರವರಿಗೆ ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಬೈರೇಗೌಡ ಅವರು ಧನ್ಯವಾದಗಳನ್ನು ತಿಳಿಸಿದ್ದಾರೆ.

## ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನಲ್ಲಿ "ಶ್ರೀ ಅನ್ವೇಷಣಾ-2025" ಸಮಾರಂಭ

# ಶಿಕ್ಷಣದಲ್ಲಿ ತಾರತಮ್ಯ ಧೋರಣೆ ಸಲ್ಲದು ಡಾ.ಬಾಲಗುರುಮೂರ್ತಿ



**ತುಮಕೂರು:** ಶಿಕ್ಷಣದಲ್ಲಿನ ತಾರತಮ್ಯ ನೀತಿ ಅಪಾಯಕಾರಿ ಬೆಳವಣಿಗೆಯಾಗಿದೆ. ಇಂಜಿನಿಯರಿಂಗ್ ಮೆಡಿಕಲ್, ಶಿಕ್ಷಣ ಮೇಲು ಕಲೆ ಮತ್ತು ಕಾಮರ್ಸ್ ಕೀಳು ಎಂಬ ಮನೋಭಾವ, ಪ್ರವೃತ್ತಿ ಸಮಾಜದಲ್ಲಿ ಮತ್ತು ಪೋಷಕರಲ್ಲಿ ಹೆಚ್ಚಾಗುತ್ತಿದೆ ಇದು ಅತ್ಯಂತ ಅಪಾಯಕಾರಿ ಬೆಳವಣಿಗೆಯಾಗಿದೆ ಎಂದು ತುಮಕೂರಿನ ಪದವಿ ಪೂರ್ವ ಇಲಾಖೆಯ ಉಪನಿರ್ದೇಶಕರಾದ ಡಾ.ಬಾಲಗುರುಮೂರ್ತಿ ರವರು ಅಭಿಪ್ರಾಯಪಟ್ಟಿದ್ದಾರೆ.

ನಗರದ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ "ಶ್ರೀಅನ್ವೇಷಣಾ-2025" ವಿದ್ಯಾರ್ಥಿಗಳ ವಿಜ್ಞಾನದ ಪ್ರತಿಭೆಗಳ ಅನಾವರಣದ ವೇದಿಕೆಯ ಕಾರ್ಯಕ್ರಮವನ್ನು ನ.13 ರಂದು ಗುರುವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಅಡಿಟೋರಿಯಂ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ಡಾ.ಬಾಲಗುರುಮೂರ್ತಿ ರವರು ಮಾತನಾಡುತ್ತಾ ಸಮಾಧಾನಕರ ಸಂಗತಿ ಎಂದರೆ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಇಂತಹ ತಾರತಮ್ಯ ತೊಡೆದು ಹಾಕುವಲ್ಲಿ ಸ್ವಲ್ಪಮಟ್ಟಿಗೆ ಸಹಕಾರಿಯಾಗಿದೆ. ವಿಜ್ಞಾನದ ವಿದ್ಯಾರ್ಥಿ ಇಷ್ಟಪಟ್ಟರೆ ರಾಜಕೀಯ, ಸಮಾಜಶಾಸ್ತ್ರವನ್ನು ಅಭ್ಯಾಸ ಮಾಡಬಹುದು. ಅದೇ ರೀತಿ ಕಲಾವಿಭಾಗದ ವಿದ್ಯಾರ್ಥಿ ಆಸಕ್ತಿ ಇದ್ದರೆ ಭೌತಶಾಸ್ತ್ರ ಮತ್ತು ರಾಸಾಯನ ಶಾಸ್ತ್ರವನ್ನು ಅಭ್ಯಾಸ ಮಾಡಬಹುದು ಎಂದು ಉದಾಹರಣೆ ನೀಡಿದರು. ಇಂದು ಶಿಕ್ಷಣ ಯಾವ ಮಟ್ಟಕ್ಕೆ ಹೋಗುತ್ತಿದೆ ಎಂದರೆ ವೈದ್ಯರೇ ವಿಧ್ವಂಸಕ, ರಾಷ್ಟ್ರದ್ರೋಹಿ ಕೆಲಸದಲ್ಲಿ ಭಾಗಿಯಾಗುತ್ತಿದ್ದಾರೆ. ನಮ್ಮ ಶಿಕ್ಷಣ ನಮ್ಮ ಸಮಾಜ ಯಾವ ಕಡೆಗೆ ಹೋಗುತ್ತಿದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕಿದೆ. ವಿಜ್ಞಾನ ಎಂದರೇನು ವೈಚಾರಿಕ ಮನೋಭಾವ ಶಿಸ್ತು ಬೆಳೆಸುವುದು ಮತ್ತು ಹುಡುಕಾಟ ವಿಜ್ಞಾನಯಾಗಿದೆ. ಇಂಜಿನಿಯರಿಂಗ್, ಮೆಡಿಕಲ್ ಮಾತ್ರ ಶ್ರೇಷ್ಠ ಕಾಮರ್ಸ್ ಕನಿಷ್ಠ ಎಂಬ ಮನೋಭಾವ ಸಲ್ಲದು. ತುಮಕೂರು ಜಿಲ್ಲೆಯಲ್ಲಿ 60ಸಾವಿರ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ಇದರಲ್ಲಿ 30 ಸಾವಿರ ವಿದ್ಯಾರ್ಥಿಗಳು ವಿಜ್ಞಾನದ ವಿಷಯ ಕಲಿಯುತ್ತಿದ್ದಾರೆ ಜ್ಞಾನ ಎಂದಿಗೂ ಅಹಂಕಾರ ಕೊಡುವುದಿಲ್ಲ ಬದಲಿಗೆ ವಿವೇಕ ಮತ್ತು ಎತ್ತರದ ಸ್ಥಾನಕ್ಕೆ ತೆಗೆದುಕೊಂಡು ಹೋಗುತ್ತದೆ. ಇತ್ತೀಚಿನ ದಿನಗಳಲ್ಲಿ ಕಾಮರ್ಸ್ ವಿಷಯ ಜಾಗತಿಕ ಮಹತ್ವ ಪಡೆಯುತ್ತಿದೆ ಅದೇ ರೀತಿ ಹೆಚ್ಚಿನ ಉದ್ಯೋಗಾವಕಾಶಗಳು ದೊರಕುತ್ತಿದೆ. ತುಮಕೂರು ಜಿಲ್ಲೆಯನ್ನು ಕರ್ಮಭೂಮಿನ್ನಾಗಿ ಮಾಡಿಕೊಂಡು ತಮ್ಮ ಸತತ ಪರಿಶ್ರಮದಿಂದ ರಾಜ್ಯಕ್ಕೆ ಮಾದರಿಯಾಗುವಂತಹ ವಿದ್ಯಾಸಂಸ್ಥೆಯನ್ನು ಕಟ್ಟಿ ಜಿಲ್ಲೆಗೆ ಅಮೂಲ್ಯ ಕೊಡುಗೆ ನೀಡಿರುವ ಡಾ.ಎಂ.ಆರ್. ಹುಲಿನಾಯ್ಕರ್ ಸಾಧನೆ ಅನನ್ಯ ಮತ್ತು ಸುವರ್ಣಾಕ್ಷರಗಳಲ್ಲಿ ಬರೆದಿಡುವಂತದ್ದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ವಿಜ್ ಪ್ರದರ್ಶನದಲ್ಲಿ ಪ್ರೆಸಿಡೆನ್ಸಿ ಪಿ.ಯು. ಕಾಲೇಜಿನ ಪ್ರಥಮ ಬಹುಮಾನ ನೂತನ್‌ಕುಮಾರ್ ಎಲ್ ಮತ್ತು ವಿರಾಟ್ ಎನ್ ಗೌಡ, ಸರ್ಕಾರಿ ಪಿ.ಯು.ಕಾಲೇಜಿನ ದ್ವಿತೀಯ ಬಹುಮಾನವನ್ನು ಸ್ನೇಹ ಎಂ.ಜಿ ಮತ್ತು ಅಭಿಷ್ಯಂತ್ ತೃತೀಯ ಬಹುಮಾನವನ್ನು ಕೀರ್ತಿ ಬಿ.ಎಸ್. ಮತ್ತು ನಯನಾ ಆರ್.ಎ. ಕ್ವಿಜ್ ಪ್ರದರ್ಶನ ಪಡೆದುಕೊಂಡಿದ್ದಾರೆ. ಭಿತ್ತಿ ಪತ್ರಗಳ ಸ್ಪರ್ಧೆಯಲ್ಲಿ ತುರುವೇಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಥಮ ಬಹುಮಾನ ಸಿಂಚನಾ ಎಂ.ಬಿ, ಮಾನಸ ಹೆಚ್.ಎಸ್, ದ್ವಿತೀಯ ಬಹುಮಾನವನ್ನು ಧನಲಕ್ಷ್ಮಿ ಎ.ಎನ್. ಮತ್ತು ಸೋನಾಕ್ಷಿ ಎಸ್ ಭಿತ್ತಿಪತ್ರ ಬಹುಮಾನ ಪಡೆದುಕೊಂಡಿದ್ದಾರೆ. ಮಂಡಲ್ ಪ್ರದರ್ಶನದಲ್ಲಿ ಶ್ರೀಸಪ್ತಗಿರಿ ಪಿ.ಯು.ಕಾಲೇಜಿನ ಪ್ರಥಮ ಬಹುಮಾನ ಹರ್ಷ ಪಿ, ಹೊನೇಶ್ ಪಿ.ಎ ಮತ್ತು ಅಮೋಘ ಸಿಂಹ ದ್ವಿತೀಯ ಬಹುಮಾನವನ್ನು ಶುಭೋದಯ ಪಿ.ಯು. ಕಾಲೇಜಿನ ಸರನ್ ಎ, ಮತ್ತು ಶ್ರೇಯಸ್ ಬಿ.ಎಸ್.ಬಹುಮಾನವನ್ನು ಪಡೆದಿದ್ದಾರೆ. ಶ್ರೀಅನ್ವೇಷಣಾ ಸ್ಪರ್ಧೆಯಲ್ಲಿ ತುಮಕೂರು ಜಿಲ್ಲೆ ಎಲ್ಲಾ ತಾಲೂಕಿನ ಹಾಗೂ ವಿವಿಧ ಜಿಲ್ಲೆಗಳಿಂದ 350 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಉಪಪ್ರಾಂಶುಪಾಲರಾದ ಡಾ.ಚಂದ್ರಶೇಖರ್.ಎನ್ ಕಾರ್ಯಕ್ರಮದ ಮುಖ್ಯಸಂಯೋಜಕರಾದ ಶ್ರೀದೇವಿ ಎಂ.ಬಿ.ಎ. ವಿಭಾಗದ ಪ್ರೊ.ಪ್ರವೀಣ್ ಕುಮಾರ್ ಟಿ.ಎಂ, ಪ್ರವೇಶ ಅಧಿಕಾರಿ ಹಾಗೂ ಎಂಸಿಎ ವಿಭಾಗದ ಸಹಾಯಕ ಪ್ರಾಧ್ಯಾಪಕರ ಮತ್ತು ಮುಖ್ಯಸ್ಥರಾದ ಕಾವ್ಯಕುಮಾರ್ ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ಗ್ರಾಹಕರ ಸಂವಾದ ಸಭೆ

**ಚಿಕ್ಕಬಳ್ಳಾಪುರ :** ದಿನಾಂಕ 15.11.2025 ರಂದು ಶನಿವಾರ ಮಧ್ಯಾಹ್ನ 3 ಗಂಟೆಗೆ ಚಿಕ್ಕಬಳ್ಳಾಪುರ ವಿಭಾಗ ವ್ಯಾಪ್ತಿಯ ಬೆ.ವಿ.ಕಂ, ಉಪ ವಿಭಾಗ ಕಚೇರಿಗಳಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಹಾಗೂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ರವರ ಅಧ್ಯಕ್ಷತೆಯಲ್ಲಿ ಗ್ರಾಹಕರ ಸಂವಾದ ಸಭೆಯನ್ನು ಏರ್ಪಡಿಸಲಾಗಿದ್ದು, ಆಯಾ ಉಪ ವಿಭಾಗ ವ್ಯಾಪ್ತಿಗೆ ಒಳಪಡುವ ಗ್ರಾಹಕರು ಸಭೆಗೆ ಹಾಜರಾಗಿ, ವಿದ್ಯುತ್ ಸರಬರಾಜಿಗೆ ಸಂಬಂಧಪಟ್ಟಂತೆ ಏನಾದರೂ ಕುಂದು ಕೊರತೆಗಳು ಇದ್ದಲ್ಲಿ ಕಾನೂನಾತ್ಮಕವಾಗಿ ಪರಿಹರಿಸಿಕೊಳ್ಳುವಂತೆ ಬೆ.ವಿ.ಕಂ ಕಾರ್ಯನಿರ್ವಾಹಕ ಇಂಜಿನಿಯರ್ ಪಿ.ಜಿ.ರಮೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದರು.

# ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕೃಷಿ ಇಲಾಖೆಯ ಯೋಜನೆಯಾದ ಆತ್ಮ ಯೋಜನೆಯಡಿ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗಳನ್ನು ಕೃಷಿ ಹಾಗೂ ಕೃಷಿ ಸಂಬಂಧಿಸಿದ ಕ್ಷೇತ್ರಗಳಲ್ಲಿ/ ಚಟುವಟಿಕೆಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡು ಅನುಷ್ಠಾನಗೊಳಿಸುತ್ತಿರುವ ರೈತರಿಗೆ/ ರೈತ ಮಹಿಳೆಯರಿಗೆ ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ.

ಸಾಧನೆ ಏನಿರಬೇಕು?

ಪ್ರಶಸ್ತಿಗಾಗಿ ರೈತರು ಭಾಗವಹಿಸಬಹುದಾದ ಕೃಷಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಾದ ಸಮಗ್ರ ಕೃಷಿ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣಗಳ ಬಳಕೆ, ತೋಟಗಾರಿಕೆ ಬೆಳೆಗಳ ಅಳವಡಿಕೆ, ಕೋಳಿ ಸಾಕಾಣಿಕೆ, ಹಂದಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಕೃಷಿ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ, ಜೇನು ಕೃಷಿ, ಆಡು, ಕುರಿ, ಮೊಲ ಸಾಕಾಣಿಕೆ, ಹಸಿರು ಮನೆಯಲ್ಲಿ ತರಕಾರಿ ಮತ್ತು ಹೂ ಬೇಸಾಯ ಇತ್ಯಾದಿ ಚಟುವಟಿಕೆಗಳ ಕ್ಷೇತ್ರಗಳಲ್ಲಿ ವಿಶೇಷ ಸಾಧನೆಗಳಿಸಿರುವ ರೈತರು/ ರೈತ ಮಹಿಳೆಯರು ಜಿಲ್ಲಾ ಮಟ್ಟ ಮತ್ತು ತಾಲ್ಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗಳಿಗೊಅರ್ಜಿಗಳನ್ನು ಸಲ್ಲಿಸಬಹುದು. ಅರ್ಹ ಆಸಕ್ತ ರೈತರು/ ರೈತ ಮಹಿಳೆಯರು ಅರ್ಜಿಗಳನ್ನು ಜಂಟಿ ಕೃಷಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು (ಆತ್ಮ) ಚಿಕ್ಕಬಳ್ಳಾಪುರ ಇವರ ಕಚೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಅಥವಾ ಆಯಾ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ದಿನಾಂಕ:25.11.2025ರ ಸಂಜೆ 05:00 ಗಂಟೆಯೊಳಗಾಗಿ ಸಲ್ಲಿಸಲು ಮಾನ್ಯ ಜಂಟಿ ಕೃಷಿ ನಿರ್ದೇಶಕರು ಹಾಗೂ ಆತ್ಮ ಯೋಜನಾ ನಿರ್ದೇಶಕ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ದೇಸಿ ತಳಿಗಳ ಸಂರಕ್ಷಣೆಗೆ ಕೃಷಿ ಇಲಾಖೆ ಉತ್ತೇಜನ

**ಚಿಕ್ಕಮಗಳೂರು:** ಕಣ್ಮರೆಯಾಗುತ್ತಿರುವ ಸ್ಥಳೀಯ ಮತ್ತು ಸಾಂಪ್ರದಾಯಿಕ ದೇಸಿ ತಳಿ ಸಂರಕ್ಷಿಸುವ ಹಾಗೂ ಉತ್ತೇಜಿಸುವ ರಾಜ್ಯ ಸರ್ಕಾರದ ಕಾರ್ಯಕ್ರಮದಲ್ಲಿ ದೇಸಿ ತಳಿಗಳ ನೋಂದಣಿಗೆ ಕೆ-ಕಿಸಾನ್ ಮೊಬೈಲು ಅಪ್ಲಿಕೇಶನ್ ಬಿಡುಗಡೆಗೊಳಿಸಿದ್ದು ಜಿಲ್ಲೆಯಲ್ಲಿ ಈವರೆಗೆ ಆಸಕ್ತ 18 ಜನ ರೈತರನ್ನು ನೋಂದಾಯಿಸಲಾಗಿದೆ.

ಭತ್ತ, ರಾಗಿ, ಗೋಧಿ, ಜೋಳ, ತೊಗರಿ, ಹುರಳಿ, ಅವರೆ, ಅಲಸಂದೆ, ಮಡಕೆಕಾಳು, ಹೆಸರು, ಹುಚ್ಚೆಳ್ಳು, ಕುಸುಬೆ, ಎಳ್ಳು,, ನವಣೆ, ಸಾಮೆ, ಊದಲು, ಕೊರಲೆ, ಹಾರಕ, ಬರಗು, ಮೆಣಸಿನಕಾಯಿ ಮತ್ತು ಸಲಹಾ ಸಮಿತಿ ಶಿಫಾರಸ್ಸು ಮಾಡಿದ ಇತರ ಬೆಳೆಗಳ ದೇಸಿ ತಳಿಗಳನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು.ದೇಸಿ ತಳಿಗಳು ಆಯಾ ಸ್ಥಳೀಯ ಪ್ರದೇಶಕ್ಕೆ ಸೂಕ್ತವಾದ, ಋತುಮಾನಕ್ಕೆ ಹೊಂದಿಕೊಳ್ಳುವ, ಕೀಟ-ರೋಗ ನಿರೋಧಕ ಶಕ್ತಿ ಹೊಂದಿರುವ, ಔಷಧೀಯ ಅಂಶಗಳಿಂದ ಕೂಡಿದ್ದು, ಪೋಷಕಾಂಶಗಳ ಆಗರವಾಗಿವೆ. ಈ ದೇಸಿ ತಳಿಗಳನ್ನು ಸಂರಕ್ಷಿಸುತ್ತಿರುವ ರೈತರು ಹೆಚ್ಚಿನ ಮಾಹಿತಿಗೆ ಹೋಬಳಿಯ ರೈತ ಸಂಪರ್ಕ ಕೇಂದ್ರ, ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕರಾದ ತಿರುಮಲೇಶ ಎಂ. ಅವರು ಕೋರಿದ್ದಾರೆ.

# ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಶಿವಮೊಗ್ಗ ಎನ್.ಟಿ.ರಸ್ತೆ, ನ್ಯೂಮಂಡ್ಲಿ, ಮೆಸ್ಕಾಂ ಉಪವಿಭಾಗ -2 ಕಛೇರಿಯಲ್ಲಿ ನ 17 ರಂದು ಬೆಳಿಗ್ಗೆ 11.00ರಿಂದ 01.00 ಗಂಟೆಯವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದ್ದು, ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದಾರೆ. ಈ ಸಭೆಯಲ್ಲಿ ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಕೃಷಿ ಮಾಹಿತಿ ಕೇಂದ್ರ ಹಾಗೂ ಕೈತೋಟ ಉದ್ಘಾಟನೆ



**ದಾವಣಗೆರೆ :** ನ್ಯಾಮತಿ ತಾಲೂಕಿನ ಹೊಸ ಜೋಗ ಗ್ರಾಮದಲ್ಲಿ ಇತ್ತೀಚೆಗೆ ಅಕ್ಟೋಬರ್ 31 ರಂದು ಸಂಜೆ ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಇರುವಕ್ಕಿ ಹಾಗೂ ಕೃಷಿ ಮಹಾವಿದ್ಯಾಲಯ ನವಿಲೆ ಶಿವಮೊಗ್ಗ ಕಾಲೇಜಿನ ವಿದ್ಯಾರ್ಥಿಗಳು ಗ್ರಾಮೀಣ ಕೃಷಿಕಾರ್ಯಾನುಭವ ಕಾರ್ಯಕ್ರಮದ ಅಂಗವಾಗಿ "ಜೋಗದ ಸಿರಿ" ಎಂಬ ಶೀರ್ಷಿಕೆಯಡಿ "ಕೃಷಿ ಮಾಹಿತಿ ಕೇಂದ್ರ ಹಾಗೂ ಕೈತೋಟ ಉದ್ಘಾಟನೆ ಮತ್ತು ವಿಚಾರ ಸಂಕಿರಣ ಸಮಾರಂಭ" ಆಯೋಜಿಸಲಾಗಿತ್ತು.

ಈ ವೇಳೆ ಹೊನ್ನಾಳಿ ಶಾಸಕ ಡಿ.ಜಿ.ಶಾಂತನಗೌಡ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ಕೆ.ಶಿ.ನಾ. ಕೃ.ತೋ.ವಿ.ವಿ. ನಿರ್ದೇಶಕ ಡಾ.ಹಮ್ಲಾ ನಾಯ್ಕ, ಕೃಷಿ ಮಹಾವಿದ್ಯಾಲಯ ಡೀನ್ ಡಾ.ಡಿ.ತಿಪ್ಪೇಶ್, ಗ್ರಾಮೀಣ ಕೃಷಿ ಕಾರ್ಯಾನುಭವ ಸಂಯೋಜಕ ಡಾ.ಗಜೇಂದ್ರ ಸೇರಿ ಮತ್ತಿತರರು ಇದ್ದರು.

# ಜನಜಾತೀಯ ಗೌರವ ದಿನ: ಜಾಗೃತಿ ಜಾಥಾ



**ಚಿಕ್ಕಮಗಳೂರು:** ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ ವತಿಯಿಂದ ನಗರದ ಸರ್ಕಾರಿ ಜೂನಿಯರ್ ಕಾಲೇಜು ಆವರಣದಲ್ಲಿ ಇಂದು ಭಗವಾನ್ ಬಿರ್ಸಾ ಮುಂಡ ಜಯಂತಿ ಹಾಗೂ ಜನಜಾತೀಯ ಗೌರವ ದಿನದ ಪ್ರಯುಕ್ತ ವಿಶೇಷ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿತ್ತು.

ಸಂಸದ ಕೋಟ ಶ್ರೀನಿವಾಸ ಪೂಜಾರಿ ಜಾಥಾಗೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬುಡಕಟ್ಟು ಸಮುದಾಯದ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದ ವತಿಯಿಂದ ಹತ್ತು ಹಲವು ಯೋಜನೆಗಳನ್ನು ಜಾರಿಗೆ ತರಲಾಗಿದೆ. ಶಿಕ್ಷಣ, ಆರೋಗ್ಯ ಸೇರಿದಂತೆ ಎಲ್ಲ ರೀತಿಯ ಮೂಲ ಸೌಲಭ್ಯ ಒದಗಿಸುವ ಮೂಲಕ ಅವರ ಸಬಲೀಕರಣಕ್ಕಾಗಿ ಶ್ರಮಿಸಲಾಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ವಂದೇ ಮಾತರಂ ಸಮೂಹ ಗಾಯನ ನಡೆಸಲಾಯಿತು. ತಾಯಿಯ ಹೆಸರಿನಲ್ಲಿ ಸಸಿ ನೆಡುವ ಅಭಿಯಾನದಡಿ ಕಾಲೇಜು ಆವರಣದಲ್ಲಿ ಸಸಿ ನೆಡಲಾಯಿತು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕರಾದ ತಿಮ್ಮರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರೇಶ್, ಕ್ಷೇತ್ರ ಪ್ರಚಾರ ಅಧಿಕಾರಿ ಅಕ್ಷತಾ ಸಿ.ಎಚ್. ಮತ್ತಿತರರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಪರೀಕ್ಷಾ ಭಯ-ಆತಂಕ ನಿವಾರಣೆ ಬಗ್ಗೆ ಸಂವಾದ

# ಶೈಕ್ಷಣಿಕ ವರ್ಷದ ಕಾರ್ಯಕ್ರಮ ಬಗ್ಗೆ ಜಿ.ಪಂ.ಸಿಇಓ ಕೀರ್ತನಾ ಮಾಹಿತಿ



**ಚಿಕ್ಕಮಗಳೂರು:** ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಭಯ ಮತ್ತು ಆತಂಕ ನಿವಾರಣೆ, ಏಕಾಗ್ರತೆ ಸಾಧಿಸುವುದು, ಮಾನಸಿಕ ಒತ್ತಡ ನಿವಾರಣೆಗಳ ಬಗ್ಗೆ ಸಂವಾದ ಪ್ರೇರಣಾ ಕಾರ್ಯಕ್ರಮಗಳನ್ನು ಶೈಕ್ಷಣಿಕ ವರ್ಷದಲ್ಲಿ ತಜ್ಞರಿಂದ ಏರ್ಪಡಿಸುವ ಬಗ್ಗೆ ನವೆಂಬರ್ 14 ರಂದು ಪೋಷಕ-ಶಿಕ್ಷಕರ ಮಹಾಸಭೆಯಲ್ಲಿ ಪೋಷಕರಿಗೆ ತಿಳಿಸಲಾಗುವುದು ಎಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ತಿಳಿಸಿದರು.

ರಾಜ್ಯದ ಎಲ್ಲ ಸರ್ಕಾರಿ ಶಾಲಾ-ಕಾಲೇಜುಗಳ ಎಲ್ಲ ಪ್ರಮುಖ ಪಾಲುದಾರರನ್ನು ತಲುಪಲು ನವೆಂಬರ್ 14 ರಂದು ಮಕ್ಕಳ ದಿನಾಚರಣೆಯ

ಪ್ರಯುಕ್ತ ರಾಜ್ಯಾದ್ಯಂತ ಏಕಕಾಲದಲ್ಲಿ 2025-26ನೇ ಸಾಲಿನ ಪೋಷಕ-ಶಿಕ್ಷಕರ ಮಹಾಸಭೆಯನ್ನು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಆಯೋಜಿಸಲು ಸರ್ಕಾರ ಉದ್ದೇಶಿಸಿರುವ ಬಗ್ಗೆ ಜಿ.ಪಂ. ಮಿನಿ ವಿಧಾನ ಸಭಾಂಗಣದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಈ ಸಭೆಯಲ್ಲಿ ಪೋಷಕರು ಹಾಗೂ ವಿದ್ಯಾರ್ಥಿಗಳಿಗೆ ಪ್ರೋತ್ಸಾಹದಾಯಕ ಮಾತುಗಳನ್ನು ಹೇಳಲಾಗುವುದು ಎಂದರು.

ಮಕ್ಕಳ ಕಲಿಕಾ ಪ್ರಗತಿ ಹಾಜರಾತಿ ಮಾಹಿತಿ ಹಂಚಿಕೆ, ಪೋಷಕರೊಂದಿಗೆ ಮಕ್ಕಳ ಪ್ರಗತಿ ಪತ್ರ ವಿತರಣೆ ಮತ್ತು ಪ್ರಗತಿಯ ಬಗ್ಗೆ ಚರ್ಚಿಸಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷಾ ಸಿದ್ಧತೆಗೆ ಅನುಕೂಲಿಸಲು ಅಧ್ಯಾಯವಾರು, ವಿ?ಯವಾರು ನೀಲ ನಕ್ಷೆ, ಪ್ರಶ್ನೆ ಕೋಠಿ, ಮಾದರಿ ಪ್ರಶ್ನೆಪತ್ರಿಕೆಗಳು, ಮೌಲ್ಯಮಾಪನ ವಿಧಾನ, ನಡೆಸಲಾಗುತ್ತಿರುವ ಪೂರ್ವ ಸಿದ್ಧತಾ ಪರೀಕ್ಷೆಗಳು, 2 ಅಂತಿಮ ಪರೀಕ್ಷೆಗಳನ್ನು ನಡೆಸುತ್ತಿರುವ ಬಗ್ಗೆ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ತಿಳಿಸಲಾಗುತ್ತದೆ. ಬಾಲ್ಯ ವಿವಾಹ ನಿಷೇಧ ಮತ್ತು ಕಾರ್ಮಿಕ ನಿಷೇಧ ನೀತಿಗಳ ಬಗ್ಗೆ, ಮಾಹಿತಿ ಮತ್ತು ವಿಶೇಷಚೇತನ ಮಕ್ಕಳಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಬಗ್ಗೆ ಪೋಷಕರಿಗೆ ಅರಿವು ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

, ಕೆ.ಪಿ.ಎಸ್. ಪಿ.ಎಂ.ಶ್ರೀ ಹಾಗೂ ಆಯ್ಕೆ, ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಆರಂಭಿಸಿರುವ ದ್ವಿಭಾ ಮಾಧ್ಯಮ ತರಗತಿಗಳು ಮತ್ತು ಪೂರ್ವ ಪ್ರಾಥಮಿಕ ತರಗತಿಗಳ ಬಗ್ಗೆ ಪೋಷಕರಲ್ಲಿ ಅರಿವು ಮೂಡಿಸುವುದು. ಹೆಚ್ಚು ದಾಖಲಾತಿ ಹೊಂದಿರುವ ಸರ್ಕಾರಿ ಶಾಲಾ-ಕಾಲೇಜುಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಿ ಹೆಚ್ಚುವರಿ ಅನುದಾನ ನೀಡಿ ಅಭಿವೃದ್ಧಿಪಡಿಸುತ್ತಿರುವ ಬಗ್ಗೆ ಮಾಹಿತಿ ನೀಡಲಾಗುವುದು ಎಂದು ಹೇಳಿದರು.ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ(ಆಡಳಿತ) ತಿಮ್ಮರಾಜು, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ(ಅಭಿವೃದ್ಧಿ) ಸುಂದ್ರೇಶ್, ಸುದ್ದಿಗೋಷ್ಠಿಯಲ್ಲಿದ್ದರು.

# ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಓದುವ ಮಕ್ಕಳ ಪ್ರೋತ್ಸಾಹ ಧನ ಹೆಚ್ಚಿಸಿ ಮಹತ್ವದ ಆದೇಶ

ಹಾಸನ : ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬಂತೆ ಕಾಂಗ್ರೆಸ್ ಸರ್ಕಾರವು ರಾಷ್ಟ್ರೀಯ ಸಂಸ್ಥೆಯಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು ಹೆಚ್ಚಿಸಿ ಹೊರಡಿಸಿರುವ ಸರ್ಕಾರದ ಆದೇಶ ಸ್ವಾಗತಾರ್ಹ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರರು ಹಾಗೂ ಹಾಗೂ ಮಾಜಿ ಜಿ.ಪಂ ಸ್ಥಾಯಿ ಸಮಿತಿ ಅಧ್ಯಕ್ಷರಾದ ಡಿ.ಸಿ ಸಣ್ಣಸ್ವಾಮಿ ಸರ್ಕಾರಕ್ಕೆ ಅಭಿನಂದನೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆಯನ್ನು ನೀಡಿರುವ ಅವರು, ಋಋಖ/ಋಋಒ/ಋಋಋಅ /ಓಋಖ ಯಂತಹ ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಖಅ/ಋಖ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದೇಶ ಹೊರಡಿಸಿದ್ದು ಇದು ಪರಿಶಿಷ್ಟ ಸಮುದಾಯದ ವಿದ್ಯಾರ್ಥಿಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣವಾಗಲಿದೆ.

ಇನ್ನು ಪಿಯುಸಿ ಪರೀಕ್ಷೆಯಲ್ಲಿ 95ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ

ದೊರಕದೇ ಮ್ಯಾನೇಜ್ ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್ ಗೆ ಸೀಟು ಪಡೆದುಕೊಂಡ ಪರಿಶಿಷ್ಟ ಜಾತಿಯ ಮಕ್ಕಳಿಗೆ 25 ಲಕ್ಷ ರೂಪಾಯಿಗಳ ಶುಲ್ಕ ಧನವನ್ನು ಒದಗಿಸಲು ಸರ್ಕಾರ ತೀರ್ಮಾನಿಸಿದೆ. ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ 60% ಗೂ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣರಾದರೆ ಅವರಿಗೆ, ಮತ್ತೆ 25 ಲಕ್ಷ ರೂಪಾಯಿಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವರಾಡ್ ಡಾ. ಮಹದೇವಪ್ಪ ತಿಳಿಸಿದ್ದಾರೆ.

ಈ ಒಂದು ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದರಿಂದ ಉನ್ನತ ಶಿಕ್ಷಣ ಮಾಡಬೇಕೆಂಬ ವಿದ್ಯಾರ್ಥಿಗಳ ಕನಸ್ಸು ನನಸಾಗಲಿದೆ. ಬಾಬಾ ಸಾಹೇಬರ ಆಶಯದಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಹೆಚ್ಚು ಆಸಕ್ತಿ ಹೊಂದಿ, ಶ್ರಮ ಹಾಕಿ ಓದಬೇಕು ಎಂದು ಡಿಸಿ ಸಣ್ಣಸ್ವಾಮಿ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದ್ದಾರೆ.

# ಇಂದು ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ

**ಬಳ್ಳಾರಿ:** ಬಳ್ಳಾರಿ ಗ್ರಾಮೀಣ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಶಾಖೆ-2 ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ನ.15 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 01.30 ಗಂಟೆಯವರೆಗೆ ಎಸ್.ಜೆ ಕೋಟೆ ಗ್ರಾಮದ ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮೋಹನಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳ ಚುನಾವಣಾ ವೇಳಾಪಟ್ಟಿ

**ಶಿವಮೊಗ್ಗ:**ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1996(ಜಿಲ್ಲಾ ಯೋಜನಾ ಸಮಿತಿಯ ಸದಸ್ಯರುಗಳ ಚುನಾವಣೆ) ನಿಯಮಗಳು 1996 ರ ನಿಯಮ 8 ರ ಪ್ರಕಾರ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಮತಕ್ಷೇತ್ರದಿಂದ ಶಿವಮೊಗ್ಗ ಜಿಲ್ಲೆಯ ಜಿಲ್ಲಾ ಯೋಜನಾ ಸಮಿತಿಗೆ ಸದಸ್ಯರ ಸ್ಥಾನಗಳಿಗೆ ಚುನಾವಣೆ ನಡೆಸಬೇಕಿದ್ದು. ಜಿ.ಪಂ.ಸಿಇಓ ಮತ್ತು ಜಿಲ್ಲಾ ಯೋಜನಾ ಸಮಿತಿ ಚುನಾವಣೆಗಳ ಪದನಿಮಿತ್ತ ಚುನಾವಣಾಧಿಕಾರಿ ಹೇಮಂತ್ ಎನ್ ಈ ಕೆಳಗಿನಂತೆ ಕಾರ್ಯಕ್ರಮ ವೇಳಾಪಟ್ಟಿಯನ್ನು ನಿಗದಿಪಡಿಸಿರುತ್ತಾರೆ.

ದಿ: 13-11-2025 ರಿಂದ 24-11-2025 ರ ಬೆಳಿಗ್ಗೆ 10 ರಿಂದ ಅಪರಾಹ್ನ 3 ಗಂಟೆವರೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಚೇರಿಯಲ್ಲಿ ನಾಮನಿರ್ದೇಶನಗಳನ್ನು ಸಲ್ಲಿಸುವುದು. ದಿ: 26-11-2025 ರ ಬೆಳಿಗ್ಗೆ 11 ಗಂಟೆಗೆ ಮುಖ್ಯ ಕಾರ್ಯನಿರ್ವಾಹಕ

ಅಧಿಕಾರಿಯವರ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ. ದಿ: 29-11-2025 ರ ಬೆಳಿಗ್ಗೆ 10 ರಿಂದ ಅಪರಾಹ್ನ 3 ರವರೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನ.

ದಿ: 05-12-25 ರ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ಶಿವಮೊಗ್ಗ ಜಿಲ್ಲಾ ಪಂಚಾಯತ್

ಸಭಾಂಗಣದಲ್ಲಿ ಮತದಾನ ನಡೆಯಲಿದ್ದು ದಿ: 05-12-2025 ರ ಸಂಜೆ 5 ಗಂಟೆಯಿಂದ ಜಿ.ಪಂ ಸಭಾಂಗಣದಲ್ಲಿ ಮತ ಎಣಿಕೆ ಪ್ರಕ್ರಿಯೆ ನಡೆಯಲಿದೆ. ದಿ: 06-12-2025 ಚುನಾವಣಾ ಪ್ರಕ್ರಿಯೆ ಕೊನೆಗೊಳ್ಳುವ ದಿನಾಂಕ.

ಭದ್ರಾವತಿ ನಗರಸಭೆ ಮತ್ತು ತೀರ್ಥಹಳ್ಳಿ ಪಟ್ಟಣ ಪಂಚಾಯ್ತಿಗಳಿಂದ ಒಟ್ಟು 06 ಜನಪ್ರತಿನಿಧಿಗಳನ್ನು ಚುನಾಯಿಸಲಾಗುತ್ತಿದ್ದು, 50 ಮತದಾರರು ಇದ್ದಾರೆ ಎಂದು ಜಿಲ್ಲಾ ಯೋಜನಾ ಸಮಿತಿ ಚುನಾವಣೆ ಚುನಾವಣಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹೇಮಂತ್ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೂರ್ಣಗೊಂಡಿರುವ ಕಾಮಗಾರಿಗಳ ಮಾಹಿತಿ ನೀಡಲು ಸೂಚನೆ

**ಹಾಸನ :** ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಮೂಲಕ ಪೂರ್ಣಗೊಂಡಿರುವ ಕಾಮಗಾರಿಗಳ ಉದ್ಘಾಟನೆ, ಕಾಮಗಾರಿಗಳ ಶಂಕುಸ್ಥಾಪನೆಗೆ ಹಾಗೂ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸವಲತ್ತು ವಿತರಣೆಗಾಗಿ ಸಂಪೂರ್ಣ ಮಾಹಿತಿಯನ್ನು ನೀಡುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಅಧಿಕಾರಿಗಳೊಂದಿಗೆಸಭೆ ನಡೆಸಿ ಮಾತನಾಡಿದ ಅವರುಮಾನ್ಯ ಮುಖ್ಯಮಂತ್ರಿಯವರು ಡಿ.06 ರಂದು ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ತಮ್ಮ ತಮ್ಮ ಇಲಾಖೆಯ ಮಾಹಿತಿಗಳನ್ನು ನೀಡುವಂತೆ ನಿರ್ದೇಶನ ನೀಡಿದರು.

ಅಪರ ಜಿಲ್ಲಾಧಿಕಾರಿ ಮಂಜುನಾಥ್,ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ ಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು,ಭೂ ದಾಖಲೆಗಳ ಇಲಾಖೆಯ ಉಪ ನಿರ್ದೇಶಕರಾದ ಹೇಮಲತಾ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

## ಬಿರ್ಸಾ ಮುಂಡ ಜಯಂತಿ ಪ್ರಯುಕ್ತ ಛಾಯಾಚಿತ್ರ ಪ್ರದರ್ಶನ

**ಚಿಕ್ಕಮಗಳೂರು:** ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ, ಬುಡಕಟ್ಟು ವ್ಯವಹಾರಗಳ ಸಚಿವಾಲಯ, ಚಿಕ್ಕಮಗಳೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಾಳೆ ಹಾಗೂ ನಾಡಿದ್ದು ನಗರದ ಕುವೆಂಪು ಕಲಾ ಮಂದಿರದಲ್ಲಿ ಭಗವಾನ್ ಬಿರ್ಸಾ ಮುಂಡ ಜಯಂತಿ ಹಾಗೂ ಜನಜಾತೀಯ ಗೌರವ ದಿನದ ಪ್ರಯುಕ್ತ ವಿಶೇಷ ಛಾಯಾಚಿತ್ರ ಪ್ರದರ್ಶನ ಆಯೋಜಿಸಲಾಗಿದೆ.

ಜನಜಾತೀಯ ಗೌರವ ದಿನದ ಮಹತ್ವ ಹಾಗೂ ಬುಡಕಟ್ಟು ಸಮುದಾಯದ ಏಳಿಗೆಗಾಗಿ ಕೇಂದ್ರ ಸರ್ಕಾರ ಪರಿಚಯಿಸಿರುವ ವಿವಿಧ ಯೋಜನೆಗಳ ಮಾಹಿತಿ ಹೊಂದಿರುವ ಛಾಯಾಚಿತ್ರಗಳು ಪ್ರದರ್ಶನದಲ್ಲಿ ಇರಲಿವೆ. ಅಲ್ಲದೇ, ಆಯ್ದ ಕೇಂದ್ರ ಪುರಸ್ಕೃತ ಯೋಜನೆಗಳಾದ ಪಿ.ಎಂ.ಸ್ವನಿಧಿ, ಪಿ.ಎ.ವಾತ್ಸಲ್ಯ, ಮಾತೃ ವಂದನ ಯೋಜನೆ ಸೇರಿದಂತೆ ಹಲವು ಜನಪರ ಯೋಜನೆಗಳ ಮಾಹಿತಿಯನ್ನು ಹೊಂದಿರುವ ಛಾಯಾಚಿತ್ರಗಳ ಪ್ರದರ್ಶನ ನಡೆಯಲಿದೆ. ಕೇಂದ್ರ ಸಂವಹನ ಇಲಾಖೆಯ ಕಲಾ ತಂಡಗಳು ಸಾಂಸ್ಕೃತಿಕ ಪ್ರದರ್ಶನ ನೀಡಲಿವೆ.

## ಇಂದು ತಾ.ಪಂ. ಸಾಮಾನ್ಯ ಸಭೆ

**ಚಿಕ್ಕಮಗಳೂರು:** ತಾಲ್ಲೂಕು ಪಂಚಾಯಿತಿಯ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ತಾ.ಪಂ. ಆಡಳಿತಾಧಿಕಾರಿ ಜಿ.ಪಂ. ಉಪಕಾರ್ಯದರ್ಶಿ (ಆಡಳಿತ) ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ತಾ.ಪಂ. ಸಾಮಾನ್ಯ ಸಭೆಯನ್ನು ಕರೆಯಲಾಗಿದೆ ಎಂದು ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಸಲು ನವೆಂಬರ್ 18 ಕೊನೆಯ ದಿನ

**ಗದಗ :** ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ ಖಿಂರಿ –2025–26 ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ ಅನುಮೋದನೆಗೊಂಡ 02 ಎಮ್,ಬಿ,ಬಿಎಸ್ ವೈದ್ಯಾಧಿಕಾರಿಗಳು, 02 ಶುಶ್ರೂಷ ಅಧಿಕಾರಿಗಳ ಮತ್ತು 02 ಪ್ರಯೋಗಶಾಲಾ ತಂತ್ರಜ್ಞರುಗಳ ಹುದ್ದೆಗಳು ಖಾಲಿಯಿದ್ದು ಸದರಿ ಹುದ್ದೆಗಳನ್ನು ರೋಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಹುದ್ದೆಗಳಿಗೆ ಅಪಲೋಡ್ ಆಗಿರುವ ಅರ್ಜಿಗಳಲ್ಲಿ ರೋಷ್ಟರ್ ಕಂ ಮೆರಿಟ್ ಅಳವಡಿಸಿ ತಯಾರಿಸಿದ ಅಭ್ಯರ್ಥಿಗಳಿಗೆ ಮೂಲ ದಾಖಲಾತಿಗಳ ಪರಿಶೀಲನಗೆ ಒಳಪಡಿಸಿ ಅರ್ಹಹೊಂದಿದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದ್ದು. ಸದರಿ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಾಗಿ ದಿನಾಂಕ:13.11.2025 ರಿಂದ 18.11.2025ರ ಸಂಜೆ 04.00 ಗಂಟೆಯವರೆಗೆ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ, ಜಿಲ್ಲಾಡಳಿತ ಭವನ, ರೋಮ್ ನಂ:101 ಹುಬ್ಬಳ್ಳಿ ರೋಡ್, ಗದಗ ಇಲ್ಲಿಗೆ ಆಕ್ಷೇಪಣೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ತದನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

## ಯುವನಿಧಿ ಸ್ವಯಂ ಘೋಷಣೆ ಪ್ರತಿ ತಿಂಗಳು ಕಡ್ಡಾಯ

**ದಾವಣಗೆರೆ :** ಗ್ಯಾರಂಟಿ ಯೋಜನೆ ಯುವನಿಧಿ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕಾಗಿರುತ್ತದೆ. ಆದ್ದರಿಂದ ಯುವನಿಧಿ ಯೋಜನೆಯ ಫಲಾನುಭವಿಗಳು ಮೊಬೈಲ್ ಮೂಲಕ ಅಥವಾ ಹತ್ತಿರದ ದಾವಣಗೆರೆ ಒನ್, ಗ್ರಾಮ ಒನ್ ಸೆಂಟರ್‌ಗಳಲ್ಲಿ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾಡಳಿತ ಭವನ, ದಾವಣಗೆರೆ ಇವರನ್ನು ಸಂಪರ್ಕಿಸಬಹುದೆಂದು ಇಲಾಖೆಯ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

# ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕಾರ್ಯ ನಿರಂತರವಾಗಿರಲಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

**ಬಳ್ಳಾರಿ:** ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕೈಗೊಳ್ಳುವ ಕಾರ್ಯ ನಿರಂತರವಾಗಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಗುರುವಾರ, ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ಭೇಟಿ ನೀಡಿ ಆಸ್ಪತ್ರೆ ಕಾರ್ಯ ವೈಖರಿ ಕುರಿತು ಮೇಲ್ವಿಚಾರಣೆ ನಡೆಸಿ ಅಲ್ಲಿನ ಪ್ರಸೂತಿ ತಜ್ಞರು ಮತ್ತು ಮಕ್ಕಳ ತಜ್ಞರೊಂದಿಗೆ ಚರ್ಚಿಸಿ ಮಾತನಾಡಿದ ಅವರು, ಗರ್ಭಿಣಿ ಮಹಿಳೆಯರು ಹಾಗು ಮಕ್ಕಳ ಆರೋಗ್ಯ ಸೇವೆಗಳ ನಿರಂತರವಾಗಿರಬೇಕು ಎಂದು ತಿಳಿಸಿದರು.



ಗರ್ಭಿಣಿ ಮಹಿಳೆಯರು ಮತ್ತು ಮಕ್ಕಳ ತಾಯಂದಿರು ಪೌಷ್ಟಿಕ ಆಹಾರ ಸೇವನೆ, ಶಿಶುಗಳ ಆರೈಕೆ, ಎದೆ ಹಾಲುಣಿಸುವಿಕೆ, ಲಸಿಕೆಗಳ ಮಹತ್ವ ಕುರಿತು ಅರಿವು ಹೊಂದಬೇಕು. ಮಕ್ಕಳಲ್ಲಿ ಯಾವುದಾದರೂ ರೋಗಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ಆಸ್ಪತ್ರೆಗೆ ಕರೆತರಬೇಕು. 5 ವರ್ಷದೊಳಗಿನ ಮಕ್ಕಳ ಉಸಿರಾಟ ತೊಂದರೆ ಕಂಡುಬಂದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರ ಬಳಿ ತೆರಳಬೇಕು ಎಂದು ತಿಳಿಸಿದರು.

ಮುಖ್ಯವಾಗಿ ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ-ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗುವುದು, ಮೊದಲ ಹೆರಿಗೆ ಸಿಸೇರಿಯನ್ ಮುಂತಾದ ಕಾರಣಗಳಿದ್ದರೆ ನಿರ್ಲಕ್ಷಿಸಿಸಬಾರದು. ನಿಯಮಿತವಾಗಿ ತಪಾಸಣೆಗೆ ಒಳಗಾಗಬೇಕು ಎಂದು ಸೂಚಿಸಿದರು.

ತೀವ್ರ ರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಾದ ಐಎಫ್‌ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ಕೈಗೊಳ್ಳಬೇಕು. ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ತೆರಳಬೇಕು. ಅಗತ್ಯವಿದ್ದಲ್ಲಿ ಸ್ಕಾನ್ ಮಾಡಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆಯಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ್ ಬಳಸಬೇಕು ಎಂದರು.

ರಕ್ತಹೀನತೆ ತಡೆಗಟ್ಟಲು ಎಲ್ಲಾ ಗರ್ಭಿಣಿ ತಾಯಂದಿರು ಕಬ್ಬಿಣಾಂಶ ಮಾತ್ರೆ ಜೊತೆಗೆ ಪೌಷ್ಟಿಕ ಆಹಾರ ಸೇವನೆ ಮಾಡಬೇಕು. 6 ತಿಂಗಳ ನಂತರ ಮಕ್ಕಳ ಪೂರಕ ಪೌಷ್ಟಿಕ ಆಹಾರ ನೀಡಬೇಕು ಎಂದು ಮಹಿಳೆಯರಿಗೆ ತಿಳಿಸಿದರು.

ಮುಖ್ಯವಾಗಿ ತೊಡಕಿನ ಗರ್ಭಿಣಿಯರ ಬಗ್ಗೆ ಕಾಳಜಿ ಇರಲಿ, ನಿಯಮಿತ ಆರೋಗ್ಯ ತಪಾಸಣೆ ಹಾಗು ಉತ್ತಮ ಹೆರಿಗೆ ಆಗುವಂತೆ ನೋಡಿಕೊಳ್ಳಬೇಕು. ತೊಡಕಿನ ಗರ್ಭಿಣಿಯರನ್ನು ಮುಂಚೂಣಿಯಾಗಿ ಮಾಹಿತಿ ನೀಡಿ ಹೆರಿಗೆಗಾಗಿ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಬೇಕು ಎಂದು ವೈದ್ಯರಿಗೆ ಸೂಕ್ತ ಸಲಹೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಟಿ.ರಾಮಕೃಷ್ಣ, ಪ್ರಸೂತಿ ತಜ್ಞರಾದ ಡಾ.ಶಾರದ, ಡಾ.ಅರುಣ್ ಕುಮಾರ್, ಪ್ರಭಾರಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸೀಂ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು ಉಪಸ್ಥಿತರಿದ್ದರು.

### ಇತಿಹಾಸ ಅಕಾಡೆಮಿ ರಾಷ್ಟ್ರೀಯ ಸಮ್ಮೇಳನ ಯಶಸ್ವಿ ಸಮಾರೋಪ

# ಯುವ ಸಂಶೋಧಕರಿಗೆ ಮಾರ್ಗದರ್ಶಿ ದೀಪ

**ಗದಗ :** ಕಳೆದ 39 ವರ್ಷಗಳಿಂದ ನಿರಂತರವಾಗಿ ಕರ್ನಾಟಕ ಇತಿಹಾಸ ಸಂಶೋಧಕರ ಸಮ್ಮೇಳನಗಳು, ಐತಿಹಾಸಿಕ ಪರಂಪರೆ ಉಳಿಸಿ ಕಾರ್ಯಕ್ರಮಗಳು ಮತ್ತು ಇತಿಹಾಸ ದರ್ಶನದಂತಹ ಮಹತ್ವದ ಸಂಪುಟಗಳ ಪ್ರಕಟಣೆಯ ಮೂಲಕ ಕರ್ನಾಟಕ ಇತಿಹಾಸ ಅಕಾಡೆಮಿಯು ಯುವ ಇತಿಹಾಸ ಸಂಶೋಧಕರಿಗೆ ಮಾರ್ಗದರ್ಶಿ ದೀಪವಾಗಿದೆ ಎಂದು ಹಿರಿಯ ಇತಿಹಾಸ ಸಂಶೋಧಕರಾದ ಡಾ. ಲಕ್ಷ್ಮಣ ತೆಲಗಾವಿ ಹೇಳಿದರು.



ಅವರು ಗದುಗಿನ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಇವುಗಳ ಆಶ್ರಯದಲ್ಲಿ ಇತಿಹಾಸ ಅಕಾಡೆಮಿಯ ರಾಷ್ಟ್ರೀಯ ವಾರ್ಷಿಕ ಸಮ್ಮೇಳನದಲ್ಲಿ ಜರುಗಿದ ಸಮಾರೋಪ ಸಮಾರಂಭದಲ್ಲಿ ಸಮಾರೋಪ ನುಡಿಗಳನ್ನಾಡಿದರು.

ಕರ್ನಾಟಕ ಇತಿಹಾಸ ಅಕಾಡೆಮಿಯು ಹಿರಿಯ ಇತಿಹಾಸ ತಜ್ಞರಾದ ಡಾ. ಸೂರ್ಯನಾಥ ಕಾಮತರಿಂದ ಸ್ಥಾಪನೆಗೊಂಡು ವಿವಿಧ ಇತಿಹಾಸ ಸಂಶೋಧಕರಿಗೆ ವೇದಿಕೆಯಾಗಿ ಇದೀಗ ಡಾ. ದೇವರಕೊಂಡರೆಡ್ಡಿಯವರ ನೇತೃತ್ವದಲ್ಲಿ ಯಶಸ್ವಿಯಾಗಿ ಮುನ್ನಡೆಯುತ್ತಿದೆ. ಎಲ್ಲ 'ಇಸಂ' ಗಳಿಂದ ದೂರವಾಗಿ ವಸ್ತುನಿಷ್ಠ ಇತಿಹಾಸಕ್ಕೆ ಪೂರಕವಾಗಿ ಆಕರಗಳನ್ನು ಸೃಷ್ಟಿಸುವ ಮಹತ್ವಪೂರ್ಣ ಸಂಘಟನೆಯಾಗಿದೆ. ಇದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಯುವ ಸಂಶೋಧಕರ ಮೇಲಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಪರಮಶಿವಮೂರ್ತಿ ಮಾತನಾಡಿ ಇತಿಹಾಸ ಅಕಾಡೆಮಿಯು ಪ್ರತಿವರ್ಷ ನೂರಾರು ಹೊಸ ಶಾಸನಗಳ ಸಂಶೋಧನೆ, ದೇವಾಲಯ, ಮೂರ್ತಿ ಶಿಲ್ಪಗಳ ವಿಶ್ಲೇಷಣೆ, ಪ್ರಾಚ್ಯವಸ್ತು ಸಂರಕ್ಷಣೆಯ ಮಹತ್ತರ ಕಾರ್ಯವನ್ನು ಮಾಡುತ್ತಾ ಬಂದಿದ್ದು, ಹೆಚ್ಚು ಹೆಚ್ಚು ಜನರು ಇದರ ಸದಸ್ಯರಾಗುವುದರ ಮೂಲಕ ನಮ್ಮ ನಾಡಿನ ಇತಿಹಾಸ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಹೇಳಿದರು.

ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು ಲಕ್ಕುಂಡಿ ಉತ್ಖನನಕ್ಕೆ ಚಾಲನೆ ನೀಡಿದ್ದಾರೆ. ಕಳೆದ ವರ್ಷ ಲಕ್ಕುಂಡಿ ಪರಿಸರದ ಪ್ರಾಚ್ಯ ವಸ್ತುಗಳ ಅನ್ವೇಷಣಾ ಹಾಗೂ ಸಂರಕ್ಷಣಾ ಕಾರ್ಯವನ್ನು ಕೈಗೊಂಡಿದ್ದು ನಾಲ್ಕು ಏಕರೆ ಬಯಲು ಜಾಗೆಯಲ್ಲಿ ವಿಶಿಷ್ಟ ವಸ್ತು ಸಂಗ್ರಹಾಲಯವನ್ನು ನಿರ್ಮಿಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಲಕ್ಕುಂಡಿ ಪರಿಸರ ಅಭಿವೃದ್ಧಿಗೆ ಇತಿಹಾಸ ಸಂಶೋಧಕರು ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕೆಂದು ಹೇಳಿದರು. ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷರಾದ ಡಾ. ದೇವರಕೊಂಡಾರೆಡ್ಡಿ ಸಮ್ಮೇಳನ ಆಯೋಜನೆಗೆ ಸಹಕರಿಸಿದ ಸರ್ವರಿಗೂ ಕೃತಜ್ಞತೆ ಸಲ್ಲಿಸಿದರು.

ಸಮಾರಂಭದಲ್ಲಿ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕರಾದ ಡಾ. ಅಬ್ದುಲ್ ಅಜೀಜ್ ಮುಲ್ಲಾ ಸರ್ವರನ್ನು ಸ್ವಾಗತಿಸಿದರು. ಪ್ರೊ. ಶಕುಂತಲಾ ಸಿಂಧೂರ ನಿರೂಪಿಸಿದರು. ಅಕಾಡೆಮಿಯ ಪ್ರಧಾನ ಕಾರ್ಯದರ್ಶಿ ಡಾ. ಕೆ. ಎಲ್. ರಾಜಶೇಖರ ವಂದಿಸಿದರು. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಇತಿಹಾಸ ಸಂಶೋಧಕರು, ಉಪನ್ಯಾಸಕರು ಪಾಲ್ಗೊಂಡಿದ್ದರು.

## ಜಾವಲಿನ್ ಸ್ಪರ್ಧೆಯಲ್ಲಿ ದಾಖಲೆಯೊಂದಿಗೆ ಸರ್ಕಾರಿ ವಿಜ್ಞಾನ ಕಾಲೇಜಿನ ವಿದ್ಯಾರ್ಥಿ ಮನೋಜ್ ಕೆ ಪ್ರಥಮ




**ಚಿತ್ರದುರ್ಗ:** ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ನಡೆದ ಅಂತರ್ ಕಾಲೇಜು ಸ್ಪರ್ಧೆಯ ಜಾವಲಿನ್ ಸ್ಪರ್ಧೆಯಲ್ಲಿ 48.43. ಮೀ. ದೂರ ಎಸೆದು, ಸರ್ಕಾರಿ ವಿಜ್ಞಾನ ಕಾಲೇಜಿನ ಪ್ರಥಮ ಬಿ. ಎಸ್ ಸಿ. ವಿದ್ಯಾರ್ಥಿ ಮನೋಜ್. ಕೆ. ವಿಶ್ವವಿದ್ಯಾಲಯದ ದಾಖಲೆಯೊಂದಿಗೆ ಪ್ರಥಮ ಸ್ಥಾನ ಪಡೆದು, ವಿಶ್ವವಿದ್ಯಾಲಯಕ್ಕೆ ಮತ್ತು ಸರ್ಕಾರಿ ವಿಜ್ಞಾನ ಕಾಲೇಜಿಗೆ ಹೆಸರು ತಂದುಕೊಟ್ಟಿದ್ದಾರೆ ಎಂದು ಸರ್ಕಾರಿ ವಿಜ್ಞಾನ ಕಾಲೇಜಿನ ದೈಹಿಕ ನಿರ್ದೇಶಕರಾದ ಡಾ ರಾಘವೇಂದ್ರ ಕೆ. ರವರು ಪತ್ರಿಕಾ ಪ್ರಕಟಣೆ ಮುಖಾಂತರ ತಿಳಿಸಿದ್ದಾರೆ.

ಗ್ರಾಮೀಣ ವಿದ್ಯಾರ್ಥಿಗಳು ಹೆಚ್ಚಿನ ಮಟ್ಟದಲ್ಲಿ ಕ್ರೀಡೆಯಲ್ಲಿ ಭಾಗವಹಿಸಿ, ಅತ್ಯುತ್ತಮ ಸಾಧನೆಗೈದು ಉದ್ಯೋಗ ಪಡೆದುಕೊಳ್ಳಲು ಸಹ ಸಹಕಾರಿಯಾಗಿದೆ, ವಿದ್ಯಾರ್ಥಿಗಳಿಗೆ ಕ್ರೀಡೆಗಳಲ್ಲೂ ಸಹ ಉನ್ನತ ವ್ಯಾಸಂಗಕ್ಕೆ ಉದ್ಯೋಗಗಳಿಗೆ ಅನುಕೂಲಗಳಿವೆ ಎಂಬುದನ್ನು ನೆನಪಿನಲ್ಲಿಟ್ಟುಕೊಂಡು ಉತ್ತಮ ಸಾಧನೆ ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ.

ಕಾಲೇಜಿನ ಪ್ರಾಂಶುಪಾಲರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಮನೋಜ್ ಕೆ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ನಗರಸಭೆಯ ನೌಕರರ ಸಂಕಷ್ಟಗಳು ಮತ್ತು ಪರಿಹಾರ

# ಕಸವನ್ನ ಡಬ್ಬಿಗಳಲ್ಲಿ ಸಂಗ್ರಹಿಸುವುದೇ ಉತ್ತಮ

**ಚಿತ್ರದುರ್ಗ:** ದಿನನಿತ್ಯ ಕಸ ಸಂಗ್ರಹಿಸುವ ವಾಹನಗಳು ಮನೆ ಮುಂದೆ ಬಂದರೂ ಸಹ ಕೆಲವೊಂದು ರಸ್ತೆಗಳಲ್ಲಿ, ಗಲ್ಲಿಗಳಲ್ಲಿ, ಜನರು ಕಸ ಹಾಕದೆ, ಬೇರೆ ಸಮಯದಲ್ಲಿ, ಹೊತ್ತು ಗೊತ್ತಿಲ್ಲದ ಸಮಯದಲ್ಲಿ, ರಾತ್ರಿ ಸಮಯದಲ್ಲಿ ಎಲ್ಲೆಂದರಲ್ಲಿ ಕಸ ಚೆಲ್ಲುತ್ತಿದ್ದು, ಅದನ್ನು ಸಂಗ್ರಹಿಸುವ ನಿಟ್ಟಿನಲ್ಲಿ ನಗರಸಭೆಯ ನೌಕರರು ಕಾರ್ಮಿಕರು ಹಗಲಿರುಳು ಶ್ರಮಪಟ್ಟು, ಕಸ ಸಂಗ್ರಹಿಸಿ ವಿಲೇವಾರಿ ಮಾಡುತ್ತಿರುವುದರಿಂದ, ಮಾನವ ಶಕ್ತಿಯ ವ್ಯಯವಾಗುತ್ತಿದೆ, ಈಗಿರುವ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ, ನಗರಸಭೆಯ ನೌಕರರಿಗೆ ಸರಳವಾಗಿ, ಸುಲಭವಾಗಿ ಕಸ ಎತ್ತಿ ಲಾರಿಗಳಲ್ಲಿ ಸಾಗಿಸುವಂತಹ ವ್ಯವಸ್ಥೆ ತರಲು ಮತ್ತೆ ಡಬ್ಬಿಗಳನ್ನ ಕೆಲವು ಭಾಗಗಳಲ್ಲಿ ಇಟ್ಟು, ಜನರಿಗೆ ತರಬೇತಿ ನೀಡುವುದು ಅವಶ್ಯಕವಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ.ಎಚ್.ಕೆ. ಎಸ್ ಸ್ವಾಮಿ ಅವರು ಜಿಲ್ಲಾಡಳಿತ ಮತ್ತು ನಗರಸಭೆಯನ್ನು ವಿನಂತಿಸಿಕೊಂಡಿದ್ದಾರೆ.



ಅವರು ಚಿತ್ರದುರ್ಗ ನಗರದ ಮೆದೆಹಳ್ಳಿ ರಸ್ತೆಯಲ್ಲಿ ನಗರಸಭೆಯ ನೌಕರರು ಕಷ್ಟಪಟ್ಟು, ಬಿಸಿಲಲ್ಲಿ ಹರಸಾಹಸ ಪಟ್ಟು, ಚದುರಿ ಹೋದ ಕಸವನ್ನ ಗುಡಿಸಿ ಗುಡ್ಡೆ ಮಾಡಿ, ಲಾರಿ ಹಾಕುವ ಸಂದರ್ಭದಲ್ಲಿ ಶ್ರಮದ ಉಳಿತಾಯದ ಬಗ್ಗೆ ಜಾಗೃತಿ ಮೂಡಿಸುತ್ತ ಮಾತನಾಡುತ್ತಿದ್ದರು.ಬೆಳಗ್ಗೆ ಕಸದ ಗಾಡಿ ಬಂದಾಗ ಕಸ ಹಾಕಲು ಎಲ್ಲರಿಗೂ ಸಹ ಅವಕಾಶಗಳು ಕಡಿಮೆ ಇದ್ದು, ಕೆಲವರು ಒಂಟಿಯಾಗಿ ವಾಸವಿದ್ದಂತವರು ವಯಸ್ಸಾದಂತವರು ಬೆಳಗ್ಗೆ ಏಳಲಾರದಂತವರು, ರಾತ್ರಿ ಕರ್ತವ್ಯಕ್ಕೆ ಹೋದಂತವರು, ಹೀಗೆ ಹಲವಾರು ಸಮಸ್ಯೆ ಇರುವ ಜನರು ಬೇರೆ ಬೇರೆ ಸಮಯದಲ್ಲಿ ಕಸಗಳನ್ನ ರಸ್ತೆ ಬದಿಯಲ್ಲಿ ಚೆಲ್ಲುತ್ತಿದ್ದು, ನಗರಸಭೆಯವರು ಅಂತವರಿಗಾದರೂ ಒಂದಿಷ್ಟು ಡಬ್ಬಿಗಳನ್ನ ಇಟ್ಟು ಕಸವನ್ನು ಸಂಗ್ರಹಿಸಿ, ಅವುಗಳನ್ನ ಲಾರಿಯಲ್ಲಿ ಸರಾಗವಾಗಿ ಎತ್ತಿ ಸುರಿದುಕೊಂಡು, ಬೇಗ ಕಸ ವಿಲೇವಾರಿ ಮಾಡುವಂತಹ ವ್ಯವಸ್ಥೆ ಮಾಡುವುದು ಉತ್ತಮ ಎಂದರು.ಹೀಗಿರುವ ವ್ಯವಸ್ಥೆಯಲ್ಲಿ ಡಬ್ಬಿಗಳಿಲ್ಲದೆ ಜನರು ರಸ್ತೆ ಅಕ್ಕ ಪಕ್ಕ ಎಲ್ಲೆಂದರಲ್ಲಿ ಚೆಲ್ಲಾಡಿ, ಬಿಸಾಡುತ್ತಿರುವುದರಿಂದ ದುರ್ವಾಸನೆ ಮತ್ತು ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದ್ದು, ಪ್ರಾಣಿಗಳು, ನಾಯಿಗಳು ಆ ಕಸವನ್ನ ಇನ್ನೊಂದಿಷ್ಟು ವಿಸ್ತಾರವಾಗಿ ಹರಡುವುದು ಮಾಡಿ ಅಸಹ್ಯಕರವಾಗಿ ಮಾಡುತ್ತಿವೆ. ಅದನ್ನ ಗುಡಿಸಿ ಗುಡ್ಡೆ ಹಾಕಿ ಲಾರಿಗಳಿಗೆ ಸಂಗ್ರಹಿಸುವ ದೃಶ್ಯವನ್ನು ನೋಡಿದಾಗ, ಪುರಸಭೆ ನೌಕರರಿಗೆ ಅತಿ ಹೆಚ್ಚು ಶ್ರಮವಾಗುತ್ತಿದ್ದು, ಗುಡಿಸುವ ರಭಸದಲ್ಲಿ ಧೂಳಿನ ಕಣಗಳನ್ನ ಸೇವನೆ ಮಾಡುತ್ತಿದ್ದು, ಅವರ ಆರೋಗ್ಯದ ಮೇಲೆ ದುಷ್ಪರಿಣಾಮವಾಗುತ್ತಿದೆ ಎಂದರು.ಡಬ್ಬಿ ತೆಗೆಯಲು ಹಲವಾರು ಕಾರಣಗಳನ್ನು ನಗರಸಭೆಯ ಅಧಿಕಾರಿಗಳು ಮತ್ತು ಇಂಜಿನಿಯರ್ ಗಳು ಹೇಳುತ್ತಿದ್ದರು ಸಹ, ಕೆಲವೊಂದಿಷ್ಟು ಕಡೆ ಅವಿರತವಾಗಿ ಜನ ಕಸ ಎಸೆಯುತ್ತಲೇ ಇರುತ್ತಾರೆ, ಮಾರುಕಟ್ಟೆಗಳಲ್ಲಿ, ಬಸ್ಟ್ಯಾಂಡ್ಗಳಲ್ಲಿ, ಹಲವಾರು ಕಸದ ಡಬ್ಬಿಗಳನ್ನು ಇಟ್ಟು ಕಸವನ್ನು ಸಂಗ್ರಹಿಸುವ ರೀತಿಯಲ್ಲಿ, ನಗರದ ವಿವಿಧ ಭಾಗಗಳಲ್ಲಿ ಕೆಲವು ಕಡೆ ಗಾಡಿಗಳನ್ನು ನಿಲ್ಲಿಸಿ, ಡಬ್ಬಿಗಳನ್ನ ಅಳವಡಿಸಿ, ಕಸ ಸಂಗ್ರಹಿಸಿ, ರಸ್ತೆಯ ಮೇಲೆ, ನೆಲದ ಮೇಲೆ ಚೆಲ್ಲಾಡುವ ಕಸವನ್ನ ಒಂದು ಕಡೆ ನಿರ್ದಿಷ್ಟವಾದ ಜಾಗದಲ್ಲಿ ಸಂಗ್ರಹಿಸುವಂತ ವ್ಯವಸ್ಥೆ ಮಾಡುವುದು ಉತ್ತಮ ಎಂದು ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ.

# ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನ ಅಂಗವಾಗಿ 'ಜನನಿ' ಜನಜಾಗೃತಿ, ಆರೋಗ್ಯ ಶಿಬಿರ

**ಚಿತ್ರದುರ್ಗ:** ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಅಂಗವಾಗಿ ಹರಪನಹಳ್ಳಿಯ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ವತಿಯಿಂದ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.



ಕೇಂದ್ರ ಸರ್ಕಾರದ ಆಯುಷ್ ಸಚಿವಾಲಯದ ನಿರ್ದೇಶನದಡಿ ಈ ಬಾರಿಯ ಪ್ರಕೃತಿ ಚಿಕಿತ್ಸಾ ದಿನವನ್ನು 'ಲೂಸಿಂಗ್ ವೈಟ್ ನ್ಯಾಚುರಲಿ ಥ್ರೂ ನ್ಯಾಚುರೋಪತಿ' ಧ್ಯೇಯವಾಕ್ಯದಡಿ, ಅಧಿಕ ದೇಹತೂಕ ಮತ್ತು ಬೊಜ್ಜು ಸಮಸ್ಯೆಗ ನೈಸರ್ಗಿಕ ಪರಿಹಾರಗಳ ಬಗ್ಗೆ ಅರಿವು ಮೂಡಿಸಲು ಆದ್ಯತೆ ನೀಡಲಾಗುವುದು ಎಂದು ಜಯ ಎಜ್ಯುಕೇಶನ್ ಟ್ರಸ್ಟ್ ಕಾರ್ಯದರ್ಶಿ ಡಾ.ಎಸ್.ಎನ್.ಮಹೇಶ್ ಮತ್ತು ಮುಖ್ಯ ವೈದ್ಯಾಧಿಕಾರಿ ಹಾಗೂ ನಿರ್ದೇಶಕ ಡಾ.ರಾಜೇಶ್ ಪಾದೇಕಲ್ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಯೋಗ ಮತ್ತು ಪ್ರಕೃತಿ ಚಿಕಿತ್ಸೆ ಪ್ರಯೋಜನಗಳ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಇಡೀ ಮಧ್ಯ ಮತ್ತು ಕಲ್ಯಾಣ ಕರ್ನಾಟಕದಲ್ಲಿ ಉಚಿತ ಆರೋಗ್ಯ ಶಿಬಿರ, ಜಾಗೃತಿ ಜಾಥಾ, ವಿಚಾರ ಸಂಕಿರಣ, ಕಾರ್ಯಾಗಾರ ಮತ್ತು ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಮಧ್ಯ ಕರ್ನಾಟಕದಲ್ಲೇ ಪ್ರಥಮ ಎನಿಸಿದ ಅತ್ಯಾಧುನಿಕ ಹಾಗೂ 100 ಹಾಸಿಗೆ ಸೌಲಭ್ಯವಿರುವ ಜನನಿ ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಹಚ್ಚ ಹಸಿರಿನ ಪ್ರಶಾಂತ ಪರಿಸರದಲ್ಲಿ ಹರಪನಹಳ್ಳಿಯಿಂದ ಕೇವಲ ಒಂಬತ್ತು ಕಿಲೋಮೀಟರ್ ದೂರದ, ಆರೂವರೆ ಎಕರೆ ವಿಶಾಲ ಪ್ರದೇಶದಲ್ಲಿ ವ್ಯಾಪಿಸಿದ್ದು, ಕಲ್ಯಾಣ ಕರ್ನಾಟಕದ ಸಾಮಾಜಿಕ ಸ್ವಾಸ್ಥ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಕ ಎನಿಸಲಿದೆ ಎಂದು ಹೇಳಿದರು.

ಜೀವನಶೈಲಿ ರೋಗಗಳು ಇಂದು ದೇಶದ ಸಾಮಾಜಿಕ ಹಾಗೂ ಆರ್ಥಿಕ ಮುನ್ನಡೆಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಯುವಜನತೆಯಿಂದ ಹಿಡಿದು ಶ್ರಮಶಕ್ತಿಯ ಕ್ಷಮತೆಯನ್ನೇ ಜೀವನಶೈಲಿ ರೋಗಗಳು ಕ್ಷಯಿಸುತ್ತಿರುವ ಪ್ರಸ್ತುತ ಕಾಲಘಟ್ಟದಲ್ಲಿ, ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳುವುದು ಭವಿಷ್ಯದ ದೃಷ್ಟಿಯಿಂದ ಅನಿವಾರ್ಯವಾಗಿದೆ. ಆಧುನಿಕ ವೈದ್ಯವಿಜ್ಞಾನ ರೋಗಚಿಕಿತ್ಸೆಗಿಂತ ರೋಗಗಳು ಬಾಧಿಸದಂತೆ ತಡೆಯುವ ಮುಂಜಾಗ್ರತಾ ಕ್ರಮಗಳಿಗೆ ಒತ್ತು ನೀಡಿದ್ದು, ಸಮಗ್ರ ಸುಕ್ಷೇಮಕ್ಕೆ ಯೋಗ ಮತ್ತು ಪ್ರಕೃತಿ ಚಿಕಿತ್ಸೆ ವರದಾನವಾಗಿದ್ದು, ಈ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಲಾಗುತ್ತಿದೆ. ಸುಸ್ಥಿರ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಯೋಗ ಮತ್ತು ಪ್ರಕೃತಿ ವಿಜ್ಞಾನ ವಿದೇಶಗಳಲ್ಲೂ ಜನಪ್ರಿಯವಾಗುತ್ತಿದೆ. ಈ ಬಗ್ಗೆ ಜನಸಾಮಾನ್ಯರಲ್ಲಿ ಅರಿವು ಮೂಡಿಸುವುದು ಸಂಸ್ಥೆಯ ಉದ್ದೇಶ ಎಂದು ವಿವರಿಸಿದರು.

ಯೋಗ ಮತ್ತು ಪ್ರಕೃತಿ ಚಿಕಿತ್ಸೆಗಾಗಿ ಬೆಂಗಳೂರು, ದಕ್ಷಿಣ ಕನ್ನಡದ ಧರ್ಮಸ್ಥಳದಂಥ

ದೂರದ ಊರುಗಳಿಗೆ ಹೋಗುವುದು ತಪ್ಪಿ ಈ ಭಾಗದ ಜನತೆಗೆ ಮನೆಬಾಗಿಲಲ್ಲೇ ಈ ಸೇವೆ ಲಭ್ಯವಾಗಲಿದೆ. ಪ್ರಕೃತಿ ಚಿಕಿತ್ಸಾ ದಿನದ ಅಂಗವಾಗಿ ಡಿಸೆಂಬರ್ 31ರವರೆಗೆ ಆಗಮಿಸುವ ಆರೋಗ್ಯ ಸಾಧಕರಿಗೆ ವಿಶೇಷ ರಿಯಾಯ್ತಿಯನ್ನೂ ನೀಡಲಾಗುವುದ ಎಂದು ಡಾ.ಪಾದೇಕಲ್ ವಿವರಿಸಿದರು.ಸಮಗ್ರ ಹಾಗೂ ಔಷಧರಹಿತ ಚಿಕಿತ್ಸೆ, ಅನುಭವ ಸಂಪನ್ನ ವೈದ್ಯರು ಮತ್ತು ಚಿಕಿತ್ಸಕರ ಸೇವೆ, ವೈಯಕ್ತಿಕ ಚಿಕಿತ್ಸಾ ಯೋಜನೆಗಳು, ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ಚಿಕಿತ್ಸಾ ವ್ಯವಸ್ಥೆ, ಚೇತರಿಕೆ ಮತ್ತು ಪುನಶ್ಚೇತನಕ್ಕೆ ಪೂರಕ ಪ್ರಶಾಂತ ವಾತಾವರಣದಂಥ ಹಲವು ವೈಶಿಷ್ಟ್ಯಗಳನ್ನು ಹೊಂದಿದ್ದು, ಕೇಂದ್ರಕ್ಕೆ ಆಗಮಿಸುವ ಅತಿಥಿಗಳಿಗೆ ಪಿಕಪ್ ಮತ್ತು ಡ್ರಾಪ್ ವ್ಯವಸ್ಥೆಯೂ ಇರುತ್ತದೆ ಎಂದರು.

ಸಾಮಾನ್ಯ ವಾರ್ಡ್, ವಿಶೇಷ ಕೊಠಡಿ ಮತ್ತು ಸುಸಜ್ಜಿತ ಕಾಟೇಜ್ ಹೀಗೆ ವೈವಿಧ್ಯಮಯ ಶ್ರೇಣಿಯ ವ್ಯವಸ್ಥೆಯಲ್ಲಿ ಅತಿಥಿಗಳು ತಮ್ಮ ಆದ್ಯತೆಯನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಈ ಅತ್ಯಾಧುನಿಕ ಪ್ರಕೃತಿ ಚಿಕಿತ್ಸಾ ಕೇಂದ್ರ ಮುಂದಿನ ದಿನಗಳಲ್ಲಿ ಈ ಭಾಗದ ಆರೋಗ್ಯ ಪ್ರವಾಸೋದ್ಯಮ ಬೆಳವಣಿಗೆಯಲ್ಲೂ ಪ್ರಮುಖ ಪಾತ್ರ ವಹಿಸಲಿದೆ. ವಿವರಗಳಿಗೆ: 93530-63097/ 8317363097 ಸಂಪರ್ಕಿಸಬಹುದು. ಸಂಸ್ಥೆಯ ಮಾಧ್ಯಮ ಮತ್ತು ಸಾರ್ವಜನಿಕ ಸಂಪರ್ಕ ವಿಭಾಗದ ಮುಖ್ಯಸ್ಥ ಉದಯಶಂಕರ ಭಟ್ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಕೃಷಿ ಮತ್ತುತೋಟಗಾರಿಕೆ ಬೆಳೆಗಳಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆಕುರಿತಕೌಶಲ್ಯಾಭಿವೃದ್ಧಿ ತರಬೇತಿ

ಐ.ಸಿ.ಎ.ಆರ್.-ಕೃಷಿ ವಿಜ್ಞಾನಕೇಂದ್ರ, ಶಿವಮೊಗ್ಗದ ವತಿಯಿಂದ ದಿನಾಂಕ 20-11-2025 ರಿಂದ 26-11-2025ರವರೆಗೆ ಏಳು ದಿನಗಳ "ಕೃಷಿ ಮತ್ತುತೋಟಗಾರಿಕೆ ಬೆಳೆಗಳ ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಮಾರುಕಟ್ಟೆ"ಕುರಿತಕೌಶಲ್ಯಾಭಿವೃದ್ಧಿತರಬೇತಿ ಯನ್ನುಆಯೋಜಿಸಲಾಗುತ್ತಿದೆ.

ಈ ತರಬೇತಿಯಲ್ಲಿ ಸಿರಿಧಾನ್ಯ, ರಾಗಿ, ಮೆಕ್ಕೆಜೋಳ, ಕೋಕೋ, ತರಕಾರಿಗಳ ಮೌಲ್ಯವರ್ಧನೆ, ಮೈಕ್ರೋಗ್ರೀನ್ಸ್‌ಉತ್ಪಾದನೆ, ಕೋಕೋ ಮತ್ತು ಗಿಡಮೂಲಿಕೆಗಳನ್ನು ಬಳಸಿ ಚಾಕೋಲೇಟ್‌ತಯಾರಿಕೆ, ಸಿರಿಧಾನ್ಯ ಸಂಸ್ಕರಣೆ, ಅಣಬೆಯ ಮೌಲ್ಯವರ್ಧನೆ, ಬೇಕರಿ ಉತ್ಪನ್ನಗಳ ತಯಾರಿಕೆಯನ್ನು ಪ್ರಾತ್ಯಕ್ಷಿಕೆ ಮುಖಾಂತರ ಹೇಳಿಕೊಡಲಾಗುವುದು. ಆದ್ದರಿಂದ ಈ ತರಬೇತಿಗೆ ಆಸಕ್ತ ಯುವಕ/ಯುವತಿಯರು, ಗೃಹಿಣಿಯರು, ಸ್ವಸಹಾಯ ಸಂಘದ ಸದಸ್ಯರುಗಳು, ರೈತ ಮತ್ತುರೈತಮಹಿಳೆಯರು ದಿನಾಂಕ 17-11-2025ರೊಳಗೆ ತಮ್ಮ ಹೆಸರನ್ನು ನೊಂದಾಯಿಸತಕ್ಕದ್ದು. ಮೊದಲು ಬಂದ 30 ಜನರಿಗೆಆದ್ಯತೆ. ಸಂಪರ್ಕಿಸಿ : ಡಾ. ಎನ್. ಸುಧಾರಾಣಿ, ವಿಜ್ಞಾನಿ (ಗೃಹ ವಿಜ್ಞಾನ), ಕೆ.ವಿ.ಕೆ., ಶಿವಮೊಗ್ಗ. ಮೊಬೈಲ್ : 94820 24908.

# ಡಿಕೆಶಿಯನ್ನು ಮಣಿಸಲು ಸಿದ್ದು ಆಪ್ತರ ಹೊಸ ಬಾಣ
## 2028ರ ಆಫರ್ ನಿಂದ ಸತೀಶ್ ಜಾರಕಿಹೊಳಿ ಅಂತರ



**ಬೆಂಗಳೂರು:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ ದಿನದಿಂದ ದಿನಕ್ಕೆ ಹೊಸ ತಿರುವು ಪಡೆದು ಕೊಳ್ಳುತ್ತಿದೆ. ಯಾವುದೇ ಕಾರಣ-ಕ್ಕೂ ಸಿಎಂ ಬದಲಾವಣೆಗೆ ಅವಕಾಶ ನೀಡುವುದಿಲ್ಲ ಎಂದು ಸಿದ್ದರಾಮಯ್ಯ ಬಣ ಪಣತೊಟ್ಟಂತಿದೆ. ಈ ಕಾರಣ-ಕ್ಕಾಗಿ ಡಿಕೆ ಶಿವಕುಮಾರ್ ಅವರನ್ನು ಸೈಲೆಂಟಾಗಿಸಲು ಹೊಸ ಹೊಸ ಬಾಣ ಪ್ರಯೋಗ ಮಾಡುತ್ತಿದ್ದಾರೆ. ಇದೀಗ 2028 ರಲ್ಲಿ ನೀವೇ ಸಿಎಂ ಆಗಿ ಎಂಬ ವಿಚಾರವನ್ನು ಮುನ್ನಲೆಗೆ ತರಲಾಗುತ್ತಿದೆ.

**ಟಾರ್ಗೆಟ್ 2028:** ರಾಜ್ಯದಲ್ಲಿ ಸಿಎಂ ಗಾದಿಗೆ ಏರಲೇ ಬೇಕು ಎಂದು ಡಿಕೆ ಶಿವಕುಮಾರ್ ಪ್ರಯತ್ನ ನಡೆಸುತ್ತಿದ್ದಾರೆ. ಯಾವುದೇ ಹೇಳಿಕೆಗಳನ್ನು ನೀಡದೆ ಇದ್ದರೂ, ಅವರು ಸದ್ದಿಲ್ಲದೆ ಹೈಕಮಾಂಡ್ ನಾಯಕರ ವಿಶ್ವಾಸ ಗಳಿಸಿಕೊಳ್ಳುವ ಪ್ರಯತ್ನದಲ್ಲಿದ್ದಾರೆ. ನವೆಂಬರ್ ಬಳಿಕ ದೆಹಲಿ ನಾಯಕರು ಈ ವಿಷಯಕ್ಕೆ ಸಂಬಂಧಿಸಿದಂತೆ ಒಂದು ನಿರ್ಧಾರಕ್ಕೆ ಬರ್ತಾರೆ ಎಂಬ ನಿರೀಕ್ಷೆಯನ್ನು ಅವರು ಹೊಂದಿದ್ದಾರೆ.

ಇದರ ನಡುವೆ ಸಿದ್ದರಾಮಯ್ಯ ಟೀಂ ಭಿನ್ನ ಪ್ರಯೋಗಗಳನ್ನು ನಡೆಸುತ್ತಿದೆ. ಈ ಪ್ರಯೋಗ ಡಿಕೆ ಶಿವಕುಮಾರ್ ಬಣದ ತಲೆಕೆಡಿಸಿದೆ. 2028 ರಲ್ಲೂ ಸಿದ್ದರಾಮಯ್ಯ ನಾಯಕತ್ವದಲ್ಲೇ ಚುನಾವಣೆಗೆ ಹೋಗುತ್ತೇವೆ ಎಂದು ಹೇಳುತ್ತಿದ್ದ ಸಿದ್ದರಾಮಯ್ಯ ಬಣ ಇದೀಗ 2028 ರಲ್ಲಿ ಡಿಕೆ ಶಿವಕುಮಾರ್ ಅವರು ಸಿಎಂ ಆಗಲಿ ಎಂಬ ಆಫರ್ ಮುಂದಿಟ್ಟಿದ್ದಾರೆ. ಹಾಗಾಗಿ ಸದ್ಯ ಸಿಎಂ ಬದಲಾವಣೆ ಬೇಡ ಎಂಬ ಚರ್ಚೆಗೆ ಒತ್ತು ನೀಡುತ್ತಿದ್ದಾರೆ.

**ಜಮೀರ್ ಹೇಳಿಕೆ ಪುಷ್ಠಿ :** ಸಿದ್ದರಾಮಯ್ಯ ಬಣದ ವಾದಕ್ಕೆ ಸಚಿವ ಜಮೀರ್ ಅಹ್ಮದ್ ಖಾನ್ ಅವರು ನೀಡಿರುವ ಹೇಳಿಕೆ ಪುಷ್ಠಿ ನೀಡಿದೆ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ಬಳಿಕ ಜಮೀರ್ ಖರ್ಗೆ ಮನೆ ಮುಂದೆಯೇ ಇಂತಹ ಹೇಳಿಕೆ ನೀಡಿದ್ದಾರೆ. ಡಿಕೆಶಿ ಪಕ್ಷಕ್ಕಾಗಿ ಸಾಕಷ್ಟು ಕಷ್ಟ ಪಟ್ಟಿದ್ದಾ-ರೆ. ಹಾಗಾಗಿ ಅವರೇ 2028 ರಲ್ಲಿ ರಾಜ್ಯದ ಮುಖ್ಯಮಂತ್ರಿ ಆಗಲಿ ಎಂದು ಆಫರ್ ನೀಡಿದ್ದಾರೆ. ಇದರ ಜೊತೆಗೆ ಸದ್ಯ ನಾಯಕತ್ವ ಬದಲಾವಣೆ ಯಾವುದೇ ಕಾರಣಕ್ಕೂ ಇಲ್ಲ ಎಂಬ ಸಂದೇಶವನ್ನೂ ರವಾನೆ ಮಾಡಿದ್ದಾರೆ.

**2028 ಆಫರ್‌ನಿಂದ ಸತೀಶ್ ಅಂತರ:** ಸಚಿವ ಸತೀಶ್ ಜಾರಕಿಹೊಳಿ ಕಾಂಗ್ರೆಸ್‌ನಲ್ಲಿ ಸಿಎಂ ಸ್ಥಾನದ ಆಕಾಂಕ್ಷಿಯಾಗಿದ್ದಾರೆ. 2028 ರಲ್ಲಿ ನಾನೂ ಸಿಎಂ ಸ್ಥಾನದ ಆಕಾಂಕ್ಷಿ ಎಂದಿದ್ದಾರೆ. ಹೀಗಾಗಿ ಅವರು ಡಿಕೆಶಿಗೆ 2028 ರಲ್ಲಿ ಸಿಎಂ ಸ್ಥಾನ ನೀಡುವ ವಿಚಾರವಾಗಿ ಅಂತರ ಕಾಯ್ದುಕೊಂಡಿದ್ದಾರೆ. ಬದಲಾಗಿ ಸ್ವತಃ ಅವರೇ 2028 ರಲ್ಲಿ ಸಿಎಂ ಸ್ಥಾನದ ಆಕಾಂಕ್ಷಿ ಎಂದು ಹೇಳಿಕೊಂಡಿದ್ದಾರೆ. ಹೀಗಾಗಿ ಸಿದ್ದರಾಮಯ್ಯ ಆಪ್ತ ಬಣದಲ್ಲಿ ಈ ವಿಚಾರವಾಗಿ ಗೊಂದಲ ಕಾಣಿಸುತ್ತಿದೆ.

**ಆಫರ್ ಒಪ್ಪುತ್ತಾರಾ ಡಿಕೆಶಿ ? :** ಜಮೀರ್ ಹೇಳಿಕೆಗೆ ಡಿಕೆಶಿ ಯಾವುದೇ ರೀತಿಯಲ್ಲಿ ಸ್ಪಷ್ಟವಾಗಿ ಪ್ರತಿಕ್ರಿಯೆ ನೀಡಿಲ್ಲ. ಆದರೆ, "ಬಹಳ ಸಂತೋಷ, ಸಿದ್ದರಾಮಯ್ಯ ಪೂರ್ಣ ಅವಧಿಗೆ ಮುಖ್ಯಮಂತ್ರಿ ಆಗಿದ್ದರೆ ತಪ್ಪೇನು? ನಾವು ಯಾರು ಬೇಜಾರ್ ಮಾಡಿಕೊಂಡಿಲ್ಲ. ನಾವು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ" ಎನ್ನುವ ಮೂಲಕ ಮಾರ್ಮಿಕವಾಗಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಹಾಗಾಗಿ ಡಿಕೆಶಿ ನಡೆಯೂ ಕುತೂಹಲಕ್ಕೆ ಕಾರಣವಾಗಿದೆ. ಇನ್ನು, 2028 ಕ್ಕೆ ಸಿಎಂ ಸ್ಥಾನಕ್ಕೆ ಸಾಕಷ್ಟು ಆಕಾಂಕ್ಷಿಗಳು ಇದ್ದಾರೆ. ಹೀಗಾಗಿ ಪ್ರಬಲ ಪೈಪೋಟಿ ಅಂತೂ ಇದ್ದೇ ಇರುತ್ತದೆ. ಹೀಗಿರುವಾಗ ಡಿಕೆ ಶಿವಕುಮಾರ್ ಅವರ ನಡೆ ಏನು ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಅಲ್ಲದೆ, 2028 ರಲ್ಲಿ ಡಿಕೆ ಸಿಎಂ ಆಗಲಿ ಎಂದು ಜಮೀರ್ ಸೇರಿದಂತೆ ಸಿದ್ದರಾಮಯ್ಯ ಬಣ ನೀಡುತ್ತಿರುವ ಹೇಳಿಕೆಯ ಹಿಂದಿನ ರಾಜಕೀಯ ಲೆಕ್ಕಾಚಾರಗಳೇನು ಎಂಬುವುದಕ್ಕೆ ಕಾಲವೇ ಉತ್ತರಿಸಬೇಕು.

# ಗೃಹ ಸಚಿವರಿಗೆ ಅವಹೇಳನ, ಚಿಕ್ಕಮಗಳೂರು ಬಿಜೆಪಿ ಯುವಮೋರ್ಚಾ ಅಧ್ಯಕ್ಷ ಬಂಧನ



**ಚಿಕ್ಕಮಗಳೂರು:** ಗೃಹಸಚಿವ ಡಾ. ಜಿ ಪರಮೇಶ್ವರ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಕಾರಣ ಚಿಕ್ಕಮಗಳೂರು ಜಿಲ್ಲಾ ಬಿಜೆಪಿ ಯುವಮೋರ್ಚಾ ಅಧ್ಯಕ್ಷ ಸಂತೋಷ್ ಕೋಟ್ಯಾನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ನೀಡಲಾಗುತ್ತಿರುವ ಸೌಲಭ್ಯವನ್ನು ಖಂಡಿಸಿ ಮಂಗಳವಾರ ನಡೆದಿದ್ದ ಬಿಜೆಪಿ ನೇತೃತ್ವದ ಪ್ರತಿಭಟನೆಯಲ್ಲಿ ಸಂತೋಷ್ ಕೊಟ್ಯಾನ್ ಮಾತನಾಡಿದ್ದರು. ಈ ವೇಳೆ ಅವರು ಗೃಹಸಚಿವ ಡಾ. ಪರಮೇಶ್ವರ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದಾಗಿ ಕಾಂಗ್ರೆಸ್ ಕಾರ್ಯಕರ್ತರು ದೂರು ನೀಡಿದ್ದರು. ಕಾಂಗ್ರೆಸ್ ಕಾರ್ಯಕರ್ತರ ದೂರಿನ ಆಧಾರದಲ್ಲಿ ಚಿಕ್ಕಮಗಳೂರು ನಗರ ಠಾಣೆಯಲ್ಲಿ ಅಟ್ರಾಸಿಟಿ ಕೇಸ್ ದಾಖಲಾಗಿದೆ. ಪೊಲೀಸರು ಸಂತೋಷ್ ಕೊಟ್ಯಾನ್ ಅವರನ್ನು ಬಂಧಿಸಿ, ಹೌಸಿಂಗ್ ಬೋರ್ಡ್ ನ್ಯಾಯಧೀಶರ ನಿವಾಸಕ್ಕೆ ಹಾಜರುಪಡಿಸಿದರು. ನಂತರ ನ್ಯಾಯಾಧೀಶರು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಆದೇಶ ಹೊರಡಿಸಿದರು.

**ಉದ್ವಿಗ್ನ ಪರಿಸ್ಥಿತಿ:** ಬಂಧನದ ವೇಳೆ ಚಿಕ್ಕಮಗಳೂರು ನಗರದಲ್ಲಿರುವ ಮಾರ್ಕೆಟ್ ರಸ್ತೆಯಲ್ಲಿ ಕೆಲ ಕಾಲ ಉದ್ವಿಗ್ನ ವಾತಾವರಣ ಕಂಡಿತು. ಸಂತೋಷ್ ಕೋಟ್ಯಾನ್ ಅವರನ್ನು ಪೊಲೀಸ್ ಜೀಪ್‌ಗೆ ಕರೆದೊಯ್ಯುವ ವೇಳೆ ಬಿಜೆಪಿ ಕಾರ್ಯಕರ್ತರು ಅಡ್ಡಬಂದಿದ್ದು, ಪೊಲೀಸರು ಮತ್ತು ಕಾರ್ಯಕರ್ತರ ನಡುವೆ ಮಾತಿನ ಚಕಮಕಿ, ನೂಕಾಟ ತಳ್ಳಾಟ ನಡೆಯಿತು. ಸಂತೋಷ್ ಬಂಧನ ಖಂಡಿಸಿ ನಗರ ಠಾಣೆ ಮುಂದೆ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಪೊಲೀಸರು ಠಾಣೆ ಪ್ರದೇಶದಲ್ಲಿ ಬಿಗಿ ಭದ್ರತೆ ಕೈಗೊಂಡಿದ್ದಾರೆ. ಸಂತೋಷ್ ಕೋಟ್ಯಾನ್ ಅವರು ಪ್ರತಿಭಟನೆಯಲ್ಲಿ ಮಾತನಾಡಿ, ರಾಜ್ಯದಲ್ಲಿ ಏನು ನಡೆದರೂ ಗೃಹಸಚಿವರಿಗೆ ಗೊತ್ತಿಲ್ಲ, ಗೊತ್ತಿಲ್ಲ. ಇದಕ್ಕಾಗಿಯೇ ಪರಮೇಶ್ವರ್ ಮಗ ಮಗಳಾಗಿ ಪರಿವರ್ತನೆ ಯಾಗಿದ್ದಾರೆ ಎಂದು ಹೇಳಿಕೆ ನೀಡಿದ್ದರು. ಈ ಹೇಳಿಕೆ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದರು.

ದೂರು ದಾಖಲಿಸಿದ್ದರು. ಪ್ರಸ್ತುತ ಸಂತೋಷ್ ಕೋಟ್ಯಾನ್ ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದ್ದು, ಚಿಕ್ಕಮಗಳೂರು ನಗರದಲ್ಲಿ ಪೊಲೀಸರು ಕಟ್ಟೆಚ್ಚರ ವಹಿಸಿದ್ದಾರೆ.

# ಭಗವಾನ್ ಬಿರ್ಸಾಮುಂಡಾರವರ 150ನೇ ಜನ್ಮ ವಾರ್ಷಿಕೋತ್ಸವ

**ಚಿಕ್ಕಮಗಳೂರು, ನ.14:** ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯ, ರಾಜ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಸಂಯುಕ್ತ ಆಶ್ರಯದಲ್ಲಿ ಜನಜಾತೀಯ ಗೌರವ ದಿನದ ಪ್ರಯುಕ್ತ ಭಗವಾನ್ ಬಿರ್ಸಾಮುಂಡಾರವರ 150ನೇ ಜನ್ಮ ವಾರ್ಷಿಕೋತ್ಸವ ಕಾರ್ಯಕ್ರಮ ನವೆಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ನಡೆಯಲಿದೆ.

ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಗೌರವ ಉಪಸ್ಥಿತಿಯಲ್ಲಿ ನಡೆಯಲಿರುವ ಈ ಕಾರ್ಯಕ್ರಮವನ್ನು ಮಾನ್ಯ ಇಂಧನ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಉದ್ಘಾಟಿಸುವರು. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸುವರು.

ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಡಾ.ಆರತಿ ಕೃಷ್ಣ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷೆ ಬಿ.ಶೀಲಾ ದಿನೇಶ್ ಪಾಲ್ಗೊಳ್ಳುವರು. ವಿಶೇಷ ಆಹ್ವಾನಿತರಾಗಿ ಜಿ.ಪಂ. ಆಡಳಿತಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಠಾರಿಯಾ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಿ.ರಂದೀಪ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ನಿರ್ದೇಶಕ ಟಿ.ಯೋಗೇಶ್ ಭಾಗವಹಿಸುವರು. ಭಗವಾನ್ ಬಿರ್ಸಾಮುಂಡಾರವರ ಕುರಿತು ನಗರದ ಐಡಿಎಸ್‌ಜಿ ಸರ್ಕಾರಿ ಪದವಿ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕ ಕೆ.ಜೆ.ವಸಂತಕುಮಾರ್ ವಿಶೇಷ ಉಪನ್ಯಾಸ ನೀಡುವರು. ಮೆರವಣಿಗೆ: ಕಾರ್ಯಕ್ರಮಕ್ಕೆ ಮುಂಚಿತವಾಗಿ ಬೆಳಿಗ್ಗೆ 9.30ಕ್ಕೆ ತಾಲ್ಲೂಕು ಕಚೇರಿಯಿಂದ ಎಂ.ಜಿ.ರಸ್ತೆ ಮಾರ್ಗವಾಗಿ ಕುವೆಂಪು ಕಲಾಮಂದಿರದವರೆಗೆ ಭಗವಾನ್ ಬಿರ್ಸಾಮುಂಡಾರವರ ಭಾವಚಿತ್ರ ಮತ್ತು ಕಲಾತಂಡಗಳು ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಮೆರವಣಿಗೆ ನಡೆಯಲಿದೆ.

# ವಸತಿ ಶಾಲೆಗೆ ಮೂಲಸೌಕರ್ಯ ಕಲ್ಪಿಸಲು ಒತ್ತಾಯಿಸಿ ದಸಂಸ ಮನವಿ



**ಚಿಕ್ಕಮಗಳೂರು:** ಬಿಳೇಕಲ್ಲಹಳ್ಳಿ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ ಮೂಲಭೂತ ಸೌಲಭ್ಯ ಕಲ್ಪಿಸುವ ಮೂಲಕ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಅನುವುಮಾಡಿಕೊಡಬೇಕು ಎಂದು ದಸಂಸ ಮುಖಂಡರುಗಳು ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ದಸಂಸ ಜಿಲ್ಲಾ ಸಂಚಾಲಕ ಕಬ್ಬಿಕೆರೆ ಮೋಹನ್‌ಕುಮಾರ್ ಪ್ರಸ್ತುತ ವಸತಿ ಶಾಲೆಯಲ್ಲಿ ಸುಮಾರು 250 ಕ್ಕೂ ಹೆಚ್ಚು ಮಕ್ಕಳಿದ್ದಾರೆ. ಆದರೆ ಶೌಚಾಲಯ ವ್ಯವಸ್ಥೆ, ಸ್ನಾನಕ್ಕೆ ಬಿಸಿನೀರಿನ ವ್ಯವಸ್ಥೆಯಿಲ್ಲದೆ ತಣ್ಣೀರಿನಿಂದಲೇ ಸ್ನಾನಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ವಿದ್ಯಾರ್ಥಿಗಳು ಬಟ್ಟೆ ತೊಳೆಯಲು, ತೊಟ್ಟಿಯಲ್ಲಿ ನೀರಿಲ್ಲದೆ ನರಳಾಡುವಂತಾಗಿದೆ. ಸರ್ಕಾರ ಎಸ್ಸಿ, ಎಸ್ಟಿ ಮತ್ತು ಓಬಿಸಿ ಜನಾಂಗಕ್ಕೆ ಸಾವಿರಾರು ಕೋಟಿ ರೂ. ಹಣ ಬಿಡುಗಡೆ ಮಾಡಿದ್ದರೂ ವಿದ್ಯಾರ್ಥಿಗಳಿಗೆ ಯಾವುದೇ ಸೌಲಭ್ಯ ಸಮರ್ಪಕವಾಗಿ ದೊರೆಯುತ್ತಿಲ್ಲ ಎಂದು ತಿಳಿಸಿದರು.

ಕೂಡಲೇ ಜಿಲ್ಲಾಡಳಿತ ವಸತಿ ಶಾಲೆಯ ಮೂಲಭೂತ ಸೌಲಭ್ಯಕ್ಕೆ ಮೊದಲ ಆದ್ಯತೆ ನೀಡಿ, ವಿದ್ಯಾರ್ಥಿಗಳ ಸಮಗ್ರ ವಿದ್ಯಾಭ್ಯಾಸಕ್ಕೆ ಅನುವು ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಘಟನಾ ಸಂಚಾಲಕಿ ಪ್ರತಿಭಾ, ದೇವರಾಜ್, ಮುಖಂಡರಾದ ಹರೀಶ್ ಹಾಜರಿದ್ದರು.

# ಜೆಪಿಕೆ ಇಂಡಸ್ಟ್ರೀಸ್ ಸ್ವಾವಲಂಬಿ ಬದುಕಿಗೆ ನೆರವಾಗಿದೆ : ಸಿ.ಟಿ ರವಿ



**ಚಿಕ್ಕಮಗಳೂರು:** ಬಡತನ ಮುಕ್ತ, ನಿರುದ್ಯೋಗ ಮುಕ್ತ ಸ್ವಾವಲಂಬಿ-ಸ್ವಾಭಿಮಾನಿ, ಆತ್ಮನಿರ್ಭರ ಭಾರತವಾಗಬೇಕೆಂಬುದು ಪ್ರಧಾನಿ ನರೇಂದ್ರ ಮೋದಿಯವರ ಕನಸಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಹೇಳಿದರು.

ಅವರು ಇಂದು ನಗರದ ಆರ್‌ಜಿ ರಸ್ತೆಯಲ್ಲಿರುವ ಜೋಳ್‌ದಾಳ್ ನಿಲಯದ ಆವರಣದಲ್ಲಿ "ಜೆಪಿಕೆ ಇಂಡಸ್ಟ್ರೀಸ್" ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.


ಜೆಪಿಕೆ ಇಂಡಸ್ಟ್ರೀಸ್‌ನಲ್ಲಿ ಆಧುನಿಕ ತಂತ್ರಜ್ಞಾನದ ಬಳಕೆಯ ಜೊತೆಗೆ ತರಬೇತಿ ನೀಡಿ ಉದ್ಯೋಗ ನೀಡಲು ಯೋಜನೆ ರೂಪಿಸಲಾಗಿದ್ದು, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ನೆರವಾಗುತ್ತದೆ. ಪ್ರತಿಯೊಬ್ಬ ಭಾರತೀಯನೂ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಚಿಂತನೆ ನಡೆದಿರುವ ಈ ಸಂದರ್ಭದಲ್ಲಿ ಇದು ಯಶಸ್ವಿಯಾದರೆ ಆತ್ಮನಿರ್ಭರ ಭಾರತ ಆಗಲು ಸಾಧ್ಯ ಎಂದರು.

ಜೆಪಿಕೆ ಇಂಡಸ್ಟ್ರೀಸ್ ಸಾವಿರಾರು ಯುವಕರಿಗೆ ಉದ್ಯೋಗ ನೀಡುವ ಉದ್ದಿಮೆಯಾಗಿ ಬೆಳೆಯಲಿ, ಜಿಲ್ಲೆಯ ನಿರುದ್ಯೋಗ ಸಮಸ್ಯೆಗೆ ಪರಿಹಾರ ರೂಪಿಸುವ ಕಾರ್ಯ ಮಾಡಲಿ ಎಂದು ಶುಭ ಹಾರೈಸಿದರು.

ಆಶಾಕಿರಣ ಚಾರಿಟಬಲ್ ಟ್ರಸ್ಟ್‌ನ ಮುಖ್ಯ ಟ್ರಸ್ಟಿ ಡಾ. ಜೆ.ಪಿ ಕೃಷ್ಣೇಗೌಡ ಮಾತನಾಡಿ, ಜಿಲ್ಲೆಯಲ್ಲಿ ಈ ರೀತಿಯ ಇಂಡಸ್ಟ್ರೀಸ್ ಇಲ್ಲ, ಆದಿಚುಂಚನಗಿರಿ ಪೀಠದ ಪರಮಪೂಜ್ಯ ಶ್ರೀಶ್ರೀಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿಗಳು ಉದ್ಘಾಟಿಸಿ ಎಲ್ಲರಿಗೂ ಶುಭವಾಗಲಿ ಎಂದು ಆಶೀರ್ವದಿಸಿದ್ದಾರೆ ಎಂದರು.

ಜೆಪಿಕೆ ಇಂಡಸ್ಟ್ರೀಸ್ ನನ್ನ ಪುತ್ರಿಯ ಕನಸಾಗಿತ್ತು, ನೂರು ಜನ ಸಂದರ್ಶನಕ್ಕೆ ಹಾಜರಾಗಿದ್ದರು. ಈಗ 15 ಜನರಿಗೆ ಉದ್ಯೋಗ ನೀಡಿದ್ದೇವೆ. ಅಗತ್ಯವಿದ್ದರೆ ಮುಂದೆ ನೋಡಿಕೊಂಡು ವಿಸ್ತರಿಸುತ್ತೇವೆ.

# ಮಾಜಿ ಸಚಿವ ಗೋವಿಂದೇಗೌಡರ ಮನೆಯಲ್ಲಿ ಕಳವು ಮಾಡಿ ಪರಾರಿಯಾಗಲು ಬಳಸಿದ್ದ ಕಾರುಗಳಲ್ಲಿ ನಗ-ನಗದು ಪತ್ತೆ



**ಚಿಕ್ಕಮಗಳೂರು:** ಹಲವು ತಿಂಗಳ ಹಿಂದೆ ಜಿಲ್ಲೆಯ ಕೊಪ್ಪದಲ್ಲಿ ಮಾಜಿ ಶಿಕ್ಷಣ ಸಚಿವ ದಿ. ಗೋವಿಂದೇಗೌಡರ ಮನೆಯಲ್ಲಿ ನೇಪಾಳಿ ಗ್ಯಾಂಗ್ ಕಳ್ಳತನ ಮಾಡಿಕೊಂಡು ಎಸ್ಕೇಪ್ ಆಗಲು ಬಳಸಿದ್ದ ಕಾರುಗಳಲ್ಲಿ ನಗ, ನಗದು ಪತ್ತೆಯಾಗಿದೆ.

ಕಳೆದ ಹಲವು ತಿಂಗಳ ಹಿಂದೆ ದಿವಂಗತ ಮಾಜಿ ಸಚಿವ ಗೋವಿಂದೇಗೌಡರ ಮನೆಯಲ್ಲಿ ಕೆಲಸಕ್ಕೆ ಸೇರಿಕೊಂಡಿದ್ದ ದಂಪತಿಗಳಿಬ್ಬರು ತಮ್ಮ ಸಹವರ್ತಿಗಳೊಂದಿಗೆ ಸೇರಿಕೊಂಡು ಕುಟುಂಬದವರು ಮನೆಯಲ್ಲಿಲ್ಲದ ವೇಳೆಯಲ್ಲಿ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ, ನಗದು ದೋಚಿಕೊಂಡು ಪರಾರಿಯಾಗಿದ್ದರು. ತಕ್ಷಣ ಕಾರ್ಯಪ್ರವೃತ್ತರಾದ ಜಿಲ್ಲೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಕ್ಷಿಪ್ರಕಾರ್ಯಾಚರಣೆ ನಡೆಸಿ ಮಹಾರಾಷ್ಟ್ರದ ಸಾಂಗ್ಲಿ ಪೊಲೀಸರ ನೆರವು ಪಡೆದು ನೇಪಾಳಿ ಗ್ಯಾಂಗನ್ನು ಬಂಧಿಸಿದ್ದರು. ಈ ವೇಳೆ ಆರೋಪಿಗಳು ಎಸ್ಕೇಪ್ ಆಗಲು ಬಳಸಿದ್ದ ಕಾರನ್ನು ವಶಕ್ಕೆ ಪಡೆಯಲಾಗಿತ್ತು. ಈ ಕಾರು ತಿಂಗಳಾನುಗಟ್ಟಲೆ ಕೊಪ್ಪ ಪೊಲೀಸ್ ಠಾಣೆಯ ಎದುರು ನಿಲ್ಲಿಸಲಾಗಿತ್ತು.

ಈ ಪ್ರಕರಣದಲ್ಲಿ ಪೊಲೀಸರು ವಶಕ್ಕೆ ಪಡೆದಿದ್ದ ಕಾರುಗಳನ್ನು ಇತ್ತೀಚೆಗೆ ನ್ಯಾಯಾಲಯ ಕಾರನ್ನ ಬಿಡುಗಡೆಗೊಳಿಸುವಂತೆ ಆದೇಶಿಸಿದೆ. ಈ ಹಿನ್ನಲೆ ಕಾರಗಳನ್ನು ಪರಿಶೀಲಿಸುವಾಗ ಹಣ, ಚಿನ್ನ ಮತ್ತು ಬೆಳ್ಳಿ ಪತ್ತೆಯಾಗಿದೆ. ಬಿಡುಗಡೆ ಮಾಡುವ ಮುನ್ನ ಶೋಧಕಾರ್ಯ ನಡೆಸಿದ ಸಂದರ್ಭದಲ್ಲಿ 595.5 ಗ್ರಾಂ ತೂಕವುಳ್ಳ ಚಿನ್ನಾಭರಣ & 589 ಗ್ರಾಂ ತೂಕದ ಬೆಳ್ಳಿ ವಸ್ತುಗಳು ಹಾಗೂ 3,41,150 ರೂ ನಗದು ಹಣ ದೊರಕಿದ್ದು ವಶಕ್ಕೆ ಪಡೆದು ಕಾನೂನು ಜರುಗಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ ಅಮಟೆ ತಿಳಿಸಿದ್ದಾರೆ.




# 'ಪ್ರತಿ ಗಂಧರ್ವ' ಕಾಲವನ್ನು ಮೀರಿ ಮೂಡಿ ಬಂದ ರಂಗ ಸಂಸ್ಕೃತಿ

ಮರಾಠಿ ನೆಲದಲ್ಲಿ ಕನ್ನಡದ ಅಸ್ಮಿತೆಯನ್ನು ಸಾರಿದ ಮುಸ್ಲಿಂ ರಂಗ ಕಲಾವಿದೆ ಗೋಹರ್ ಬಾಯಿಯ ತಲ್ಲಣಗಳ ಅಭಿವ್ಯಕ್ತಿಯೇ ಈ ನಾಟಕ. ಶತಮಾನಗಳು ಉರುಳಿದ ಮೇಲೂ ಅದನ್ನು ರಸವತ್ತಾಗಿ ನಾಟಕದ ರೂಪದಲ್ಲಿ ನಗರದ ಪ್ರೇಕ್ಷಕರಿಗೆ ಉಚಿತವಾಗಿ ಪ್ರದರ್ಶಿಸಲು 'ವೃತ್ತಿ ರಂಗಭೂಮಿ ರಂಗಾಯಣ' ಸಜ್ಜಾಗಿದೆ. ಈ ನಾಟಕ ಕೇವಲ ಪ್ರೇಮಕಥೆಯುಳ್ಳ ರಂಗಪ್ರಯೋಗವಲ್ಲ; ಇದು ಭಾರತೀಯ ಸಂಸ್ಕೃತಿಯ ಸೌಹಾರ್ದದ ಘೋಷಣೆಯಾಗಿದೆ. ಮರಾಠಿ ಮತ್ತು ಕನ್ನಡ ಸಂಸ್ಕೃತಿಗಳ ಸಂಗಮ, ಹಿಂದೂ ಮತ್ತು ಮುಸ್ಲಿಂ ಹೃದಯಗಳ ಮೈತ್ರಿ, ಸಂಗೀತ ಮತ್ತು ಭಾವನಾತ್ಮಕ ಪ್ರಜ್ಞೆಯ ಪಾವಿತ್ರ್ಯ ಇವೆಲ್ಲವೂ 'ಪ್ರತಿ ಗಂಧರ್ವ' ನಾಟಕದ ಆಧಾರಸ್ತಂಭಗಳಾಗಿವೆ.

ಮರಾಠಿ ಮೂಲದ ಸಾಂಗಲಿ ಜಿಲ್ಲೆಯ ನಾಗಠಾಣದಲ್ಲಿ ಜನಿಸಿ ರಂಗಭೂಮಿ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಮಹತ್ತರ ಸಾಧನೆ ಮಾಡಿದ ಬಾಲಗಂಧರ್ವ (1888?1967) ಅವರ ಜೀವನಾಧಾರಿತ ನಾಟಕದೊಳಗಿನ ನಾಟಕದ ಪ್ರತಿರೂಪವೇ 'ಪ್ರತಿ ಗಂಧರ್ವ'. ನಾಟಕವು ಸಂಗೀತ, ನೃತ್ಯ, ಸಂಭಾಷಣೆ ಮತ್ತು ದೃಶ್ಯಸೃಷ್ಟಿಯ ಸಂಯೋಜನೆಯಾಗಿ ಪ್ರೇಕ್ಷಕರನ್ನು ಶತಮಾನ ಹಿಂದಿನ ರಂಗಭೂಮಿಯ ಕಾವ್ಯಮಯ ಲೋಕ-ಕ್ಕೆ ಕರೆದೊಯ್ಯುತ್ತದೆ. ಬಾಲಗಂಧರ್ವರ ಕೀರ್ತಿಗೆ ಮತ್ತು ಗೋಹರ್ ಬಾಯಿಯ ಧೈರ್ಯಕ್ಕೆ ಈ ನಾಟಕ ಜೀವಂತ ಸ್ಮಾರಕವಾಗಿದೆ.

ಪ್ರೊಫೆಸರ್ ರಹಮತ್ ತರೀಕೆರೆ ಅವರ 'ಅಮೀರ್ ಬಾಯಿ ಕರ್ನಾಟಕಿ' ಪುಸ್ತಕದ ಪ್ರೇರಣೆಯಿಂದ ರಚಿಸಲಾದ ಸಂಗೀತ ಪ್ರಧಾನ ನಾಟಕ ಇದಾಗಿದೆ. ಕನ್ನಡ ಮತ್ತು ಮರಾಠಿ ಭಾಷೆಗಳ ಬಾಂಧವ್ಯವನ್ನು ಬಂಧುರಗೊಳಿಸಿದ ಬಹುಮುಖ ಪ್ರಜ್ಞೆಯ ಕೀರ್ತಿಯು ಅಂದಿನ ನಾಟಕ ಕಂಪನಿಗಳ ನಾಟ್ಯ, ಸಂಗೀತ ಮಂಡಳಿಗಳಿಗೆ ಸಲ್ಲುತ್ತದೆ.

ಆ ಕಾಲದ ನಾಟಕ ಕಂಪನಿಗಳು ಲೋಕಮೀಮಾಂಸೆಯ ಜನತಾ ವಿಶ್ವವಿದ್ಯಾಲಯಗಳಂತೆಯೇ ಇದ್ದವು. ಅದನ್ನು ಮೀರಿಸಿ ಕೋಮು ಸೌಹಾರ್ದ ಸಂಸ್ಕೃತಿಯ ಪ್ರತೀಕದಂತೆ ಅಪರೂಪದ ಹಿಂದೂ-ಮುಸ್ಲಿಂ ಪ್ರೀತಿಯ ಗಂಧರ್ವ ವಿವಾಹವೇ 'ಪ್ರತಿ ಗಂಧರ್ವ'. ಅದನ್ನು ಆಗ ಆಗುಮಾಡಿದವರು ಮರಾಠಿಯ ಬ್ರಾಹ್ಮಣ ಬಾಲಗಂಧರ್ವ ಹಾಗೂ 'ಪ್ರತಿ ಗಂಧರ್ವ'ಳಂತೆ ಪ್ರಸಿದ್ಧಳಾದ ಕನ್ನಡದ ಗೋಹರ್ ಜಾನ್ (1910?1965) ಎಂಬ ಮುಸ್ಲಿಂ ಮಹಿಳೆ. ಈ ಇಬ್ಬರ ಸಂಗಮವೇ ಮರೆಯಲಾಗದ ಸ್ವರಾಲಾಪ ಪರಿ. ಈ ನಾಟಕದ ಮೂಲಕ ರಂಗಾಯಣವು "ಭಾಷೆ ಬೇರೆ, ಭಾವನೆ ಒಂದೇ" ಎಂಬ ಸಂದೇಶವನ್ನು ಸಾರುತ್ತಿದ್ದು, ಸಾಂಸ್ಕೃತಿಕ ಏಕತೆ, ಧಾರ್ಮಿಕ ಸಹಿಷ್ಣುತೆ ಮತ್ತು ಮಹಿಳಾ ಸೃಜನಶೀಲತೆಯ ಗೌರವವನ್ನು ಬಿಂಬಿಸುತ್ತದೆ. ಮರಾಠಿ ಮೂಲದ ಬ್ರಾಹ್ಮಣ ಬಾಲಗಂಧರ್ವ ಹಾಗೂ ಕನ್ನಡ ನೆಲದ ಮುಸ್ಲಿಂ ಗೋಹರ್ ಬಾಯಿ ಇಬ್ಬರೂ ಒಂದಾಗಿ ರಂಗಸಂಗೀತದ ಗಂಧರ್ವ ಶೈಲಿಯ ಹಾಡುಗಾರಿಕೆಯನ್ನು ದೇಶಕ್ಕೆ ಪರಿಚಯಿಸಿದ ಪರಿ ಅಪ್ರತಿಮವಾದದ್ದು. ಈ ನಾಟಕದಲ್ಲಿ ಗೋಹರ್ ಬಾಯಿ ಮತ್ತು ಬಾಲಗಂಧರ್ವರ ಜೀವನದ ರಾಗ, ರಸ, ತಾಳಗಳ ಸಂಗಮದ ಮೂಲಕ, ಸಂಗೀತದ ಮರ್ಮವನ್ನು ಸಮಾಜದ ಮಿತಿಗಳನ್ನು ಮೀರಿ ತೋರಿಸಲಾಗುತ್ತದೆ. ಪ್ರೀತಿ, ಕಲೆ, ಭಕ್ತಿ, ನಂಬಿಕೆ ಮತ್ತು ಮಾನವೀಯತೆಯ ಒಳಸಂಚುಗಳು ರಂಗಭೂಮಿಯ ಬೆಳಕಿನಲ್ಲಿ ಹೊಸ ಅರ್ಥವನ್ನು ಪಡೆಯುತ್ತವೆ.

ಎರಡು ಭಿನ್ನ ಜಾತಿ, ಭಿನ್ನ ಧರ್ಮ, ಭಿನ್ನ ರಾಜ್ಯಗಳ ಈ ಇಬ್ಬರು ಗಂಧರ್ವರು ಒಂದಾಗಿ ತೀವ್ರತೆಪೂರ್ಣ ರಂಗಸಂಗೀತ ಮಹಾತ್ಮ್ಯವುಳ್ಳ 'ಗಂಧರ್ವ ಶೈಲಿ'ಯ ಹಾಡುಗಾರಿಕೆಯನ್ನು ದೇಶಕ್ಕೆ ಪರಿಚಯಿಸಿದರು. ಜತೆಯಾಗಿ ಸೂಫಿ ಸಂಗೀತದ 'ಮೆಹಫಿಲ್' ಕಛೇರಿಗಳಿಗೆ ಹೊಸ ಆಯಾಮ ಕಲ್ಪಿಸಿದರು. ಭಜನ, ಅಭಂಗ, ಗಝಲ್, ರಂಗಗೀತೆ, ಲೋಕಸಂಗೀತಗಳ ಅಮೋಘ ಅನುಸಂಧಾನವು 'ಗಂಧರ್ವ' ಸೆಳೆತದ ಆನುಷಂಗಿಕ ಫಲಶ್ರುತಿ ಎಂದೇ ಹೇಳಬಹುದು. ತನ್ಮೂಲಕ ಹಾಡು, ನಟನೆ ಜೋಡಿಯೊಂದು ಭಾರತೀಯ ಸಂಗೀತ ಲೋಕದಲ್ಲಿ ಗುರುತರ ಹೆಜ್ಜೆಗುರುತುಗಳನ್ನು ಮೂಡಿಸಿ ಸಾಂಸ್ಕೃತಿಕ ಪವಾಡ ಸೃಷ್ಟಿಸಿತು.

ಇದರೊಂದಿಗೆ ಸೂಫಿ ಸಂಗೀತದ 'ಮೆಹಫಿಲ್' ಕಛೇರಿಗಳಿಗೆ ಹೊಸ ಸ್ಪರ್ಶ ನೀಡಿದರು. ಅವರ ಪ್ರೀತಿಯ ತೊಳಲಾಟ, ಸಾಮಾಜಿಕ ನಿಂದನೆಗಳು ಹಾಗೂ ಧಾರ್ಮಿಕ ಭಾವನೆಗಳನ್ನು ಬಿಗಿಗೊಳಿಸುವ ಕಥಾವಸ್ತು ಇದರಲ್ಲಿ ಒಳಗೊಂಡಿದೆ. ಇದರಲ್ಲಿ ಕಲಾತ್ಮಕವಾಗಿ ಮೂಡಿಸಿರುವ ವಸ್ತ್ರಾಲಂಕಾರ, ಬೆಳಕು-ಛಾಯಾ ವಿನ್ಯಾಸ, ಜೀವಂತ ಸಂಗೀತ ಹಾಗೂ ಭಾವಭರಿತ ಅಭಿನಯಗಳು ಪ್ರೇಕ್ಷಕರ ಮನಸ್ಸನ್ನು ಸ್ಪರ್ಶಿಸುವಂತಿವೆ. ರಂಗಾಯಣದ ಈ ಪ್ರದರ್ಶನ ಕೇವಲ ಕಲಾಪ್ರಯೋಗವಲ್ಲ, ಅದು ಸಾಂಸ್ಕೃತಿಕ ಸಂವಾದವೂ ಹೌದು. ವೃತ್ತಿ ರಂಗಾಯಣದ ನಿರ್ದೇಶಕರಾದ ಮಲ್ಲಿಕಾರ್ಜುನ ಕಡಕೋಳ ಅವರ ನೇತೃತ್ವದಲ್ಲಿ ಮಾಲತೇಶ ಬಡಿಗೇರ್ ನಿರ್ದೇಶನ ಮಾಡಿದ್ದು, ರವಿ ಮುರೂರು ಅವರ ಸಂಗೀತವಿದೆ. ಈ ನಾಟಕಕ್ಕೆ ಛಾಯಾ ಭಾರ್ಗವಿ ಅವರು ವಸ್ತ್ರ ವಿನ್ಯಾಸದ ಹೊಣೆ ಹೊತ್ತಿದ್ದಾರೆ. ವೃತ್ತಿ ರಂಗಾಯಣವು ಡಾ. ರಾಜಪ್ಪ ದಳವಾಯಿ ರಚನೆಯ ಈ 'ಪ್ರತಿ ಗಂಧರ್ವ' ನಾಟಕಕ್ಕಾಗಿ ಕಲಾವಿದರ ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಿ, ಕೇವಲ 15 ಅಭ್ಯರ್ಥಿಗಳನ್ನು ಆಯ್ಕೆಮಾಡಿ ಅವರಿಗೆ ತರಬೇತಿ ನೀಡಿರುವುದು ವಿಶೇಷ. ದಾವಣಗೆರೆ ಮಾತ್ರವಲ್ಲದೆ ರಾಜ್ಯದ ವಿವಿಧ ಭಾಗಗಳಿಂದ ಕಲಾವಿದರನ್ನು ಆಯ್ಕೆಮಾಡಿ ತರಬೇತಿ ನೀಡಲಾಗಿದೆ.

ಅಂತಿಮವಾಗಿ, 'ಪ್ರತಿ ಗಂಧರ್ವ' ಕೇವಲ ಇಬ್ಬರ ಕಥೆಯಲ್ಲ ಅದು ಭಾರತೀಯ ರಂಗಸಂಸ್ಕೃತಿಯ ಉಸಿರಾಟ. ಅಲ್ಲಿ ಪ್ರೀತಿ ಧರ್ಮವನ್ನು ಮೀರುತ್ತದೆ, ಸಂಗೀತ ಮನುಷ್ಯರನ್ನು ಒಗ್ಗೂಡಿಸುತ್ತದೆ, ಮತ್ತು ಕಲೆ ಮಾನವೀಯತೆಯ ಅಂತಿಮ ರೂಪವಾಗಿ ಪ್ರತ್ಯಕ್ಷವಾಗುತ್ತದೆ. ಇಂತಹ ಅಮೂಲ್ಯ ದೃಶ್ಯಕಾವ್ಯವನ್ನು 'ಪ್ರತಿ ಗಂಧರ್ವ' ಎಂಬ ಹೆಸರಿನಲ್ಲಿ ಇಲ್ಲಿನ ದೃಶ್ಯಕಲಾ ಮಹಾವಿದ್ಯಾಲಯದ ಬಯಲು ರಂಗಮಂದಿರದಲ್ಲಿ ನವೆಂಬರ್ 15 ರಂದು ಶನಿವಾರ ಸಂಜೆ 6ರಿಂದ 8ರವರೆಗೆ ಬಣ್ಣಬಣ್ಣದ ಬೆಳಕಿನಲ್ಲಿ ಅದ್ದೂರಿಯಾಗಿ ಪ್ರದರ್ಶಿಸಲಾಗುತ್ತದೆ. ಪ್ರದರ್ಶನವು ಉಚಿತವಾಗಿದೆ.

**-ಪಾಪು ಗುರು**

# ಬೀದಿ ನಾಯಿಗಳ ಉಪಟಳ ತಡೆಗೆ ನಗರಸಭೆ ಕ್ರಮ

**ಚಿಕ್ಕಮಗಳೂರು, ನ.14:** ನಗರ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಆವರಣದಲ್ಲಿ ಬೀದಿ ನಾಯಿಗಳು ವಾಸವಿದ್ದಲ್ಲಿ ಪರಿಶೀಲಿಸಿ ಕೂಡಲೇ ಅವುಗಳನ್ನು ಎಣಿಸಿ ನಗರಸಭೆಗೆ ಮಾಹಿತಿ ನೀಡುವಂತೆ ಪೌರಾಯುಕ್ತರು ತಿಳಿಸಿದ್ದಾರೆ. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ 5/2025 ರಲ್ಲಿ ನೀಡಿರುವ ನಿರ್ದೇಶನದಂತೆ ಈ ಸೂಚನೆ ನೀಡಲಾಗಿದೆ. ಯಾವುದೇ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರವೇಶ ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಲಾಗಿದೆ. ನಗರಸಭೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕಾರ ನೀಡುವಂತೆ ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ಆಯಾ ಸಂಸ್ಥೆಗಳ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವಂತೆ ಸೂಚಿಸಲಾಗಿದೆ.

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದಲ್ಲಿ ನ್ಯಾಯಾಲಯದ ಆದೇಶದಂತೆ ಆಯಾ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**